ಸಂಪುಟ: 21, ಸಂಚಿಕೆ: 209, ಪುಟಗಳು: 8, ಬುಧವಾರ, 8 ಮೇ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ನೀವು ಒಬ್ಬರೇ ಇದ್ದಾಗ ಆಲೋಚನೆಗಳ ಮೇಲೆ ನಿಗಾ ಇರಲಿ. ಗುಂಪಿನಲ್ಲಿ ಇದ್ದಾಗ ಮಾತುಗಳ ಮೇಲೆ ನಿಗಾ ಇರಲಿ.

● ಅನಾಮಿಕ

### ಪಂಚಾಂಗ

(ಬುಧವಾರ 8, ಮೇ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಕೃಷ್ಣ ಪಕ್ಷ,
- ವಾರ: ಬುಧವಾರ, ತಿಥಿ: ಅಮಾವಾಸ್ಯೆ
- ನಕ್ಷತ್ರ: ಭರಣಿ
- ರಾಹುಕಾಲ: 12:20 ರಿಂದ 1:55
- ಗುಳಿಕಕಾಲ: 10:45 ರಿಂದ 12:20
- ಯಮಗಂಡಕಾಲ: 7:35 ರಿಂದ 9:10

## ಬಿಜೆಪಿ ಪೋಸ್ಟ್ ತೆಗೆದು ಹಾಕುವಂತೆ ಎಕ್ಸ್‌ಗೆ ನೋಟಿಸ್




**ಬೆಂಗಳೂರು:** ಕರ್ನಾಟಕ ಬಿಜೆಪಿ ಪೋಸ್ಟ್ ಮಾಡಿರುವ ಆಕ್ಷೇಪಾರ್ಹ ಅನಿಮೇಟೆಡ್ ವಿಡಿಯೋ ತೆಗೆದು ಹಾಕುವಂತೆ ಚುನಾವಣಾ ಆಯೋಗವು ಸೋಶಿಯಲ್ ಮೀಡಿಯಾ ವೇದಿಕೆ ''ಎಕ್ಸ್''ಗೆ ನೋಟಿಸ್ ನೀಡಿದೆ. ಮುಸ್ಲಿಮರು, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿಯಾಗಿಸಿಕೊಂಡು ಹಾಕಿರುವ ಪೋಸ್ಟ್ ತೆಗೆದುಹಾಕುವಂತೆ ಹೇಳಲಾಗಿದೆ. ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರ ಹಿಂದುಳಿದ ವರ್ಗಗಳ ವೆಚ್ಚದಲ್ಲಿ ಮುಸ್ಲಿಮರನ್ನು ಕಾಂಗ್ರೆಸ್ ಓಲೈಸುತ್ತಿದೆ ಎಂದು ಬಿಂಬಿಸುವಂಥ ವಿಡಿಯೋವನ್ನು ಕರ್ನಾಟಕ ಬಿಜೆಪಿ ಪೋಸ್ಟ್ ಮಾಡಿತ್ತು. ಇದನ್ನು ತೆಗೆದುಹಾಕಲು ಎಕ್ಸ್‌ಗೆ ನೋಟಿಸ್‌ನಲ್ಲಿ ಸೂಚನೆ ನೀಡಲಾಗಿದೆ.

ಮಾಹಿತಿ ತಂತ್ರಜ್ಞಾನ ಕಾಯಿದೆ 2000 ರ ಅಡಿಯಲ್ಲಿ ನೇಮಕಗೊಂಡ ಚುನಾವಣಾ ಆಯೋಗದ ನೋಡಲ್ ಅಧಿಕಾರಿ ಎಕ್ಸ್‌ಗೆ ಪತ್ರ ಬರೆದು, ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟಿನ ಉಲ್ಲಂಘನೆಯಾಗಿದೆ. ''ತಕ್ಷಣ'' ಆ ಪೋಸ್ಟ್ ತೆಗೆದು ಹಾಕಬೇಕೆಂದು ಹೇಳಿದ್ದಾರೆ.

**ಚುನಾವಣಾಧಿಕಾರಿ ನೀಡಿದ ನೋಟಿಸ್‌ನಲ್ಲಿ ಏನಿದೆ?:** ಆಕ್ಷೇಪಾರ್ಹ ವಿಡಿಯೋ ಡಿಲೀಟ್ ಮಾಡುವಂತೆ ಈಗಾಗಲೇ ಬಿಜೆಪಿ ಸೋಶಿಯಲ್ ಮೀಡಿಯಾ ಹ್ಯಾಂಡಲ್‌ಗೆ ತಿಳಿಸಲಾಗಿದ್ದರೂ ಪೋಸ್ಟ್ ಅನ್ನು ಡಿಲೀಟ್ ಮಾಡಿಲ್ಲ. ಈ ವಿಷಯದಲ್ಲಿ ಈಗಾಗಲೇ ಎಫ್‌ಐಆರ್ ದಾಖಲಿಸಲಾಗಿದೆ. ಇದೀಗ ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಎಕ್ಸ್‌ಗೆ ಪತ್ರ ಬರೆದು ''ಆಕ್ಷೇಪಾರ್ಹ ಪೋಸ್ಟ್'' ಅನ್ನು ತೆಗೆದುಹಾಕಲು ನಿರ್ದೇಶಿಸಿದ್ದಾರೆ.

ಪುಟ 2

ತಪ್ಪಿನ ಅರಿವಾಗಿದೆ, ಭಾರತಕ್ಕೆ ಮಾಲ್ಡೀವ್ಸ್ ವಿದೇಶಾಂಗ ಸಚಿವ ಭೇಟಿ

## ಭಾರತವಿಲ್ಲದೆ ನಮ್ಮ ಆರ್ಥಿಕತೆ ನಡೆಯಲು ಸಾಧ್ಯವಿಲ್ಲ



**ನವದೆಹಲಿ:** ಉಪ್ಪು ತಿಂದ ಮೇಲೆ ನೀರು ಕುಡಿಯಲೇಬೇಕು, ಮಾಲ್ಡೀವ್ಸ್ ಸ್ಥಿತಿ ಕೂಡ ಈಗ ಅದೇ ರೀತಿಯಾಗಿದೆ. ಚೀನಾದ ಕೈಯಲ್ಲಿ ಗೊಂಬೆಯಂತೆ ಕುಣಿದ ಮಾಲ್ಡೀವ್ಸ್ ಇದೀಗ ಆರ್ಥಿಕ ಸಂಕಷ್ಟ ಎದುರಿಸುತ್ತಿದೆ. ಭಾರತ ವಿರುದ್ಧ ಹೇಳಿಕೆಯನ್ನು ನೀಡಿ ಮಾಲ್ಡೀವ್ಸ್ ಕೈ ಸುಟ್ಟುಕೊಂಡಿದೆ. ಇದೀಗ ತನ್ನ ತಪ್ಪಿನ ಅರಿವು ಮಾಲ್ಡೀವ್ಸ್ ಗೊತ್ತಾಗಿದೆ. ಭಾರತವಿಲ್ಲದೆ ತನ್ನ ಆರ್ಥಿಕತೆ ನಡೆಯಲು ಸಾಧ್ಯವಿಲ್ಲ ಎಂದು ಮಾಲ್ಡೀವ್ಸ್ ತಿಳಿದಿದೆ. ಭಾರತೀಯರ ಹೆಚ್ಚಾಗಿ ಪ್ರವಾಸ ಮಾಡುತ್ತಿದ್ದ ಮಾಲ್ಡೀವ್ಸ್‌ಗೆ ಈಗ ಪ್ರವಾಸಿಗರೇ ಇಲ್ಲದಂತಾಗಿದೆ. ಪ್ರಧಾನಿ ಮೋದಿ ಹಾಗೂ ಭಾರತ ವಿರುದ್ಧ ನೀಡಿದ ಒಂದು ಹೇಳಿಕೆ, ಮಾಲ್ಡೀವ್ಸ್ ನ ಆರ್ಥಿಕತೆಯನ್ನೇ ತಲೆಕೆಳಗೆ ಮಾಡಿದೆ. ಇದೀಗ ಈ ನಷ್ಟವನ್ನು ತುಂಬಲು ಹಾಗೂ ತನ್ನ ಆರ್ಥಿಕತೆಯನ್ನು ಬಳಸಪಡಿಸಲು ಭಾರತದ ಅಗತ್ಯವಿದೆ ಎಂದು ಭಾರತದ ಜತೆಗೆ ಮಾತುಕತೆ ನಡೆಸಲು ಮಾಲ್ಡೀವ್ಸ್ ಮುಂದಾಗಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಕಾನೂನುಬಾಹಿರ ಚಟುವಟಿಕೆ; ಒಂದೇ ತಿಂಗಳಲ್ಲಿ 563 ಮಂದಿ ಬಂಧನ



**ಬೆಂಗಳೂರು:** ಏಪ್ರಿಲ್‌ನಲ್ಲಿ ಬೆಂಗಳೂರು ಪೊಲೀಸರು ಮಾದಕ ದ್ರವ್ಯ, ಜೂಜು, ಬೆಟ್ಟಿಂಗ್ ಸೇರಿದಂತೆ ವಿವಿಧ ಕಾನೂನುಬಾಹಿರ ಚಟುವಟಿಕೆಗಳಿಗೆ ಸಂಬಂಧಿಸಿದಂತೆ 563 ಜನರನ್ನು ಬಂಧಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ತಿಂಗಳಿನಲ್ಲಿ ಒಟ್ಟು 182 ಪ್ರಕರಣಗಳು ದಾಖಲಾಗಿದ್ದು, ಅತಿ ಹೆಚ್ಚು (48) ಜೂಜಾಟಕ್ಕೆ ಸಂಬಂಧಿಸಿದ್ದಾಗಿವೆ. ನಂತರದ ಸ್ಥಾನದಲ್ಲಿ ಮಾದಕ ದ್ರವ್ಯಗಳ ನಿಷೇಧ ಕಾಯ್ದೆಯಡಿ ದಾಖಲಿಸಿದ ಪ್ರಕರಣಗಳು (41), ಮತ್ತು ಕ್ರಿಕೆಟ್ ಬೆಟ್ಟಿಂಗ್ (25) ಪ್ರಕರಣಗಳು ಸೇರಿವೆ.

ಪುಟ 2

### ಮಂಗಳೂರು–ಉಡುಪಿಯಲ್ಲಿ ನೀರಿನ ಪಡಿತರ ಆರಂಭ



**ಮಂಗಳೂರು:** ಈ ಬಾರಿ ಜಿಲ್ಲೆಯ ನಗರ ಪ್ರದೇಶದ ಜೊತೆಗೆ ಗ್ರಾಮೀಣ ಪ್ರದೇಶದಲ್ಲೂ ಕುಡಿಯುವ ನೀರಿನ ಬವಣೆ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಪಶ್ಚಿಮ ಘಟ್ಟದ ತಪ್ಪಲಿನಲ್ಲಿರುವ ವನ್ಯಜೀವಿಗಳು ಕೂಡ ಕುಡಿಯಲು ನೀರಿಲ್ಲದೆ ಹಾಹಾಕಾರ ಎದುರಿಸುವ ಸ್ಥಿತಿ ನಿರ್ಮಾಣವಾಗಿದೆ. ಆದರೆ ಸಿದ್ದಾಪುರ ವನ್ಯಜೀವಿ ವಿಭಾಗದ ಅಧಿಕಾರಿಗಳ ಮುಂದಾಲೋಚನೆ ಈ ಬಾರಿ ವನ್ಯಜೀವಿಗಳಿಗೆ ನೀರುಣಿಸುವಂತೆ ಮಾಡುತ್ತಿದೆ.

ಪುಟ 2

## ಅಶ್ಲೀಲ ವಿಡಿಯೋ ಪ್ರಕರಣದ ತನಿಖೆ ಸಿಬಿಐಗೆ ವಹಿಸಲು

# ಬಿಜೆಪಿ, ಜೆಡಿಎಸ್ ಆಗ್ರಹ

**ಬೆಂಗಳೂರು:** ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣ ತನಿಖೆಯನ್ನು ಸಿಬಿಐಗೆ ವಹಿಸಬೇಕೆಂದು ಜೆಡಿಎಸ್ ಮತ್ತು ಬಿಜೆಪಿ ಆಗ್ರಹಿಸಿವೆ. ರಾಜ್ಯ ಸರ್ಕಾರ ರಚಿಸಿರುವ ಎಸ್ ಐಟಿಯ ಬಗ್ಗೆ ನಂಬಿಕೆ ಇಲ್ಲ ಎಂದು ಈಗಾಗಲೇ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್ ಡಿ ಕುಮಾರಸ್ವಾಮಿ, ಹಾಸನದ ಬಿಜೆಪಿ ನಾಯಕ ದೇವರಾಜೇಗೌಡ ಹೇಳಿದ್ದಾರೆ. ಅಲ್ಲದೆ, ಅಗತ್ಯಬಿದ್ದಲ್ಲಿ ಕೋರ್ಟ್ ಮೊರೆ ಹೋಗುತ್ತೇವೆ ಎಂದೂ ಹೇಳಿದ್ದಾರೆ. ಈ ಮಧ್ಯೆ, ಕುಮಾರಸ್ವಾಮಿ ದೆಹಲಿಗೆ ತೆರಳಿ ಹೋರಾಟ ನಡೆಸಲೂ ಮುಂದಾಗಿದ್ದಾರೆ.

ಪ್ರಕರಣವನ್ನ ಗಂಭೀರವಾಗಿ ಪರಿಗಣಿಸಿರುವ ಕುಮಾರಸ್ವಾಮಿ, ಪೆನ್ ಡ್ರೈವ್ ಮೂಲಕ ವಿಡಿಯೋ ವೈರಲ್ ಮಾಡಿದವರ ವಿರುದ್ಧ ಕಾನೂನು ಹೋರಾಟಕ್ಕೆ ಯೋಜನೆ ರೂಪಿಸುತ್ತಿದ್ದಾರೆ. ದೆಹಲಿ ಮಟ್ಟದಲ್ಲಿ ಹೋರಾಟಕ್ಕೆ ಯೋಜನೆ ರೂಪಿಸಿತ್ತಿರುವ ಅವರು, ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲು ನಿರ್ಧರಿಸಿದ್ದಾರೆ. ಪೆನ್ ಡ್ರೈವ್ ಪ್ರಕರಣದ ಹಿಂದೆ ಕಾಂಗ್ರೆಸ್ ಪ್ರಭಾವಿ ನಾಯಕರ ಕೈವಾಡದ ಬಗ್ಗೆ ಆರೋಪ ಮಾಡುತ್ತಿರುವ ಕುಮಾರಸ್ವಾಮಿ, ಈ ಬಗ್ಗೆ ಶೀಘ್ರದಲ್ಲೇ ದೆಹಲಿಗೆ ತೆರಳಿ ಸುದ್ದಿಗೋಷ್ಠಿ ಮಾಡುವ ಸಾಧ್ಯತೆ ಇದೆ.

ಕುಮಾರಸ್ವಾಮಿ ಈಗಾಗಲೇ ಪೆನ್ ಡ್ರೈವ್ ಪ್ರಕರಣದ ಹಿಂದಿರುವವರ ದಾಖಲೆಗಳು, ಆಡಿಯೋ ಮತ್ತು ವಿಡಿಯೋ ಸಂಗ್ರಹ ಮಾಡಿದ್ದಾರೆ. ಬಿಜೆಪಿ ಹೈಕಮಾಂಡ್ ನಾಯಕರ ಭೇಟಿಯಾಗಿ ಚರ್ಚೆ ನಡೆಸಿ ಮುಂದಿನ ಹೋರಾಟಕ್ಕೆ ತಂತ್ರ ರೂಪಿಸಲಿದ್ದಾರೆ. ಈ ಮೂಲಕ ಕಾಂಗ್ರೆಸ್ ನ ಮಹಾನ್ ನಾಯಕನ ವಿರುದ್ಧ ದೆಹಲಿ ಮಟ್ಟದಲ್ಲಿ ಬೃಹತ್ ಹೋರಾಟಕ್ಕೆ ಮುಂದಾಗಿದ್ದಾರೆ.

ಪುಟ 2



### ಎಚ್‌ಡಿ ರೇವಣ್ಣಗೆ ಎದೆನೋವು, ಹೊಟ್ಟೆ ಉರಿ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲು!

**ಬೆಂಗಳೂರು:** ಪ್ರಜ್ವಲ್ ರೇವಣ್ಣ ಕೇಸ್‌ನ ಸಂತ್ರಸ್ತ ಮಹಿಳೆಯೊಬ್ಬರ ಕಿಡ್ನಾಪ್ ಆರೋಪ ಹೊತ್ತಿರುವ ಮಾಜಿ ಸಚಿವ ಎಚ್‌ಡಿ ರೇವಣ್ಣರನ್ನು ಈಗಾಗಲೇ ಎಸ್‌ಐಟಿ ತನಿಖಾ ತಂಡ ಬಂಧಿಸಿ ವಿಚಾರಣೆ ನಡೆಸುತ್ತಿತ್ತು. ಬಂಧನ ಆದಾಗಿನಿಂದ ಎಚ್.ಡಿ ರೇವಣ್ಣ ಒಂದಲ್ಲ ಒಂದು ಆರೋಗ್ಯ ಸಮಸ್ಯೆಯ ಕಾರಣದಿಂದ ಆಸ್ಪತ್ರೆಗೆ ಹೋಗುತ್ತಲೇ ಇದ್ದಾರೆ. ಈ ಮಧ್ಯೆ ಇದೀಗ ಮತ್ತೆ ಎಚ್ ಡಿ ರೇವಣ್ಣ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಅಡ್ಮಿಟ್ ಆಗಿದ್ದಾರೆ. ಎದೆನೋವು ಹಾಗೂ ಹೊಟ್ಟೆ ಉರಿ ಹೆಚ್ಚಾದ ಹಿನ್ನಲೆ ಅಡ್ಮಿಟ್ ಮಾಡಬೇಕೆಂದು ವೈದ್ಯರು ಸೂಚನೆ ನೀಡಿದ್ದಾರೆ.



ಪುಟ 2

## ಕೋಮುಲ್‌ನಲ್ಲಿ ನೇಮಕಾತಿ ಹಗರಣ ಶಾಸಕ ನಂಜೇಗೌಡ ಸೇರಿ ಪ್ರಭಾವಿ ನಾಯಕರ ವಿರುದ್ಧ ತನಿಖೆಗೆ ಪತ್ರ

**ಬೆಂಗಳೂರು:** ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದಲ್ಲಿ ನೇಮಕಾತಿ ಹಗರಣ ನಡೆದಿದ್ದು, 75ಕ್ಕೆ 75 ನೇಮಕಾತಿಯಲ್ಲೂ ಮೋಸ ಮಾಡಿರುವುದು ಸಾಬೀತಾಗಿದೆ.

ಕಾಂಗ್ರೆಸ್ ಶಾಸಕ ನಂಜೇಗೌಡ ವಿರುದ್ಧ ಆರೋಪ ಇದ್ದ ಹಿನ್ನೆಲೆ ತನಿಖೆ ಮಾಡಿದ ಇ.ಡಿ ಅಧಿಕಾರಿಗಳು ಲೋಕಾಯುಕ್ತಕ್ಕೆ ವರದಿ ರವಾನಿಸಿದ್ದಾರೆ. ಇ.ಡಿ ಅಧಿಕಾರಿಗಳು 75 ಅಭ್ಯರ್ಥಿಗಳ ಹೇಳಿಕೆ ದಾಖಲಿಸಿಕೊಂಡಿದ್ದು, ನೇಮಕಾತಿಗಾಗಿ ಹಣ ನೀಡಿರುವ ಬಗ್ಗೆ ಅಭ್ಯರ್ಥಿಗಳು ತಪ್ಪೊಪ್ಪಿಕೊಂಡಿದ್ದಾರೆ. ಈ ಹಿನ್ನೆಲೆ ಇ.ಡಿ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿಯಲ್ಲಿ ತನಿಖೆ ಮಾಡುವಂತೆ ಲೋಕಾಯುಕ್ತಕ್ಕೆ ಪತ್ರ ಬರೆದಿದೆ.



ಶಾಸಕ ನಂಜೇಗೌಡ ಸೇರಿ ಪ್ರಭಾವಿ ನಾಯಕರ ವಿರುದ್ಧ ತನಿಖೆಗೆ ಪತ್ರ ಬರೆಯಲಾಗಿದೆ. ನೇಮಕಾತಿ ಪರೀಕ್ಷೆಯನ್ನು ಮಂಗಳೂರು ವಿವಿಯ ಅಧಿಕಾರಿಗಳು ನಡೆಸಿದ್ದರು.

ಪುಟ 2

### ಚಿಕ್ಕಮಗಳೂರಿನ ರೆಸಾರ್ಟ್‌ನಲ್ಲಿ ಡಿಕೆ ಸಹೋದರರ ವಾಸ್ತವ್ಯ!

**ಚಿಕ್ಕಮಗಳೂರು:** ರಾಜ್ಯದಲ್ಲಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಹೆಚ್ .ಡಿ.ರೇವಣ್ಣ ವಿರುದ್ಧ ಲೌಂಗಿಕ ದೌರ್ಜನ್ಯ ಪ್ರಕರಣ ಭಾರೀ ಸದ್ದು ಮಾಡುತ್ತಿದೆ. ಈ ಪ್ರಕರಣದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರ ಮೇಲೂ ಸಾಲು ಸಾಲು ಆರೋಪಗಳನ್ನು ಮಾಡಲಾಗುತ್ತಿದೆ. ಇನ್ನು ಮತ್ತೊಂದೆಡೆ ಲೋಕಸಭಾ ಚುನಾವಣೆಯ ಮತದಾನ ಮುಗಿದ ಹಿನ್ನೆಲೆ ಎಲ್ಲಾ ಜಂಜಾಟಗಳನ್ನು ತೊರೆದು ಡಿಕೆ ಶಿವಕುಮಾರ್ ಚಿಕ್ಕಮಗಳೂರಿನ ರೆಸಾರ್ಟ್ ನಲ್ಲಿ ವಾಸ್ತವ್ಯ ಹೂಡಿದ್ದಾರೆ.



ಪುಟ 2

### ಹಾಸನದಲ್ಲಿ ರೌಡಿಶೀಟರ್ ಬರ್ಬರ ಹತ್ಯೆ ಕೇಸ್ 9 ಮಂದಿಗೆ ಜೀವಾವಧಿ ಶಿಕ್ಷೆ



**ಹಾಸನ:** ಹಾಡಹಗಲೇ ರೌಡಿಶೀಟರ್ ಬರ್ಬರ ಹತ್ಯೆ ಪ್ರಕರಣದ 9 ಆರೋಪಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿ ಚನ್ನರಾಯಪಟ್ಟಣ ಹೆಚ್ಚುವರಿ ಅಪರ ಸತ್ರ ನ್ಯಾಯಾಲಯ ಆದೇಶ ಹೊರಡಿಸಿದೆ.

ನಟೋರಿಯಸ್ ರೌಡಿ ಯಾಚೇನಹಳ್ಳಿ ಚೇತು ಸೇರಿ 9 ಜನರಿಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಕೊಲೆ ನಡೆದು ಹತ್ತೇ ತಿಂಗಳಲ್ಲಿ ವಿಚಾರಣೆ ಮುಗಿಸಿ ನ್ಯಾಯಾಲಯ ತೀರ್ಪು ಪ್ರಕಟಿಸಿದೆ.

2023 ರ ಜುಲೈ 4 ರಂದು ಚನ್ನರಾಯಪಟ್ಟಣದ ಮುಖ್ಯ ರಸ್ತೆಯಲ್ಲಿ ರೌಡಿಶೀಟರ್ ಮಾಸ್ತಿಗೌಡ ಎಂಬಾತನನ್ನು ಆರೋಪಿಗಳು ಹತ್ಯೆಗೈದಿದ್ದರು. ಗುಲ್ಬರ್ಗಾ ಜೈಲಲ್ಲಿ ಇದ್ದುಕೊಂಡೇ ಮಾಸ್ತಿಗೌಡ ಎಂಬಾತನನ್ನು ಯಾಚೇನಹಳ್ಳಿ ಚೇತು ಕೊಲೆ ಮಾಡಿಸಿದ್ದ.

ಪುಟ 2

## ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ಜತೆ ಕಾರ್ತಿಕ್ ಫೋಟೊ ವೈರಲ್

**ಬೆಂಗಳೂರು:** ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪೆನ್ ಡ್ರೈವ್ ಪ್ರಕರಣ ದಿನಕ್ಕೊಂದು ತಿರುವು ಪಡೆಯುತ್ತಿದೆ. ಇದೀಗ ಪ್ರಕರಣಕ್ಕೆ ದೊಡ್ಡ ತಿರುವು ದೊರೆತಿದ್ದು, ರೇವಣ್ಣ ಕುಟುಂಬದ ಮಾಜಿ ಕಾರು ಚಾಲಕ ಕಾರ್ತಿಕ್ ಹಾಸನ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ಜತೆಗಿರುವ ಫೋಟೊ ವೈರಲ್ ಆಗುತ್ತಿದೆ. ಪುಟ್ಟರಾಜ್ ಮನೆಯಲ್ಲಿ ಕಾರ್ತಿಕ್ ಮತ್ತು ಶ್ರೇಯಸ್ ಪಟೇಲ್ ಊಟ ಮಾಡಿದ್ದಾರೆ ಎನ್ನಲಾದ ಫೋಟೋ ವೈರಲ್ ಆಗುತ್ತಿದೆ.

ಕಾರ್ತಿಕ್ ಪರಿಚಯವೇ ಇಲ್ಲ, ಆದರೆ ಒಮ್ಮೆ ಮಾತ್ರ ಭೇಟಿಯಾಗಿದ್ದ ಎಂದು ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಈ ಹಿಂದೆ ಹೇಳಿದ್ದರು. ಆದರೆ ಈಗ ಕಾರ್ತಿಕ್, ಶ್ರೇಯಸ್, ಪುಟ್ಟರಾಜು ಜತೆಗೆ ಇರುವ ಫೋಟೋಗಳು ವೈರಲ್ ಆಗಿವೆ.





ಡಿಸಿಎಂ ಡಿಕೆ ಶಿವಕುಮಾರ್ ಗೆ ಪೆನ್‌ಡ್ರೈವ್ ತಲುಪಿಸಿದ್ದು ಪುಟ್ಟರಾಜು ಎಂಬ ಆರೋಪವಿದೆ. ಈ ಬಗ್ಗೆ ಬಿಜೆಪಿ ಮುಖಂಡ ದೇವರಾಜೇಗೌಡ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದ್ದರು. ಇದೀಗ ಫೋಟೋವನ್ನು ಜೆಡಿಎಸ್ ಕಾರ್ಯಕರ್ತರು ವೈರಲ್ ಮಾಡಿದ್ದಾರೆ ಎನ್ನಲಾಗಿದೆ.

ಈ ಮಧ್ಯೆ, ಪ್ರಜ್ವಲ್ ರೇವಣ್ಣ ಲೈಂಗಿಂಕ ಕಿರುಕುಳ ಪ್ರಕರಣದಲ್ಲಿ ಸೋರಿಕೆಯಾಗಿರುವ ವಿಡಿಯೋದಲ್ಲಿ ಕಾಣಿಸಿರುವ ಸಂತ್ರಸ್ತೆರನ್ನು ಅಧಿಕಾರಿಗಳು ಗುರುತಿಸಿದ್ದಾರೆ. ಈಗಾಗಲೇ 9ಜನ ಸಂತ್ರಸ್ತೆಯರನ್ನು ಪತ್ತೆ ಹಚ್ಚರುವ ಎಸ್ ಐಟಿ, ಹೇಳಿಕೆ ದಾಖಲು ಮಾಡಿದೆ.

ಇಬ್ಬರು ಸರ್ಕಾರಿ ಅಧಿಕಾರಿಗಳು ಸೇರಿದಂತೆ 9 ಜನರನ್ನು ಎಸ್ ಐಟಿ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಿದ್ದು, ಹೇಳಿಕೆಗಳನ್ನು ದಾಖಲು ಮಾಡಿದ್ದಾರೆ.

### ಬೆಂಗಳೂರು ವಿಮಾನ ನಿಲ್ದಾಣಕ್ಕೆ ಬಾಂಬ್ ಬೆದರಿಕೆ

## ಎಫ್‌ಐಆರ್ ದಾಖಲು

**ಬೆಂಗಳೂರು:** ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 1 ಮತ್ತು ಕೆಲವು ವಿಮಾನಗಳಲ್ಲಿ ಬಾಂಬ್ ಇರಿಸಲಾಗಿದೆ ಎಂದು ಹುಸಿ ಬಾಂಬ್ ಬೆದರಿಕೆ ಬಂದಿದ್ದು, ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಬಾಂಬ್ ಬೆದರಿಕೆ ಕಳಸಿದ್ದ ಅಪರಿಚಿತ ವ್ಯಕ್ತಿಯ ವಿರುದ್ಧ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ಮ್ಯಾನೇಜರ್ ದೂರು ದಾಖಲಿಸಿದ್ದಾರೆ. ಅಪರಿಚಿತ ಆರೋಪಿ ವಿರುದ್ಧ ಮೇ 2 ರಂದು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಟರ್ಮಿನಲ್ 1ಡಿ ಮ್ಯಾನೇಜರ್ ಗೀತಾ ರಾಣಿ ಅವರು ಮೇ 2 ರಂದು ದೂರು ದಾಖಲಿಸಿದ್ದು. ಏಪ್ರಿಲ್ 29 ರಂದು ಬೆಳಿಗ್ಗೆ ವಿಮಾನ ನಿಲ್ದಾಣದ ಮೇಲ್ ಐಡಿಗೆ, 209.85.218.54 ಐಪಿ ವಿಳಾಸದೊಂದಿಗೆ 666darktriad666@gmail.com ಇಮೇಲ್ ವಿಳಾಸದಿಂದ `Terrorzers111' ಗುಂಪಿನಿಂದ ಬಾಂಬ್ ಬೆದರಿಕೆ ಮೇಲ್ ಬಂದಿದೆ ಎಂದು ದೂರಿನಲ್ಲಿ ದಾಖಲಿಸಿದ್ದಾರೆ.




'ವಿಮಾನದಲ್ಲಿ ಟೈಂ ಬಾಂಬ್ ಇಡಲಾಗಿದೆ. ಯಾವುದೇ ಸಮಯದಲ್ಲಿ ಸ್ಫೋಟಗೊಳ್ಳಬಹುದು. ಜೊತೆಗೆ, ಗುಂಪಿನಿಂದ ಟರ್ಮಿನಲ್ 1 ರ ಒಳಗೆ ವಿವಿಧ ಸ್ಥಳಗಳಲ್ಲಿ ಸ್ಫೋಟಕ ವಸ್ತುಗಳನ್ನು ಇರಿಸಲಾಗಿದೆ' ಅಂತ ಮೇಲ್ ಬಂದಿದೆ ಎಂದು ವಿಮಾನ ನಿಲ್ದಾಣ ಸಿಬ್ಬಂದಿ ತಿಳಿಸಿದರು.

ವಿಮಾನ ನಿಲ್ದಾಣ ಸಿಬ್ಬಂದಿಯ ದೂರಿನ ಆಧಾರದ ಮೇಲೆ, ಪೊಲೀಸರು ಅಪರಿಚಿತ ವ್ಯಕ್ತಿಯ ವಿರುದ್ಧ ಐಪಿಸಿ ಸೆಕ್ಷನ್‌ಗಳು 501 (1) (ಬಿ), ಸೆಕ್ಷನ್ 507 ಅಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಮಂಗಳೂರು ವಿಮಾನ ನಿಲ್ದಾಣಕ್ಕೂ ಅದೇ ದಿನ (ಏಪ್ರಿಲ್ 29) ಬಾಂಬ್ ಬೆದರಿಕೆ ಮೇಲ್ ಬಂದಿತ್ತು. ಅಲ್ಲದೆ ದೇಶದ ಇತರ ಕೆಲವು ಖಾಸಗಿ ವಿಮಾನ ನಿಲ್ದಾಣಗಳಿಗೂ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದಿತ್ತು. ದೆಹಲಿ ಮತ್ತು ಎನ್‌ಸಿಆರ್‌ನ ಶಾಲೆಗಳಿಗೆ ಮೇ 1 ರಂದು ಇದೇ ರೀತಿಯ ಬೆದರಿಕೆಗಳು ಬಂದಿದ್ದರೇ, ಅಹಮದಾಬಾದ್‌ನ ಶಾಲೆಗಳಿಗೆ ಸೋಮವಾರ (ಮೇ 6) ಬೆದರಿಕೆ ಸಂದೇಶ ಬಂದಿತ್ತು.

### ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಹೇಳಿಕೆ

# ನೇರ ನುಡಿಯಲ್ಲೇ ನಿಷ್ಠೂರವಾದಿಯಾಗಿದ್ದ ಶ್ರೀನಿವಾಸ್ ಪ್ರಸಾದ್

**ಮೈಸೂರು:** ಸಂಸದರಾಗಿದ್ದ ಶ್ರೀನಿವಾಸ್ ಪ್ರಸಾದ್ ಯಾವುದೇ ಪಕ್ಷದಲ್ಲಿ ಇದ್ದರೂ ತಾನು ನಂಬಿದ ತತ್ವ ಸಿದ್ಧಾಂತಗಳಲ್ಲಿ ಎಂದು ರಾಜಿ ಮಾಡಿಕೊಳ್ಳದ ಅಪರೂಪದ ವ್ಯಕ್ತಿತ್ವ ಹೊಂದು ನೇರ ನುಡಿಯಲ್ಲೇ ನಿಷ್ಠೂರವಾದಿಯಾಗಿದ್ದ ರಾಜಕಾರಣಿಯಾಗಿದ್ದರು ಎಂದು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಹೇಳಿದರು.

ನಗರದ ಚಾಮುಂಡಿಪುರಂನಲ್ಲಿರುವ ತಗಡೂರು ರಾಮಚಂದ್ರರಾವ್ ಉದ್ಯಾನವನದಲ್ಲಿ ಹಿರಿಯ ರಾಜಕಾರಣಿ ಸಂಸದರಾದ ವಿ ಶ್ರೀನಿವಾಸ್ ಪ್ರಸಾದ್ ಸಂತಾಪ ಸಭೆಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಅಪರೂಪದ ರಾಜಕಾರಣಿಯಲ್ಲಿ ಇವರು ಒಬ್ಬರು, ಇಂತಹ ವ್ಯಕ್ತಿತ್ವ ಸಿಗುವುದು ಬಹಳ ಅಪರೂಪದಲ್ಲಿ ಅಪರೂಪ, ಇವರು ಜಾತಿಗೆ ಸೀಮಿತ ರಲ್ಲ ಎಲ್ಲಾ ಜಾತಿಯ ರವರನ್ನು ಪ್ರೀತಿಸುತ್ತಾ ಎಲ್ಲಾ ಜಾತಿಯವರನ್ನು ಸಹ ಬೆಳೆಸಿದ್ದಾರೆ, ಇತರ ರಾಜಕಾರಣಿಗಳಿಗೆ ಪ್ರಸಾದ್ ರವರೇ ಮಾದರಿ ಎಂದು ಹೇಳಿದರು. ನಂತರ ಮಾತನಾಡಿದ ಜೀವದಾರರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ನಿಷ್ಕಳಂಕ ರಾಜಕಾರಣಿ, ಅಪ್ಪಟ ಹೋರಾಟಗಾರ, ಸಂಸದರಾದ ವಿ.ಶ್ರೀನಿವಾಸಪ್ರಸಾದ್ ಅವರ ಅಗಲಿಕೆ ರಾಜಕೀಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡಿದೆ. ಮೈಸೂರು ಭಾಗದಲ್ಲಿ ದೀನ ದಲಿತರ, ಬಡವರ ಆಶಾಕಿರಣವಾಗಿದ್ದ ಅವರು ತಮ್ಮ ರಾಜಕೀಯ ಜೀವ ನದುದ್ದಕ್ಕೂ ತುಳಿತಕ್ಕೊಳಗಾದವರ ಶ್ರೇಯೋಭಿವೃದ್ಧಿಗಾಗಿ ಅವಿರತವಾಗಿ ಶ್ರಮಿಸುತ್ತಿದ್ದರು. ಅವರ ಆತ್ಮಕ್ಕೆ ದೇವರು ಶಾಂತಿ ನೀಡಲಿ ಎಂದು ಪ್ರಾರ್ಥಿಸುತ್ತೇವೆ

ನಗರ ಪಾಲಿಕೆ ಮಾಜಿ ಸದಸ್ಯ ಸುನಿಲ್, ಕೆಪಿಸಿಸಿ ಸದಸ್ಯರಾದ ನಜರ್ಬಾದ್ ನಟರಾಜ್, ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ ಬಸಪ್ಪ, ಕೃಷ್ಣರಾಜ ಯುವ ಬಳಗದ ಅಧ್ಯಕ್ಷ ನವೀನ್ ಕೆಂಪಿ, ಬ್ರಾಡ್ ವೇ ಕಿರಣ್, ವಿನಯ್ ಕಣಗಾಲ್, ಗೌರಿಶಂಕರ್ ನಗರದ ಶಿವು, ಪುರುಷೋತ್ತಮ್, ಅರಿವು ಸಂಸ್ಥೆ ಅಧ್ಯಕ್ಷ ಶ್ರೀಕಾಂತ್ ಕಶ್ಯಪ್, ಎಸ್ ಎನ್.ರಾಜೇಶ್, ವರುಣ ಮಹದೇವ್, ಚಕ್ರಪಾಣಿ ಇನ್ನಿತರರು ಸಭೆಯಲ್ಲಿ ಭಾಗಿಯಾಗಿದ್ದರು



## ಬಿಟ್ ಕಾಯಿನ್ ಕಳವು ಕೇಸ್‌ನಲ್ಲಿ ಶ್ರೀಕಿ ಅರೆಸ್ಟ್

**ಬೆಂಗಳೂರು:** ಬಿಟ್ ಕಾಯಿನ್ ಕಳವು ಕೇಸ್ ನಲ್ಲಿ ಶ್ರೀ ಕೃಷ್ಣ ಅಲಿಯಾಸ್ ಶ್ರೀಕಿಯನ್ನು ಬಂಧಿಸಲಾಗಿದೆ. 2017ರಲ್ಲಿ ತುಮಕೂರಿನ ಹೊಸ ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. 1 ಕೋಟಿ 14 ಲಕ್ಷ ರೂಪಾಯಿ ಮೌಲ್ಯದ 60.6 ಬಿಟ್ ಕಾಯಿನ್ ಕಳವು ಮಾಡಲಾಗಿತ್ತು. ಶ್ರೀಕಿ ಲ್ಯಾಪ್ಟಾಪ್ ಪರಿಶೀಲಿಸಿದಾಗ ಬಿಟ್ ಕಾಯಿನ್ ಕಳವು ಮಾಡಿರುವುದು ದೃಢಪಟ್ಟಿತ್ತು.



ಯುನೋ ಕಾಯಿನ್ ಟೆಕ್ನಾಲಜೀಸ್ ಪ್ರೈ.ಲಿ. ಗ್ರಾಹಕರಿಗೆ ಸೇರಿದ ಬಿಟ್ ಕಾಯಿನ್ ಗಳನ್ನು ಕಳವು ಮಾಡಿರುವುದು ಮೇಲ್ನೋಟಕ್ಕೆ ದೃಢಪಟ್ಟ ಹಿನ್ನೆಲೆಯಲ್ಲಿ ಶ್ರೀಕಿಯನ್ನು ಬಂಧಿಸಲಾಗಿದೆ. ಬೆಂಗಳೂರಿನ ಬಳ್ಳಾರಿ ರಸ್ತೆಯ ಖಾಸಗಿ ಹೋಟೆಲ್ ನಲ್ಲಿ ಇಂದು ಬೆಳಗ್ಗೆ ಶ್ರೀಕೃಷ್ಣನನ್ನು ಪೊಲೀಸರು ಬಂಧಿಸಿದ್ದಾರೆ

## ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಪುಟ್ಟಸಿದ್ದಶೆಟ್ಟಿ ಸ್ಪರ್ಧೆ

**ಮೈಸೂರು:** ದಕ್ಷಿಣ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿಯಾಗಿ ತಾವು ಸ್ಪರ್ಧಿಸಿದ್ದು ಮತದಾರರು ತಮ್ಮಗೆ ಪ್ರಾಶಸ್ತ್ಯ ಮತ ಚುನಾಯಿಸಬೇಕೆಂದು ರಾಜ್ಯ ಕಾಯಕ ಸಮಾಜಗಳ ಒಕ್ಕೂಟದ ರಾಜ್ಯಾಧ್ಯಕ್ಷ ಮತ್ತು ಮಾಜಿ ಎಂಎಲ್‌ಸಿಯೂ ಆದ ಕೆ.ಸಿ.ಪುಟ್ಟಸಿದ್ದಶೆಟ್ಟಿ ಮನವಿ ಮಾಡಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಭಾಗದಲ್ಲಿ ಕಳೆದ 24 ವರ್ಷಗಳಿಂದ ಆಯ್ಕೆಯಾಗಿರುವ ಮರಿತಿಬ್ಬೇಗೌಡರು ಶಿಕ್ಷಕರ ಸಮಸ್ಯೆ ಬಗೆಹರಿಸಲು ಗಮನ ಹರಿಸಲಿಲ್ಲ. ತಮ್ಮನ್ನು ಭೇಟಿ ಮಾಡಲು ಬಂದವರೊಡನೆ ಸೌಜನ್ಯದಿಂದ ನಡೆದುಕೊಂಡಿಲ್ಲ. ಹೀಗಾಗಿ ಇವರ ವೈಫಲ್ಯ ತಮಗೆ ನೆರವಾಗಲಿದೆ ಎಂದರು. ಮರಿತಿಬ್ಬೇಗೌಡ ಅವರು ಗೆಲ್ಲಲು ನಾನು ಸಾಕಷ್ಟು ಸಹಕಾರ ನೀಡಿದ್ದು ಈ ಬಾರಿ ಅವರು ನನಗೆ ಅವಕಾಶ ನೀಡಬೇಕು. ಗುತ್ತಿಗೆ ಆಧಾರದ ಮೇಲೆ ಕಾಯಂಗೊಂಡಿರುವ ಅರೆ ಶಿಕ್ಷಕರಿಗೆ ವೇತನ ಬಡ್ತಿ ದೊರೆತಿಲ್ಲ. ಒಪಿಎಸ್ ಜಾರಿಗೊಂಡಿಲ್ಲ. ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆ. ಶಿಕ್ಷಣ ಇಲಾಖೆ ಕಟ್ಟಡ ದುರಸ್ತಿಯಾಗಿಲ್ಲ. ಹೀಗಾಗಿ ಈ ರೀತಿಯ ಸಮಸ್ಯೆಗಳನ್ನು ಬಗೆಹರಿಸಲು ತಾವು ಶ್ರಮಿಸುವುದಾಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಕೆಂಪಶೆಟ್ಟಿ, ಶಿವರಾಜಪ್ಪ, ವಾಸುದೇವಮೂರ್ತಿ ಉಪಸ್ಥಿತರಿದ್ದರು.



# ಬೇಸಿಗೆ ಕಾಲದಲ್ಲಿ ರೇಷ್ಮೆ ಹುಳು ಸಾಕಾಣಿಕೆ, ಬೆಳೆ ನಿರ್ವಹಣೆ

**ಕೋಲಾರ:** ಬೇಸಿಗೆ ಕಾಲದಲ್ಲಿ ಉಷ್ಣಾಂಶ ಹೆಚ್ಚಿದ್ದು, ತೇವಾಂಶ ಕಡಿಮೆಯಾಗುವ ಕಾರಣ ರೇಷ್ಮೆ ಹುಳು ಸಾಕಾಣಿಕೆಯಲ್ಲಿ ಏರುಪೇರಾಗಿ ಹುಳುಗಳು ಹಾಲು ಮತ್ತು ಸಪ್ಪೆ ರೋಗಕ್ಕೆ ತುತ್ತಾಗುವ ಸಂಭವವಿರುತ್ತದೆ. ಆದ್ದರಿಂದ ಬೇಸಿಗೆ ಕಾಲದಲ್ಲಿ ರೇಷ್ಮೆ ಕೃಷಿಕರು ಬೆಳೆ ಸಂರಕ್ಷಣೆ ಮಾಡಲು ಮುಂಜಾಗ್ರತೆ ಕ್ರಮಗಳನ್ನು ಅನುಸರಿಸಬೇಕು.

ರೇಷ್ಮೆ ಹುಳು ಸಾಕಾಣಿಕೆ ಮನೆಯ ಸುತ್ತಲೂ ಗೋಡೆಗಳ ಮೇಲೆ ಬಿಸಿಲು ಬೀಳದಂತೆ ತೆಂಗಿನ ಗರಿಯಿಂದ ಚಪ್ಪರ ಹಾಕಬೇಕು. ಅದರಲ್ಲೂ ದಕ್ಷಿಣ ಮತ್ತು ಪಶ್ಚಿಮದ ಗೋಡೆಗಳಿಗೆ ಬಿಸಿಲು ಬೀಳದಂತೆ ಎಚ್ಚರವಹಿಸಿ ಚಪ್ಪರ ಹಾಕಿ ಹಾಗೂ ಕಿಟಕಿಗಳಿಗೆ ಗೋಣಿತಾಟುಗಳನ್ನು ಹಾಕಿ ಆಗಿಂದಾಗ್ಗೆ ನೀರಿನಿಂದ ನೆನೆಸಬೇಕು.

ರೇಷ್ಮೆ ಹುಳು ಸಾಕಾಣಿಕೆ ಮನೆಯ ಮೇಲ್ಛಾವಣಿ ಬಿಸಿಲಿನಿಂದ ಕಾಯದಂತೆ ಶೇಡ್‌ನೆಟ್‌ಗಳನ್ನು ಹೊದಿಸಬೇಕು. ರೇಷ್ಮೆ ಹುಳು ಸಾಕಾಣಿಕೆ ಮನೆಯ ಮೇಲ್ಛಾವಣಿ ಆರ್.ಸಿ.ಸಿ. ಆಗಿದ್ದರೆ ತುಂತುರು ನೀರಾವರಿ ಮೂಲಕ ಬೆಳಿಗ್ಗೆ 11-30 ರಿಂದ 12-00 ಗಂಟೆಗೆಗೊಮ್ಮೆ ಮತ್ತು ಸಂಜೆ 4-00 ರಿಂದ 5-00 ಗಂಟೆಗೆಗೊಮ್ಮೆ ನೀರು ಹಾಯಿಸಬೇಕು. ಆರ್.ಸಿ.ಸಿ. ಮನೆಗಳ ಮೇಲ್ಛಾವಣಿಗೆ ಹುಳು ಸಾಕಾಣಿಕೆ ಕೂಲ್ ಸಮ್ ಬಳಿಯಬೇಕು. ಇದರಿಂದ ಮೇಲ್ಛಾವಣಿ ಬಿಸಿಲಿಗೆ ಕಾಯುವುದಿಲ್ಲ ಹಾಗೂ ಇದರಿಂದ 3-4 ಸೆ. ಉಷ್ಣಾಂಶ ಕಡಿಮೆಯಾಗುತ್ತದೆ.

ಹುಳು ಸಾಕಾಣಿಕೆ ಹಿಪ್ಪುನೇರಳೆ ಸೊಪ್ಪನ್ನು ತಂಪು ಹೊತ್ತಿನಲ್ಲಿ ತರಬೇಕು ಹಾಗೂ ಬೆಳಿಗ್ಗೆ ಮತ್ತು ರಾತ್ರಿ ವೇಳೆಯಲ್ಲಿ ಹುಳುಗಳಿಗೆಕೊಡಬೇಕು. ಒಂದು ಸೊಪ್ಪಿನ ಪ್ರಮಾಣವನ್ನು ಎರಡು ಭಾಗಮಾಡಿ 11-00ಗಂಟೆಗೆ ಮತ್ತು ಮದ್ಯಾಹ್ನ 4-00 ಗಂಟೆಗೆಗೊಮ್ಮೆ ಸೊಪ್ಪನ್ನು ತೆಳುವಾಗಿ ನೀಡವುದು. ಕಟಾವು ಮಾಡಿದ ಸೊಪ್ಪನ್ನು ತೇವಾಂಶ ಆರದಂತೆ ಸೊಪ್ಪನ್ನು ಗೋಣಿತಾಟಿನಿಂದ ಮುಚ್ಚಿ ನೀರನ್ನು ಸಿಂಪರಣೆ ಮಾಡಬೇಕು. ಹುಳು ಸಾಕಾಣಿಕೆ ಮನೆಯ ಒಳಗಡೆ ಮಣ್ಣಿನ ಮಡಕೆಯಲ್ಲಿ ನೀರು ತುಂಬಿಸಿ ನೇತುಹಾಕಿ ಇದರಿಂದ ತೇವಾಂಶ ಹೆಚ್ಚುಮಾಡಬಹುದು. ಹುಳು ಸಾಕಾಣಿಕಾ ಮನೆಯ ಒಳಗಡೆ ಗೋಣಿ ತಾಟುಗಳನ್ನು ನೆಲದ ಮೇಲೆ ಹರಡಿ ನೀರನ್ನು ಚುಮುಕಿಸಬೇಕು.

ಬೇಸಿಗೆಯಲ್ಲಿ ಹುಳು ಸಾಕಾಣಿಕೆ ಮನೆಯ ಉಷ್ಣಾಂಶ 27'0 28'0 ಸೆ. ಹಾಗೂ ತೇವಾಂಶ ಶೇ.60-70 ಇರುವಂತೆ ನೋಡಿಕೊಳ್ಳಬೇಕು. ಉಷ್ಣಾಂಶವನ್ನು ಕಡಿಮೆಮಾಡಲು ಮನೆಯ ಸುತ್ತಲೂ ಮರಗಳನ್ನು ಹಾಕಿ ನೀರಿನಿಂದ ನೆನೆಸಬೇಕು. ಹಣ್ಣಾದ ಹುಳುಗಳು ಚಂದ್ರಿಕೆಗಳಿಗೆ ಬಿಟ್ಟನಂತರ ಚಂದ್ರಿಕೆಗಳನ್ನು ನೆರಳಿನಲ್ಲಿ ಇಡತಕ್ಕದ್ದು ಹಾಗೂ ಚಂದ್ರಿಕೆಗಳನ್ನು ಇಟ್ಟ ಜಾಗದಲ್ಲಿ ಉಷ್ಣಾಂಶ 27'0-28'0 ಸೆ. ಹಾಗೂ ತೇವಾಂಶ ಶೇ.60-70 ಇರುವಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತಿಯ ರೇಷ್ಮೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ರಾಜ್ಯ ರೈತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ

# ಬರ ಪರಿಹಾರಕ್ಕೆ ಪಟ್ಟು

**ಮೈಸೂರು:** ಪ್ರಕೃತಿ ವಿಕೋಪದ ಬೆಳೆ ನಷ್ಟಕ್ಕೆ ವಿಶೇಷ ಪ್ಯಾಕೇಜ್, ಬರ ಪರಿಹಾರ ಮತ್ತು ಗೋಶಾಲೆ ಆರಂಭಿಸಲು ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಪ್ರತಿಭಟಿಸಿದರು.

ಮೈಸೂರಿನ ಬಂಡಿಪಾಳ್ಯ ಹತ್ತಿರ ಮೈಸೂರು ಊಟಿ ಹೆದ್ದಾರಿಯಲ್ಲಿ ರಾಜ್ಯ ಮತ್ತು ಕೇಂದ್ರ ಸರಕಾರ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಹೆದ್ದಾರಿ ತಡೆ ಚಳುವಳಿ ನಡೆಸಲಾಯಿತು. ಪ್ರತಿಭಟನೆ ನೇತೃತ್ವವಹಿಸಿದ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ತೀವ್ರ ಬರಗಾಲದಿಂದ ತತ್ತರಿಸಿದ್ದು, ಗಾಯದ ಮೇಲೆ ಬರೆ ಎಳೆದಂತೆ ಕಳೆದ ಎರಡು ದಿನಗಳಿಂದೇ ಭೀತರ ಸುಂಟರಗಾಳಿಯಿಂದ ಬಾಳೆ ಬೆಳಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸುಮಾರು ಎರಡು ಜಿಲ್ಲೆಗಳಿಂದ ಸುಮಾರು ಒಂದುವರೆ ಸಾವಿರ ಹೆಕ್ಟಾರ್ ಪ್ರದೇಶವು ಬಾಳೆ ಬೆಳೆ ನಷ್ಟವಾಗಿದೆ. ಇದಕ್ಕೆ ರಾಜ್ಯ ಸರ್ಕಾರ ವಿಶೇಷ ಪ್ಯಾಕೇಜನ್ನು ಘೋಷಿಸಿ ಬಾಳೆ ಬೆಳೆಗಾರರಿಗೆ ರಕ್ಷಣೆಗೆ ಮುಂದಾಗಬೇಕು ಎಂದು ಒತ್ತಾಯಿಸಿದರು.




ಗ್ರಾಮೀಣ ಭಾಗದಲ್ಲಿ ತೀವ್ರ ಬರಗಾಲವಿದ್ದು ಜಾನುವಾರುಗಳಿಗೆ ಮೇವು ಸಿಗದೆ ತೊಂದರೆಯಾಗಿದೆ. ಮೇವು ಕೇಂದ್ರಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ತೆರೆದು ಯಾವುದೆ ಶರತ್ತು ಇಲ್ಲದೆ ಮೇವು ಪೂರೈಸಬೇಕು. ಗೋಶಾಲೆಗಳನ್ನು ತಕ್ಷಣ ಆರಂಭಿಸಲು ಒತ್ತಾಯಿಸಿದರು. ತೀವ್ರ ಬರಗಾಲದಿಂದ ನೊಂದಿರುವ ರೈತರಿಗೆ ಕಳೆದ ಸಾಲಿನ ಕಬ್ಬು ಬಾಕಿ ಪ್ರತಿ ಟನ್ನಿಗೆ 150 ರೂ.ನಂತೆ 25 ಕೋಟಿ ರೂ. ಹಾಗೂ 2023-24 ಸಾಲಿನ ಕಬ್ಬು ಹೆಚ್ಚುವರಿ ಲಾಭ ಅಂಶ ಕೊಡಿಸಬೇಕು ಎಂದರು.

ಇವೆ ಮೊದಲಾದ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿದರು. ಸಂಘದ ಜಿಲ್ಲಾಧ್ಯಕ್ಷ ಹಾಡ್ಯ ರವಿ, ಜಿಲ್ಲಾ ಉಪಾಧ್ಯಕ್ಷ ಮುದ್ದಾಹಳ್ಳಿ ಚಿಕ್ಕ ಸ್ವಾಮಿ, ಹರ್ಷಕುಮಾರ್, ಮಲಿಯೂರು ಮಹೇಂದ್ರ ಕುಮಾರ್, ಬಸವರಾಜಪ್ಪ, ದೇವನೂರು ನಾಗೇಂದ್ರ ಸ್ವಾಮಿ, ಅಂಬಳೆ ಮಹದೇವಸ್ವಾಮಿ, ಊಡಿಗಾಲ ಮಂಜುನಾಥ್, ಕಲ್ಲುಂದ ರಾಹುಲ್, ಜನ್ನೂರ್ ಶಾಂತರಾಜು, ನಂದಿಗುಂದಪುರ ಎಂ.ಸೋಮಣ್ಣ, ಹಂಡುವಿನಹಳ್ಳಿ ಶಿವಣ್ಣ, ಕೆರೆಹುಂಡಿ ಶಿವಣ್ಣ, ಮುದ್ದಳ್ಳಿ ಕುಮಾರ್, ಎಚ್.ಗುಂಡ್ಲ ಶಂಕರ್ ಸುಕೇತ್ ರಾಜು, ಭೋಗಯ್ಯನ ಹುಂಡಿ ಮಹೇಶ್ ಮುಂತಾದವರು ಹಾಜರಿದ್ದರು.

# ಮುಂಗಾರು ಹಂಗಾಮು; ಬೆಳೆ ಪರಿಹಾರ

**ಕೋಲಾರ:** 2023ನೇ ಸಾಲಿನ ಮುಂಗಾರು ಹಂಗಾಮಿನ ಬರ ಪರಿಸ್ಥಿತಿ ಹಿನ್ನಲೆಯಲ್ಲಿ ರೈತರಿಗೆ ಡಿಜಿಟಲ್ ಬೆಳೆ ಸಮೀಕ್ಷೆ ಮಾಹಿತಿ ಮತ್ತು ಎಫ್.ಐ.ಡಿ ಹೊಂದಿರುವ ರೈತರ ಮಾಹಿತಿಯನ್ನಾಧರಿಸಿ ಮೊದಲನೇ ಹಂತದಲ್ಲಿ ಗರಿಷ್ಠ ರೂ.2000/- ಗಳಂತೆ ಒಟ್ಟು 50,070 ರೈತರಿಗೆ ರೂ.890.65 ಲಕ್ಷಗಳ ಇನ್‌ಪುಟ್ ಸಬ್ಸಿಡಿಯು ಮೊತ್ತವನ್ನು ಜಮೆ ಮಾಡಲಾಗಿರುತ್ತದೆ. ಎಸ್.ಡಿ.ಆರ್.ಎಫ್ ಮಾರ್ಗಸೂಚಿಗಳ ಪ್ರಕಾರ ಹೆಚ್ಚುವರಿ ಮೊತ್ತವನ್ನು ಮೇ 02 ರಂದು ಒಟ್ಟು 32,918 ರೈತರಿಗೆ ರೂ.1497.75 ಲಕ್ಷಗಳ ಇನ್‌ಪುಟ್ ಸಬ್ಸಿಡಿಯನ್ನು ಜಮೆ ಮಾಡಲು ಅನುಮೋದನೆ ನೀಡಲಾಗಿದ್ದು, ಸರ್ಕಾರದಿಂದ ನೇರವಾಗಿ ಆಧಾರ್ ಸಂಖ್ಯೆ ಜೋಡನೆಯಾಗಿರುವ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಲಾಗಿರುತ್ತದೆ.



ಹೆಚ್ಚಿನ ಮಾಹಿತಿಗಾಗಿ ಕೋಲಾರ ಜಿಲ್ಲಾಧಿಕಾರಿಗಳ ಕಛೇರಿಯ ದೂ.ಸಂ.8277927080/08152-243506, ಬಂಗಾರಪೇಟೆ ತಾಲ್ಲೂಕು ಕಛೇರಿಯ ದೂ.ಸಂ.8277932044/08153-255263, ಕೋಲಾರ ತಾಲ್ಲೂಕು ಕಛೇರಿಯ ದೂ.ಸಂ.9900784885/08152-222056, ಮುಳಬಾಗಿಲು ತಾಲ್ಲೂಕು ಕಛೇರಿಯ ದೂ.ಸಂ.8277932031/08159-242049, ಕೆ.ಜಿ.ಎಫ್ ತಾಲ್ಲೂಕು ಕಛೇರಿಯ ದೂ.ಸಂ.7090409885/08971834616, ಮಾಲೂರು ತಾಲ್ಲೂಕು ಕಛೇರಿಯ ದೂ.ಸಂ.7019668471/08151-232699, ಶ್ರೀನಿವಾಸಪುರ ತಾಲ್ಲೂಕು ಕಛೇರಿಯ ದೂ.ಸಂ.9972783331/08157-246222 ಗೆ ಸಾರ್ವಜನಿಕರು ಬೆಳಿಗ್ಗೆ 10.00 ರಿಂದ ಸಂಜೆ 6.00 ಗಂಟೆಯೊಳಗೆ ಬೆಳೆ ಪರಿಹಾರ ಹಣ ಖಾತೆಗೆ ಜಮಾ ಆಗದೆ ಇರುವವರು ದೂರು ಸಲ್ಲಿಸಬಹುದು. ಹಾಗೂ ಸಂಬಂಧಪಟ್ಟ ತಾಲ್ಲೂಕು ಕೃಷಿ ಅಧಿಕಾರಿ, ತಹಶೀಲ್ದಾರ್ ರವರ ಕಛೇರಿಗೆ ಖುದ್ದು ಭೇಟಿ ನೀಡಿ ಮಾಹಿತಿ ಪಡೆಯಬಹುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಥಮ ಪಿ.ಯು.ಸಿ ದಾಖಲಾತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಪ್ರಥಮ ಪಿ.ಯುಸಿ.(ವಿಜ್ಞಾನ ವಿಭಾಗ) ದಾಖಲಾತಿಗಾಗಿ ಕೋಲಾರ ಜಿಲ್ಲೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ವಿಜ್ಞಾನ ಕಾಲೇಜು, ಪಾರ್ಶ್ವಗಾನಹಳ್ಳಿ ಮತ್ತು ಕೆ.ಜಿ.ಎಫ್ ಸುಮತಿನಗರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳಲ್ಲಿ ಅರ್ಜಿಗಳನ್ನು ಕಛೇರಿಯ ವೇಳೆಯಲ್ಲಿ ಮೇ 13 ರಿಂದ 23 ರೊಳಗೆ ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ಕಾಲೇಜುಗಳಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಾದ ಶಂಕರ್ ಪ್ರಸಾದ್ ರವರ ಮೊಬೈಲ್ ಸಂಖ್ಯೆ:6360811262 ಹಾಗೂ ಕೆ.ವಿ.ನಾಗರಾಜ್ ರವರ ಮೊಬೈಲ್ ಸಂಖ್ಯೆ:9880322844 ಸಂಪರ್ಕಿಸಬಹುದುದೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಪ್ರತಿಭಾವಂತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿ ಕುಟುಂಬದ ಆದಾಯ ಮಿತಿ ರೂ.2.00 ಲಕ್ಷ ಮೀರಿರಬಾರದು. ಸಫಾಯಿ ಕರ್ಮಚಾರಿ ಮಕ್ಕಳಿಗೆ ಶಾಲೆ ಪ್ರವೇಶ ಯೋಜನೆಯಲ್ಲಿ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗುವುದು. 5ನೇ ತರಗತಿಯಲ್ಲಿ ಶೇ.60% ಅಂಕ ಪಡೆದಿರಬೇಕು. ಅರ್ಜಿಗಳು ವಿತರಿಸುವ ಸ್ಥಳ ಸಮಾಜ ಕಲ್ಯಾಣ ಇಲಾಖೆ ಶ್ರೀನಿವಾಸಪುರ ರಸ್ತೆ ಜಂಟಿ ನಿರ್ದೇಶಕರ ಕಛೇರಿಯ ಡಾ|| ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಮೇ 21 ಸಂಜೆ 5:00 ಗಂಟೆಯೊಳಗೆ ಸಲ್ಲಿಸಬಹುದೆಂದು ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 13 ರಿಂದ ಪ್ರವೇಶ ಪತ್ರ ವಿತರಣೆ

**ಚಿಕ್ಕಬಳ್ಳಾಪುರ:** 2024-25 ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿಯ ಪ್ರವೇಶಕ್ಕಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿತ್ತಿರುವ ಪೆರೇಸಂದ್ರ, ಬಾಗೇಪಲ್ಲಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಮಸ್ತೇನಹಳ್ಳಿಯಲ್ಲಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆಯು ಮೇ 19 ರಂದು ನಡೆಯಲಿದೆ. ಚಿಕ್ಕಬಳ್ಳಾಪುರ ಟೌನ್ ನಲ್ಲಿರುವ ಮೌಲಾನಾ ಆಜಾದ್ ಮಾದರಿ ಶಾಲೆ ಮತ್ತು ಪೆರೇಸಂದ್ರ, ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದ್ದು, ಪರೀಕ್ಷಾರ್ಥಿಗಳು ಮೇ 13 ರಿಂದ 17 ರ ಒಳಗಾಗಿ ಪ್ರವೇಶ ಪತ್ರಗಳನ್ನು ಜಿಲ್ಲಾಡಳಿತ ಭವನ, ಎಸ್.ಎ8, 2ನೇ ಮಹಡಿ ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿಯಲ್ಲಿ ಪಡೆಯಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಪೂರ್ಣಯ್ಯ ನಾಲೆ ತೆರವಿಗೆ ಒತ್ತಾಯ

**ಮೈಸೂರು:** ಮೈಸೂರಿನ ಪೂರ್ಣಯ್ಯ ನಾಲೆ ಅತಿಕ್ರಮವನ್ನು ತೆರವುಗೊಳಿಸುವಂತೆ ರಾಷ್ಟ್ರಕ್ರಾಂತಿ ಫೌಂಡೇಷನ್ ಅಧ್ಯಕ್ಷ ಜಿ.ಎಂ. ಮಹದೇವ ಒತ್ತಾಯಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೋಗಾದಿ ಗ್ರಾಮ, ಬಸವನಹಳ್ಳಿ, ದಾಸನಕೊಪ್ಪಲು, ರಟಿ ಕ್ಯಾತನಹಳ್ಳಿ, ಹಿನಕಲ್, ಮಾದಹಳ್ಳಿ, ಉಯಿಲಾಳು ಮೊದಲಾದ ಕಡೆಗಳಲ್ಲಿ ಪೂರ್ಣಯ್ಯ ನಾಲೆ ಅತಿಕ್ರಮಣವನ್ನು ಇದನ್ನು ತೆರವುಗೊಳಿಸಬೇಕೆಂದು ನ್ಯಾಯಾಲಯ ನೀಡಿರುವ ಆದೇಶವನ್ನು ಸಂಬಂಧಿಸಿದವರು ಪಾಲಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ನಾಲೆ ಅತಿಕ್ರಮಣ ಮಾಡಿ ಕಟ್ಟಡ ನಿರ್ಮಿಸಿಕೊಂಡಿರುವವರಿಗೂ ತೆರವುಗೊಳಿಸುವಂತೆ ವಿವಿಧ ಹಂತಗಳಲ್ಲಿ ಆದೇಶಿಸಲಾಗಿದೆ. ಆದರೂ ಸಂಬಂಧಿಸಿದವರು ನ್ಯಾಯಾಲಯ ಆದೇಶ ಜಾರಿಗೆ ಕ್ರಮ ಕೈಗೊಂಡಿಲ್ಲ. ಹೀಗಾಗಿ ಹಿರಿಯ ಅಧಿಕಾರಿಗಳು ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ಸದಸ್ಯರಾದ ಡಿ. ಮಂಜುನಾಥ್, ಕುಮಾರಸ್ವಾಮಿ, ಕುಮಾರ್ ಉಪಸ್ಥಿತರಿದ್ದರು.



## ಆಶ್ರಮ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣವಿಲ್ಲದೆ ಮಕ್ಕಳು ಕೂಲಿಗೆ

**ಮೈಸೂರು:** ರಾಜ್ಯದ ಆಶ್ರಮ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರಕದ ಕಾರಣ ಶಿಕ್ಷಣ ಮೊಟಕುಗೊಳಿಸಿ ಕೂಲಿ ಕೆಲಸಕ್ಕೆ ಹೋಗುವಂತಾಗಿದೆ ಎಂದು ಕರ್ನಾಟಕ ಅರಣ್ಯ ಮೂಲ ಬುಡಕಟ್ಟು ಸಮುದಾಯಗಳ ಒಕ್ಕೂಟದ ಜಿಲ್ಲಾ ಘಟಕದ ಕಾರ್ಯದಶಿ ಶೈಲೇಂದ್ರಕುಮಾರ್ ಬೇಸರ ವ್ಯಕ್ತಪಡಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 116 ಆಶ್ರಮ ಶಾಲೆಗಳಿದ್ದು, ಇವುಗಳಲ್ಲಿ ಅರಣ್ಯ ಬುಡಕಟ್ಟು ಸಮುದಾಯಗಳಾದ ಜೇನುಕುರುಬ, ಬೆಟ್ಟಕುರುಬ, ಯವರ, ಸೋಲಿಗ, ಹಕ್ಕಿಪಿಕ್ಕಿ, ಡೋಂಗ್ರಿಗೆರಾಸಿಯಾ ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಆದರೆ ಇವುಗಳಲ್ಲಿ ಗುಣಮಟ್ಟದ ಶಿಕ್ಷಣ ದೊರಕುತ್ತಿಲ್ಲದ ಕಾರಣ ಇವರಲ್ಲಿ ಅನೇಕರು ಶಿಕ್ಷಣ ಮೊಟಕುಗೊಳಿಸಿ ಕೂಲಿ ಕೆಲಸಕ್ಕೆ ಹೋಗುವಂತಾಗಿದೆ ಎಂದರು.

ಜಿಲ್ಲಾ ವ್ಯಾಪ್ತಿಯ ಎಚ್.ಡಿ. ಕೋಟೆಯಲ್ಲಿ 10 ಆಶ್ರಮಶಾಲೆ, ಹುಣಸೂರು ತಾಲೂಕಿನಲ್ಲಿ ಆರು, ಪಿರಿಯಾಪಟ್ಟಣ ತಾಲೂಕಿನಲ್ಲಿ ಮೂರು, ನಂಜನಗೂಡು ತಾಲೂಕಿನಲ್ಲಿ ಹತ್ತು ಆಶ್ರಮ ಶಾಲೆಗಳಿವೆ. ಪ್ರತಿ ಶೈಕ್ಷಣಿಕ ವರ್ಷದಲ್ಲಿಯೂ 2100 ಕ್ಕೂ ಹೆಚ್ಚು ಮಕ್ಕಳು ದಾಖಲಾಗುತ್ತಿದ್ದಾರೆ. ಇದೇ ವೇಳೆ, 2005 ರಿಂದ 2024 ರ ನಡುವೆ ಈ ಸಮುದಾಯದ 3420 ಮಕ್ಕಳು ಕೂಲಿ ಕಾರ್ಮಿಕರಾಗಿದ್ದಾರೆ. ಇವರಿಗೆ ಶಿಕ್ಷಣ ನೀಡುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ರೂಪಿಸದಿರುವುದು, ಕನಿಷ್ಠ ದ್ವಿತೀಯ ಪಿಯುಸಿ ತನಕ ಉಚಿತ ಕಡ್ಡಾಯ ಶಿಕ್ಷಣ ನೀಡುವ ಸೌಲಭ್ಯವನ್ನು ಈ ಆಶ್ರಮದ ಶಾಲೆಗಳಲ್ಲೇ ಒದಗಿಸುವುದು ಸಹಾ ಕಾರಣವಾಗಿದೆ. ಆದ್ದರಿಂದ ಡಿಸಿ, ಜಿಪಂ ಸಿಇಒ, ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನಾಧಿಕಾರಿಗಳು ಈ ಬಗ್ಗೆ ಗಮನ ಹರಿಸಬೇಕೆಂದು ಆಗ್ರಹಿಸಿದರು.




### ಕಾನೂನು ಸೇವೆ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶ ಸುನೀಲ ಎಸ್ ಹೊಸಮನಿ ಕರೆ

# ತಂಬಾಕು ಉತ್ಪನ್ನಗಳಿಂದ ಹದಿಹರೆಯದ ವಯಸ್ಕರು ದೂರವಿರಿ

**ಕೋಲಾರ:** ಸಾರ್ವಜನಿಕರು ಮತ್ತು ತಂಬಾಕು ಉತ್ಪನ್ನಗಳ ಮಾರಾಟ ಅಂಗಡಿಯವರು ಇದನ್ನು ಉಲ್ಲಂಘಿಸಿದಲ್ಲಿ ದಂಡ ವಿಧಿಸಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕಾನೂನು ಸೇವೆ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾದೀಶರಾದ ಶ್ರೀ ಸುನೀಲ ಎಸ್ ಹೊಸಮನಿ ಕರೆ ನೀಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಪ್ರಕೃತಿ ಫಾರ್ಮಸಿ ಕಾಲೇಜು ಇವರ ಸಹಯೋಗದೊಂದಿಗೆ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ತಂಬಾಕು ಉತ್ಪನ್ನಗಳ ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವಂತಹ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮವನ್ನು ಪ್ರಕೃತಿ(ಪವನ್) ಕಾಲೇಜು ಸಭಾಂಗಣದಲ್ಲಿ ಆಯೋಜಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವೈದ್ಯರು ಹಾಗೂ ಸಿ.ಬಿ.ಐ.ಟಿ ಕಾಲೇಜು ಅಧ್ಯಕ್ಷರಾದ ಡಾ. ಎ ಪ್ರಭಾಕರರೆಡ್ಡಿ ಇವರು ತಂಬಾಕು ಉತ್ಪನ್ನಗಳಾದ ಬೀಡಿ, ಸಿಗರೇಟು, ಹನ್ಸ್, ಖೈನಿ ಜರ್ದಾ, ಕಡ್ಡಿಪುಡಿ ತಂಬಾಕುಯುಕ್ತ ಪಾನ್ ಮಸಾಲ ಇತ್ಯಾದಿಗಳಲ್ಲಿ ನಿಕೋಟಿನ್ ಎಂಬ ವ್ಯಸನಕಾರಕ ರಸಾಯನಿಕ ಪದಾರ್ಥವಿದ್ದು ಇದನ್ನು ತಿಳಿಯದೆ ಹದಿಹರೆಯದವರು ಇವುಗಳನ್ನು ಸೇವನೆ ಮಾಡಿದಾಗ ವ್ಯಸನಿಗಳಾಗಿ ಮುಂದೆ ಹಲವು ವರ್ಷಗಳ ನಂತರ



ಕ್ಯಾನ್ಸರ್ ಹಾಗೂ ಮಾರಕ ರೋಗಗಳಿಗೆ ತುತ್ತಾಗುತ್ತಿದ್ದಾರೆ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು

ಕಾನೂನು ಎಂದರೆ ಸಾಮಾನ್ಯ ಜ್ಞಾನ, 12ನೇ ಶತಮಾನದಲ್ಲಿ ಬಸವಣ್ಣನವರು ವಚನಗಳ ಮುಖಾಂತರ ಕಾನೂನು ತಿಳಿಸುತ್ತಿದ್ದರು ಇದನ್ನು ಆಧರಿಸಿ ಭಾರತದಲ್ಲಿ ಕಾನೂನು ರಚಿತವಾಗಿದೆ ಕಾನೂನು ತಿಳಿಯುವುದು ನಮ್ಮ ಆದ್ಯ ಕರ್ತವ್ಯ, ಆದ್ದರಿಂದ ಕಾನೂನುಗಳನ್ನು ತಿಳಿದುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳುವುದು ಬಹಳ ಮುಖ್ಯ. ಭಾರತದಲ್ಲಿ ಅನೇಕ ಕಾನೂನುಗಳಿದ್ದು ಪ್ರಸ್ತುತ ತಂಬಾಕು ಉತ್ಪನ್ನಗಳಿಗೆ ಸಂಬಂಧಪಟ್ಟಂತೆ ಸಿಗರೇಟು ಹಾಗೂ ಇತರೆ ತಂಬಾಕು ಉತ್ಪನ್ನಗಳ ಕಾಯ್ದೆ ಕೋಪ್ಟಾ ಕಾನೂನು ಇದೆ ಕೋಟ್ಪಾ ಕಾಯ್ದೆಯ 2003ರ ಸೆಕ್ಷನ್ 4ರ ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇದ ಸೆಕ್ಷನ್ 6ಎ ಮತ್ತು 6ಬಿ ಪ್ರಕಾರ 18 ವರ್ಷದೊಳಗಿನ ಮಕ್ಕಳಿಗೆ ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಶಿಕ್ಷಣ ಸಂಸ್ಥೆಗಳ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇದ, ಸೆಕ್ಷನ್ 5ರ ಪ್ರಕಾರ ತಂಬಾಕು ಉತ್ಪನ್ನಗಳ ಜಾಹೀರಾತು ನಿಷೇದ ಸೆಕ್ಷನ್ 7ರ ಪ್ರಕಾರ ಆರೋಗ್ಯಕರ ಎಚ್ಚರಿಕೆ ಚಿಹ್ನೆ ಇಲ್ಲದೆ ಹಾಗೂ ಬಿಡಿ ಬಿಡಿಯಾಗಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧಿಸಿದೆ, ತಂಬಾಕು ಉತ್ಪನ್ನಗಳ ಮಾರಾಟ ಅಂಗಡಿಗಳ ಮಾಲೀಕರು ಧೂಮಪಾನ ನಿ?ಧಿತ ನಾಮ ಫಲಕವನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು. ಪ್ರಸ್ತುತ ದಿನಗಳಲ್ಲಿ ಅಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತದೆ, ಅಸಾಂಕ್ರಾಮಿಕ ರೋಗವೆಂದರೆ ರೋಗವನ್ನು ನಾವಾಗಿಯೇ ನಮಗೆ ತರಿಸಿಕೊಳ್ಳುವುದೆಂದರ್ಥ ನಮ್ಮ ಆಹಾರ ಪದ್ದತಿ, ಜೀವನ ಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದು ಮತ್ತು ದುರಭ್ಯಾಸಗಳನ್ನು ರೂಢಿಸಿಕೊಳ್ಳುವುದರಿಂದ ಅಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತಿವೆ, ಪ್ರಮುಖವಾದಂತಹ ಅಸಾಂಕ್ರಾಮಿಕ ರೋಗಗಳೆಂದರೆ ಕ್ಯಾನ್ಸರ್, ಹೃದಯಾಘಾತ, ಗ್ಯಾಂಗ್ರಿನ್, ಡಯಾಬಿಟಿಕ್, ರಕ್ತದೊತ್ತಡ, ಪಾರ್ಶ್ವವಾಯು, ಅಲ್ಸರ್ ಇತ್ಯಾದಿ ಇವುಗಳಿಗೆ ಪ್ರಮುಖ ಕಾರಣ ತಂಬಾಕು ಉತ್ಪನ್ನಗಳ ಸೇವನೆಯಾಗಿರುತ್ತದೆ, ಆದ್ದರಿಂದ ಮುಂದಿನ ಪೀಳಿಗೆಯಾದರು ತಂಬಾಕು ಮುಕ್ತ ಪೀಳಿಗೆಯಾಗಬೇಕಾದರೆ ನಮ್ಮ ಮಕ್ಕಳನ್ನು ತಂಬಾಕು ಉತ್ಪನ್ನಗಳಿಂದ ದೂರ ಇಡಬೇಕಾಗಿರುತ್ತದೆ ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ|| ಚಾರಿಣಿ ಎಂ.ಎ ರವರು ತಿಳುವಳಿಕೆ ಮೂಡಿಸಿದರು.

ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಎಂದೆಂದಿಗೂ ಯಾವುದೇ ರೀತಿಯ ತಂಬಾಕು ಉತ್ಪನ್ನಗಳ ಸೇವನೆ ಮಾಡುವುದಿಲ್ಲ ಮತ್ತು ತಮ್ಮ ಸ್ನೇಹಿತರು, ಕುಟುಂಬದ ಸದಸ್ಯರು ಹಾಗೂ ಸುತ್ತಮುತ್ತಲಿನವರಿಗೆ ಇವುಗಳನ್ನು ಸೇವನೆ ಮಾಡದಂತೆ ಪ್ರೇರೇಪಿಸಲಾಗುವುದೆಂದು ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಈ ಕಾರ್ಯಕ್ರಮದಲ್ಲಿ ವಕೀಲ ಸಂಘದ ಅಧ್ಯಕ್ಷರಾದ ಮುನೇಗೌಡ, ಪ್ರಕೃತಿ ಕಾಲೇಜಿನ ಆಡಳಿತಾಧಿಕಾರಿಗಳಾದ ಕೆ.ವಿ ನಾರಾಯಣಸ್ವಾಮಿ, ಪ್ರಕೃತಿ ಕಾಲೇಜಿನ ಪ್ರಾಂಶುಪಾಲರಾದ ಶೃತಿ ಎಂ.ವಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಮಹಮದ್.ಪಿ ಮತ್ತು ಆಪ್ತಸಮಾಲೋಚಕರಾದ ಮಂಜುನಾಥ, ಸದರಿ ಕಾಲೇಜಿನ ಉಪನ್ಯಾಸಕರು, ಸಹಾಯಕ ಪ್ರಾಧ್ಯಾಪಕರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ಬಸವ ಜಯಂತಿ ಪೂರ್ವಭಾವಿ ಸಭೆ

**ವಿಜಯಪುರ:** ಅ.ಶಿ.ವೈ.ನಗರ್ತ ಯುವಕ ಸಂಘ, ಶ್ರೀ ನಗರೇಶ್ವರ ಸೇವಾ ಟ್ರಸ್ಟ್ ಮತ್ತು ರಾಷ್ಟ್ರೀಯ ಬಸವ ದಳ ಸಂಯುಕ್ತಾಶ್ರಯದಲ್ಲಿ ಕ್ರಾಂತಿಯೋಗಿ ಶ್ರೀ ಬಸವಣ್ಣನವರ ಜಯಂತಿಯನ್ನು ಇದೇ ಮಾಸದ 10ನೇ ತಾರೀಖು ಶುಕ್ರವಾರ ದಂದು ಏರ್ಪಡಿಸಲಾಗಿದೆ ಎಂದು ನಗರ್ತಯುವಕ ಸಂಘ ಅಧ್ಯಕ್ಷರಾದ ಬೇಕರಿ ಮಂಜುನಾಥ್ ತಿಳಿಸಿದರು.

ಅವರು ಪಟ್ಟಣದ ಶ್ರೀ ನಗರೇಶ್ವರಸ್ವಾಮಿಜ್ಞಾನಮಂದಿರದಲ್ಲಿ ಏರ್ಪಡಿಸಿದ್ದ ಬಸವ ಜಯಂತಿ ಕಾರ್ಯಕ್ರಮದ ಪೂರ್ವ ಭಾವಿ ಸಭೆಯಲ್ಲಿ ಮಾತನಾಡುತ್ತಿದ್ದರು.

ಶುಕ್ರವಾರದಂದು ಬೆಳಗ್ಗೆ 6–30 ಕ್ಕೆ ಗಾಂಧಿ ಚೌಕದಲ್ಲಿರುವ ಶ್ರೀಬಸವಣ್ಣನವರ ದೇವಾಲಯದಲ್ಲಿ ಶ್ರೀಬಸವಣ್ಣನವರಿಗೆ ಅಭಿಷೇಕ, ಹೂವಿನ ಅಲಂಕಾರದೊಂದಿಗೆ ವಿಶೇಷ ಪೂಜೆ ಏರ್ಪಡಿಸಲಾಗಿದ್ದು, 8 ಗಂಟೆಗೆ ಶರಣೆ ಸೌಭಾಗ್ಯಮ್ಮ ಶಿವರುದ್ರಪ್ಪರವರಿಂದ ಅಷ್ಟಾವರಣ ಧ್ವಜಾರೋಹಣ ಏರ್ಪಡಿಸಲಾಗಿದ್ದು, ನಿವೃತ್ತ ಆಯುಕ್ತರಾದ ವಿ..ಶಿವಕುಮಾರ್ ರವರಿಗೆ ಅಭಿನಂದನೆಯನ್ನು ಏರ್ಪಡಿಸಲಾಗಿದೆ.

ಬಸವ ಭಕ್ತರೆಲ್ಲಾ ಶ್ವೇತ ವರ್ಣದಾರಿಗಳಾಗಿ ಬಸವಣ್ಣನವರ ಭಾವಚಿತ್ರದೊಂದಿಗೆ ಊರಿನ ಪ್ರಮುಖ ಬೀದಿಗಳಲ್ಲಿ ನಗರ ಸಂಕೀರ್ತನೆ, ವಚನ ಗಾಯನ, ನಡೆಸಲಾಗುವುದು.

ಶ್ರೀಚಿಕ್ಕಪ್ಪಯ್ಯನವರ ಮಠದ ರಸ್ತೆಯಲ್ಲಿರುವ ಶ್ರೀ ಚನ್ನಬಸವೇಶ್ವರ ದೇವಾಲಯದಲ್ಲಿ ಶ್ರೀ ಸ್ವಾಮಿರವರಿಗೆ ಬಸವ ಜಯಂತಿ ಪ್ರಯುಕ್ತ ಮಹಾಮಂಗಳಾರತಿ ಮತ್ತು ತೀರ್ಥಪ್ರಸಾದ, ವಿನಿಯೋಗ, ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಸಂಜೆ ಜಗಜ್ಯೋತಿ ಆಶ್ವಾರೂಢ ಶ್ರೀಬಸವಣ್ಣನವರ ಪಂಚಲೋಹದ ಪ್ರತಿಮೆಯ ಮೆರವಣಿಗೆಯನ್ನು ಹಂಸ ರಥದಲ್ಲಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕೇರಳದ ಸುಪ್ರಸಿದ್ಧ ಸಾಗರಂ ಕಲಾ ಸಮಿತಿಯ ಚಂಡೆವಾದ್ಯದೊಂದಿಗೆ ಏರ್ಪಡಿಸಲಾಗಿದೆ. ಗೌರವಾಧ್ಯಕ್ಷರಾದ ಜೆ.ಆರ್. ಪಿ ಮುರಳೀಧರ ಕಾರ್ಯದರ್ಶಿಗಳಾದ ಅಮರ್ ಸಹ ಕಾರ್ಯದರ್ಶಿಯಾದ ಸಿ ಮನೋಹರ್ ಖಜಾಂಚಿಗಳಾದ ಪಿ ಸುನಿಲ್ ರವರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.



## ಅನನ್ಯ ಕಾಲೇಜಿನಲ್ಲಿ ಅವೇಗಾ ಕ್ಯಾಂಪಸ್ ಡ್ರೈವ್

**ತುಮಕೂರು:** ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ಕಾಲೇಜಿನಲ್ಲಿ ಇತ್ತೀಚಿನ ಕ್ಯಾಂಪಸ್ ಡ್ರೈವ್‌ನಲ್ಲಿ ಬೆಂಗಳೂರಿನ ಅವೇಗಾ ಬ್ಯೂಸಿನೆಸ್ ಸೆಲ್ಯೂಷನ್ ಪ್ರೈವೇಟ್ ಲಿಮಿಟೆಡ್‌ಗೆ ಆಯ್ಕೆಯಾದ ಪವನ್ ಹೆಚ್.ಎಸ್. ದಿವ್ಯ ಟಿ.ಎನ್. ಮಂಜು ಸಿ.ಎಚ್. ಅಂಕಿತ, ಅಂಜಲಿ ಎ, ವಿದ್ಯಾರ್ಥಿಗಳಿಗೆ ಆಫರ್ ಲೇಟರ್‌ಗಳನ್ನು ನೀಡಿ, ಸ್ವೀಕರಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಆತ್ಮೀಯ ಅಭಿನಂದನೆಗಳನ್ನು ಸಲ್ಲಿಸಲಾಗಿತ್ತು. ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್‌ರವರು ಮಾತನಾಡುತ್ತಾ ನಿಮ್ಮ ಸ್ನೇಹಿತರಿಗೆ ಸ್ಪೂರ್ತಿಯಾಗಿ ಮತ್ತು ಕಾಲೇಜು ಒದಗಿಸಿದ ಅತ್ಯುತ್ತಮ ಶಿಕ್ಷಣ ಮತ್ತು ಪ್ರತಿಬಿಂಬವಾಗಿರುವ ನಿಮ್ಮ ಮುಂದಿನ ಪ್ರಯತ್ನಗಳಲ್ಲಿ ನೀವು ನಮ್ಮನ್ನು ಹಾಗೂ ನಮ್ಮ ಕಾಲೇಜಿನ ಕೀರ್ತಿಯನ್ನು ಎತ್ತಿ ಹಿಡಿಯುವಿರು ಹಾಗೂ ನೀವು ಆಯ್ಕೆ ಮಾಡಿಕೊಂಡ ಕ್ಷೇತ್ರಗಳಿಗೆ ಧನಾತ್ಮಕ ಕೊಡುಗೆ ನೀಡುತ್ತೀರಾ ಎಂಬ ವಿಶ್ವಾಸ ನಮಗಿದೆ ಎಂದು ತಿಳಿಸಿದರು. ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್ ಹಾಗೂ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್‌ರವರು ವಿದ್ಯಾರ್ಥಿಗಳ ಮುಂದಿನ ಭವಿಷ್ಯ ಉಜ್ಜಲವಾಗಿರಲಿ ಎಂದು ಶುಭ ಹಾರೈಸಿದರು. ಈ ಕಾರ್ಯಕ್ರಮದಲ್ಲಿ ಅವೇಗಾ ಬ್ಯೂಸಿನೆಸ್ ಸೆಲ್ಯೂಷನ್ ಪ್ರೈವೇಟ್ ಲಿಮಿಟೆಡ್‌ನ ಸಿಬ್ಬಂದಿ ವರ್ಗದವರು ಹಾಗೂ ಅನನ್ಯ ಕಾಲೇಜಿನ ಕಾಮರ್ಸ್ ವಿಭಾಗದ ಮುಖ್ಯಸ್ಥರಾದ ಪ್ರೊ.ದೇವಕಿ ಪ್ರಸಾದ್, ಉದ್ಯೋಗ ಅಧಿಕಾರಿಯಾದ ಪ್ರೊ.ಶಮಂತಪ್ರಿಯ, ಲತೇಶ್ ಜೆ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಡಿಕೆಶಿ ಮೇಲಿನ ಆರೋಪ ಸತ್ಯವಲ್ಲ

**ಮೈಸೂರು:** ಮಾಜಿ ಪ್ರಧಾನಿ ಪ್ರಜ್ವಲ್ ರೇವಣ್ಣ ಅವರ ಮನೆಯಲ್ಲಿ ನಡೆದಿದೆ ಎನ್ನಲಾದ ಮಹಿಳೆಯರ ಲೈಂಗಿಕ ಶೋಷಣೆ ಪ್ರಕರಣಕ್ಕೆ ಸಂಬಂಧಿಸಿದ ಪೆನ್‌ಡ್ರೈವ್ ಹಂಚಿಕೆಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಕೈವಾಡವಿದೆ ಎಂಬ ಆರೋಪ ಸತ್ಯಕ್ಕೆ ದೂರ ಎಂದು ಮೈಸೂರು ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ವಕ್ತಾರ ಎಸ್. ರಾಜೇಶ್ ಖಂಡಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ ಮೈತ್ರಿ ಅಭ್ಯರ್ಥಿಯಾದ ಪ್ರಜ್ವಲ್ ರೇವಣ್ಣ ಮೇಲಿನ ಆರೋಪ ಕುರಿತು ಪ್ರಧಾನಿ ನರೇಂದ್ರ ಮೋದಿ ಮೌನವಾಗಿರುವುದು ಬೇಸರ ತರಿಸುತ್ತದೆ. ಪ್ರಜ್ವಲ್ ರೇವಣ್ಣ ಮಹಿಳೆಯರ ಮಾನ ಹರಾಜು ಮಾಡಿದ್ದಾರೆ. ಇದೊಂದು ಅಮಾನವೀಯ ಕೃತ್ಯವಾಗಿದ್ದು, ಕೇಂದ್ರ ಬಿಜೆಪಿ ಸರ್ಕಾರ ಇದನ್ನು ವಿರೋಧಿಸದಿರುವುದು ಮಹಿಳೆಯರ ಕಡೆಗಣನೆಯಾಗಿದೆ ಎಂದರು. ಕುರುಬಾರಹಳ್ಳಿ ಪ್ರಕಾಶ್, ಎಸ್.ಎ. ರಹೀಂ ಹಾಜರಿದ್ದರು.



## ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರತಿಭಟನೆ

**ಚಾಮರಾಜನಗರ:** ಮಹಿಳೆಯರ ಮೇಲೆ ದೌರ್ಜನ್ಯ ನಡೆಸಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಬಂಧನಕ್ಕೆ ಆಗ್ರಹಿಸಿ ನಗರದಲ್ಲಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕ ಪ್ರತಿಭಟನೆ ನಡೆಯಿತು. ಚಾಮರಾಜನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಮೆರವಣಿಗೆಯಲ್ಲಿ ಪಚ್ಚಪ್ಪ ವೃತ್ತಕ್ಕೆ ತೆರಳಿ ಕೆಲ ಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಪ್ರಜ್ವಲ್ ರೇವಣ್ಣನನ್ನು ಬಂಧಿಸಬೇಕು. ಪ್ರಜ್ವಲ್ ಶಿಕ್ಷೆಯಾಗಬೇಕು ಎಂದು ಘೋಷಣೆ ಕೂಗಿದರು. ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕದ ಅಧ್ಯಕ್ಷೆ ಲತಾ ಜತ್ತಿ ಮಾತನಾಡಿ, ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅನೇಕ ಮಹಿಳೆಯರ ಮೇಲೆ ದೌರ್ಜನ್ಯ ಎಸಗಿದ್ದಾನೆ. ಇಂತಹ ನಾಯಕ ನಮಗೆ ಬೇಡ. ಕೆಲಸ ಕೇಳಿಕೊಂಡು ಹೋದ ಮಹಿಳೆಯರ ಮೇಲೂ ದೌರ್ಜನ್ಯ ನಡೆಸಿರುವುದು ಖಂಡನೀಯ ಮಾದರಿಯಾಗಿರಬೇಕಾದ ಶಾಸಕ ಎಚ್ .ಡಿ.ರೇವಣ್ಣ, ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಕಠಿಣಶಿಕ್ಷೆಯಾಗಬೇಕು. ಪ್ರಜ್ವಲ್ ರೇವಣ್ಣ ಅವರನ್ನು ಕೂಡಲೇ ಬಂಧಿಸಬೇಕು. ಆ ಮೂಲಕ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ನ್ಯಾಯ ಕೊಡಿಸಬೇಕು. ಅಲ್ಲದೇ ಮಹಿಳೆಯರಿಗೆ ರಕ್ಷಣೆ ಒದಗಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ನಾಗರತ್ನ, ಬ್ಲಾಕ್ ಅಧ್ಯಕ್ಷೆ ನಾಗಶ್ರೀ, ಯಳಂದೂರು ಭಾಗ್ಯ, ಹನೂರು ಸುವರ್ಣಾ, ಗುಂಡ್ಲುಪೇಟೆ ರತ್ನಮ್ಮ, ಕೊಳ್ಳೇಗಾಲ ಕೃಷ್ಣವೇಣಿ,ನಗರಸಭೆ ಸದಸ್ಯೆ ಕಲಾವತಿ, ಪದಾಧಿಕಾರಿಗಳಾದ ಪದ್ಮ ಪುರುಷೋತ್ತಮ, ಕಾವೇರಿ, ನಾಗಮ್ಮ ಸೇರಿದಂತೆ ಇತರರು ಭಾಗವಹಿಸಿದ್ದರು.






ತಿಪಟೂರು ತಾಲೂಕಿನ ಬಹುತೇಕ ಗ್ರಾಮಗಳಿಗೆ ವರುಣನ ಸಂಚಾರವಾಗಿದ್ದು ಕಸಬಾ ಹಾಗೂ ಹೋನ್ನವಳ್ಳಿ ಹೋಬಳಿಯ ಗ್ರಾಮಗಳಲ್ಲಿ ಧಾರಾಕಾರವಾಗಿ ಮಳೆ ಬಂದಿದ್ದು ರೈತರು ಹ?ರ್ವವನ್ನು ವ್ಯಕ್ತಪಡಿಸಿದ್ದಾರೆ. ದಪ್ಪ ದಪ್ಪ ಜೆಲ್ಲಿ ಕಲ್ಲಿನಂತೆ ಅವಿಕಲ್ಲು ನೆಲಕ್ಕೆ ಬಿದ್ದಿದ್ದು ನೆಲಗೊಂಡನಹಳ್ಳಿ, ಸಾರ್ಥಹಳ್ಳಿ ಆಜು ಬಾಜಿನ ಗ್ರಾಮಗಳಲ್ಲಿ ದಪ್ಪ ದಪ್ಪ ಅವಿಕಲ್ಲುಗಳು ಧರೆಗೆ ಸುರಿದಿದ್ದು ಅವಿಕಲ್ಲನ್ನು ಆಯ್ದುಕೊಂಡು ರೈತಾಪಿ ಜನರು ಬಾರಿ ಸಂತೋ?ವನ್ನು ವ್ಯಕ್ತಪಡಿಸಿ ಕುಣಿದು ಕುಪ್ಪಳಿಸಿದರು

## ಜಿಲ್ಲೆಯ ವಿವಿಧೆಡೆ ಸದ್ದು ಗದ್ದಲವಿಲ್ಲದೆ ಮಳೆ

**ಚಾಮರಾಜನಗರ:** ಜಿಲ್ಲೆಯ ವಿವಿಧೆಡೆ ಮಂಗಳವಾರ ಮುಂಜಾನೆ ಸದ್ದು ಗದ್ದಲವಿಲ್ಲದೆ ಮಳೆಯಾಗಿದೆ. ಮಂಗಳವಾರ ಬೆಳಗಿನ ಜಾವ 2 ಗಂಟೆಗೆ ಆರಂಭವಾದ ಗುಡುಗು, ಸಿಡಿಲು ಸಹಿತ ಮಳೆ ಬೆಳಗ್ಗೆ 6 ಗಂಟೆ ತನಕ ಸುರಿಯಿತು. ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಹನೂರು, ಯಳಂದೂರು, ಗುಂಡ್ಲುಪೇಟೆ ತಾಲೂಕು ವ್ಯಾಪ್ತಿಯಲ್ಲಿ ಭರ್ಜರಿ ಮಳೆಯಾಗಿದೆ. ಕಳೆದ ಕೆಲ ದಿನಗಳಿಂದಲೂ ಬಿಸಿಲಿನ ತಾಪಕ್ಕೆ ಬೆಂದು ಹೋಗಿದ್ದ ಜನತೆಗೆ ಮಳೆಯು ತಂಪೆರೆದಿದೆ. ಜಿಲ್ಲೆಯ ಹಲವು ಕಡೆಗಳಲ್ಲಿ ಸೋಮವಾರ ಸಂಜೆಯಿಂದಲೇ ಮಳೆ ಆರಂಭಗೊಂಡಿತು. ಹನೂರು ತಾಲೂಕಿನ ಮಾರಳ್ಳಿ ಗ್ರಾಮದಲ್ಲಿ ಸುರಿದ ಆಲಿಕಲ್ಲು ಮಳೆಗೆ ಮನೆಯ ಹೆಂಚುಗಳು ಹಾರಿ ಹೋಗಿವೆ. ಉಳಿದಂತೆ ಜಿಲ್ಲಾ ಕೇಂದ್ರ ಚಾಮರಾಜನಗರದಲ್ಲಿ ಮಧ್ಯರಾತ್ರಿ ಸುರಿದ ಮಳೆಯಿಂದಾಗಿ ಚರಂಡಿಯ ನೀರು ಪ್ರಮುಖ ರಸ್ತೆಗಳಲ್ಲಿ ಹರಿದು ಅವಾಂತರ ಸೃಷ್ಟಿಸಿದೆ. ತಗ್ಗು ಪ್ರದೇಶಗಳಲ್ಲಿರುವ ಮನೆಗಳಿಗೆ ಮಳೆ ನೀರು ನುಗ್ಗಿದೆ. ಚಾಮರಾಜನಗರದ ಸಂತೆಮರಹಳ್ಳಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ, ಜಿಲ್ಲಾಡಳಿತ ಭವನದ ಮುಂಭಾಗ ಸೇರಿದಂತೆ ಹಲವು ಕಡೆಗಳಲ್ಲಿ ಸರಾಗವಾಗಿ ಹರಿಯದೆ ರಸ್ತೆಯಲ್ಲಿಯೇ ಚರಂಡಿ ಮಿಶ್ರಿತ ಮಳೆಯ ನೀರು ಹರಿದು ಕಸ ಕಡ್ಡಿಯೆಲ್ಲ ರಸ್ತೆಯ ಮೇಲೆ ಹರಡಿತ್ತು, ಮಂಗಳವಾರ ಬೆಳಗ್ಗೆ ನಗರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಚರಂಡಿಯ ಮಣ್ಣು, ಕಸ ಕಡ್ಡಿಗಳನ್ನೆಲ್ಲ ತೆರವುಗೊಳಿಸಿ ಸಂಚಾರಕ್ಕೆ ಅವಕಾಶ ಮಾಡಿಕೊಟ್ಟರು.

ಜಿಲ್ಲೆಯ ಹಲವಾರು ಕಡೆ ಮನೆಗಳಯ ಸೇರಿದಂತೆ ಇತರೆ ಹಲವು ಬೆಳೆಗಳು ನೆಲಕಚ್ಚಿವೆ. ಒಂದೆಡೆ ಮಳೆಯಿಂದಾಗಿ ರೈತರ ಮೊಗದಲ್ಲಿ ಹರ್ಷ ಮೂಡಿದರೆಮತ್ತೊಂದೆಡೆ ಮಳೆಯಿಂದಾಗಿ ಫಸಲು ನಷ್ಟವಾಗಿ ರೈತರು ಸಂಕಷ್ಟ ಎದುರಿಸುವಂತಾಗಿದೆ. ಮಳೆಯಿಂದಾಗಿ ಗ್ರಾಮೀಣ ಭಾಗಗಳಲ್ಲೂ ರಸ್ತೆಗಳು ಕೆಸರು ಗದ್ದೆಯಂತಾಗಿದ್ದು ಓಡಾಡಲು ಆಗದ ಸ್ಥಿತಿ ನಿರ್ಮಾಣವಾಗಿದೆ.

### ಕೃಷಿ ಚಟುವಟಿಕೆ ಆರಂಭ : ಮಳೆಯ ನಿರೀಕ್ಷೆಯಲ್ಲಿದ್ದ ರೈತರಿಗೆ

**ಮಳೆಯು ವರದಾನವಾಗಿದೆ. ಮಳೆ ಇಲ್ಲದೇ ಈಟಾಗಲೇ ಬಿತ್ತನೆ ಮಾಡಿರುವ ಫಸಲು ಒಣಗುತ್ತಿತ್ತು. ಮತ್ತೊಂದೆಡೆ ಬಿತ್ತನೆ ಮಾಡಲು ರೈತರಿಗೆ ತೊಂದರೆಯಾಗಿತ್ತು. ಆದರೆ, ದಿಢೀರನೆ ಬಂದ ಮಳೆಯಿಂದಾಗಿ ರೈತರ ಮೊಗದಲ್ಲಿ ಹರ್ಷ ಮೂಡಿದ್ದು ತಮ್ಮ ಜಮೀನುಗಳಲ್ಲಿ ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದು ಬಿತ್ತನೆ ಕಾರ್ಯ ಮಾಡುತ್ತಿದ್ದಾರೆ.**

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಶಿಲ್ಪಾ ನಾಗ್ ಸೂಚನೆ

# ಜಿಲ್ಲೆಯಲ್ಲಿ ಮೇವು, ನೀರಿಗೆ ಸಮಸ್ಯೆ ಆಗದಿರಲಿ

**ಚಾಮರಾಜನಗರ:** ಜಿಲ್ಲೆಯಲ್ಲಿ ಬರ ನಿರ್ವಹಣೆಗೆ ಸಂಬಂಧಿಸಿದಂತೆ ಜನ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಜಾನುವಾರುಗಳ ಮೇವಿಗೆ ಯಾವುದೇ ಕೊರತೆಯಾಗದಂತೆ ಜಿಲ್ಲಾಡಳಿತ ವತಿಯಿಂದ ಕ್ರಮವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

ಗುಂಡ್ಲುಪೇಟೆ, ಹನೂರು ಮತ್ತು ಚಾಮರಾಜನಗರ ತಾಲ್ಲೂಕುಗಳನ್ನು ತೀವ್ರ ಬರಪೀಡಿತ ತಾಲ್ಲೂಕುಗಳೆಂದು ಹಾಗೂ ಕೊಳ್ಳೇಗಾಲ, ಯಳಂದೂರು ತಾಲ್ಲೂಕುಗಳನ್ನು ಸಾಧಾರಣ ಬರಪೀಡಿತ ತಾಲ್ಲೂಕುಗಳೆಂದು ಸರ್ಕಾರವು ಈಗಾಗಲೇ ಘೋಷಿಸಿದ್ದು, ಬರ ನಿರ್ವಹಣೆ ಸಂದರ್ಭದಲ್ಲಿ ಅನೇಕ ತುರ್ತು ಕ್ರಮಗಳನ್ನು ಜಿಲ್ಲಾಡಳಿತದಿಂದ ಕೈಗೊಳ್ಳಲಾಗಿರುವ ನಿಟ್ಟಿನಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರಕ್ಕೆ ಸಾರ್ವಜನಿಕರಿಂದ ಬರುವ ದೂರುಗಳ ಸಂಖ್ಯೆ ಗಣನೀಯವಾಗಿ ಇಳಿಮುಖವಾಗಿದೆ.

ಜಿಲ್ಲೆಯಲ್ಲಿ ಬರ ನಿರ್ವಹಣೆಗಾಗಿ ಇದುವರೆಗೆ 16 ಬಾರಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಸಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಬರ ನಿರ್ವಹಣೆ ಕುರಿತು ಚರ್ಚಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶನಗಳನ್ನು ನೀಡಲಾಗಿದೆ. ಈ ಸಂಬಂಧ ಪ್ರತೀ 15 ದಿನಗಳಿಗೊಮ್ಮೆ ಸಭೆ ನಡೆಸಿ ಜನ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಕೊರತೆ ಉಂಟಾಗದಂತೆ ಅತ್ಯಗತ್ಯವಾಗಿರುವ ತುರ್ತು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ತಾಲ್ಲೂಕು ಮಟ್ಟದಲ್ಲೂ ಸಂಬಂಧಪಟ್ಟ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಸಮಿತಿ ರಚಿಸುವುದಲ್ಲದೇ ಬರ ನಿರ್ವಹಣೆ ಕುರಿತು ಸಭೆ ನಡೆಸಿ ಆಯಾ ತಾಲ್ಲೂಕುಗಳ ಬರ ನಿರ್ವಹಣೆಗೆ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಿ ಅನು?ಾನಗೊಳಿಸಲಾಗುತ್ತಿದೆ.

ಜಿಲ್ಲೆಯ ಬರ ನಿರ್ವಹಣೆಗೆ ಸಂಬಂಧಪಟ್ಟಂತೆ ಗ್ರಾಮೀಣ ಭಾಗದ ಸಾರ್ವಜನಿಕರ ಕುಡಿಯುವ ನೀರಿನ ನಿರ್ವಹಣೆಗಾಗಿ 2024ರ ಫೆಬ್ರವರಿ ಮಾಹೆಯಲ್ಲಿ ಜಿಲ್ಲೆಯಾದ್ಯಂತ ಸರ್ವೆ ಕಾರ್ಯ ನಡೆಸಿ ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಂಬಂಧ ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಿ (ಚಾಮರಾಜನಗರ–48, ಗುಂಡ್ಲುಪೇಟೆ–17, ಹನೂರು–15, ಕೊಳ್ಳೇಗಾಲ–20, ಯಳಂದೂರು–11) ಹಾಗೂ ತುರ್ತು ಸಂದರ್ಭದಲ್ಲಿ ಕುಡಿಯುವ ನೀರಿನ ಕೊರತೆಯನ್ನು ನಿವಾರಿಸಲು 69 ಖಾಸಗಿ ಹೆಚ್ಚುವರಿ ಇಳುವರಿ ಕೊಡುವ ಬೋರ್ವೆಲ್‌ಗಳನ್ನು ಗುರುತಿಸಿ (ಚಾಮರಾಜನಗರ–17, ಗುಂಡ್ಲುಪೇಟೆ–16, ಕೊಳ್ಳೇಗಾಲ–11, ಯಳಂದೂರು 11 ಹಾಗೂ ಹನೂರು–14) ಖಾಸಗಿ ಬೋರ್ವೆಲ್‌ಗಳ ಮಾಲೀಕರಿಂದ ಈಗಾಗಲೇ ಒಪ್ಪಂದ ಪತ್ರಗಳನ್ನು ಪಡೆಯಲಾಗಿದೆ. ಅವಶ್ಯವಿರುವ ಕಡೆ ಈಗಾಗಲೇ ಖಾಸಗಿ ಬೋರ್ ವೆಲ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಜಿಲ್ಲಾ ಕೇಂದ್ರದಲ್ಲಿ ಸಹಾಯವಾಣಿ ಕೇಂದ್ರವನ್ನು ತೆರೆದು ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವುಗಳ ಪೂರೈಕೆಗೆ ಸಂಬಂಧಪಟ್ಟಂತೆ ಸಂಪರ್ಕಿಸಲು ಸಾರ್ವಜನಿಕರಿಗೆ ಮಾಹಿತಿ ನೀಡಲಾಗಿದೆ.

ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ಸಹಾಯವಾಣಿಗೆ 2024ರ ಮಾರ್ಚ್ 5 ರಿಂದ ಮೇ 4ರವರೆಗೆ (ಚಾಮರಾಜನಗರ–71, ಹನೂರು–57, ಗುಂಡ್ಲುಪೇಟೆ–26, ಕೊಳ್ಳೇಗಾಲ–13) ಸೇರಿದಂತೆ ಒಟ್ಟು 168 ಕುಡಿಯುವ ನೀರಿನ ಸಮಸ್ಯೆಗಳ ಕುರಿತು ದೂರುಗಳನ್ನು ಸ್ವೀಕರಿಸಲಾಗಿದ್ದು, ಜಿಲ್ಲೆಯ ಸಾರ್ವಜನಿಕರಿಂದಲ್ಲದೇ ಪತ್ರಿಕೆ ಮತ್ತು ದೃಶ್ಯ ಮಾಧ್ಯಮಗಳಿಂದ ವರದಿಯಾಗುವ ಸುದ್ದಿಗಳನ್ನು ಸಹ ಸಾರ್ವಜನಿಕರ ದೂರುಗಳೆಂದೇ ಭಾವಿಸಲಾಗಿದೆ. 168 ದೂರುಗಳಲ್ಲಿ 159 ದೂರುಗಳಿಗೆ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿ 24 ಗಂಟೆಯೊಳಗೆ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲಾಗಿದೆ. ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ಚಾಮರಾಜನಗರ ನಗರಸಭೆಯ 10 ವಾರ್ಡ್‌ಗಳಲ್ಲಿ ಒಟ್ಟು 86 ಟ್ಯಾಂಕರ್ ನೀರನ್ನು, ಗುಂಡ್ಲುಪೇಟೆ ಪುರಸಭೆಯ ಒಟ್ಟು 10 ವಾರ್ಡ್‌ಗಳಲ್ಲಿ 376 ಟ್ಯಾಂಕರ್ ನೀರನ್ನು ಹಾಗೂ ಹನೂರು ಪಟ್ಟಣ ಪಂಚಾಯಿತಿಯಲ್ಲಿ ಒಟ್ಟು 6 ವಾರ್ಡ್‌ಗಳಲ್ಲಿ 9 ಟ್ಯಾಂಕರ್ ನೀರನ್ನು ಸರಬರಾಜು ಮಾಡಲಾಗಿದೆ. ಗುಂಡ್ಲುಪೇಟೆ ಪುರಸಭೆಗೆ ಸಂಬಂಧಪಟ್ಟಂತೆ ಕಬಿನಿ ಕುಡಿಯುವ ನೀರಿನ ಸಂಬಂಧ ದುರಸ್ಥಿ ಮಾಡಿಸಲು ಸಾಧ್ಯವಿಲ್ಲದ ಮೋಟರ್ ಅನ್ನು ತೆಗೆದು ಹಾಕಿ ಟೆಂಡರ್ ಮೂಲಕ ಹೊಸ ಮೋಟಾರನ್ನು ಖರೀದಿಸಿ ಅಳವಡಿಸಿ ಗುಂಡ್ಲುಪೇಟೆ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲಾಗಿದೆ.

ಗ್ರಾಮೀಣ ಭಾಗದಲ್ಲಿ ಹನೂರು ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಕುಡಿಯುವ ನೀರನ್ನು ಒಟ್ಟು 157 ಟ್ಯಾಂಕರ್ ಮೂಲಕ ಸರಬರಾಜು ಮಾಡಲಾಗಿದೆ. ಅದರಲ್ಲೂ ಅತೀ ಹೆಚ್ಚಾಗಿ ಮಲೆ ಮಹದೇಶ್ವರಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಕೊಕ್ಕಬೊರೆ, ಇಂಡಿಗನತ್ತ, ಮಂದಾರೆ ಗ್ರಾಮಗಳಿಗೆ ಸರಬರಾಜು ಮಾಡಲಾಗಿದೆ. ಗುಂಡ್ಲುಪೇಟೆ ತಾಲ್ಲೂಕಿನ ನೇನೇಕಟ್ಟೆ, ಪಂಜನಹಳ್ಳಿ ಗ್ರಾಮಗಳಿಗೆ ತುರ್ತು ಸಂದರ್ಭದಲ್ಲಿ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ಸರಬರಾಜು ಮಾಡಲಾಗಿದೆ.

ಬರ ನಿರ್ವಹಣೆ ಸಂದರ್ಭದಲ್ಲಿ ಕುಡಿಯುವ ನೀರಿಗೆ ಸಂಬಂಧ ಈಗಾಗಲೇ ಚಾಮರಾಜನಗರ ತಾಲ್ಲೂಕಿನಲ್ಲಿ 05, ಕೊಳ್ಳೇಗಾಲ 11, ಗುಂಡ್ಲುಪೇಟೆ 21 ಹಾಗೂ ಹನೂರು ತಾಲೂಕಿನಲ್ಲಿ 41 ಹೊಸ ಬೋರ್ವೆಲ್‌ಗಳನ್ನು ಕೊರೆಸಲಾಗಿದೆ. ಅಲ್ಲದೇ ಕೊಳ್ಳೇಗಾಲ ತಾಲ್ಲೂಕಿನಲ್ಲಿ 1 ಮತ್ತು ಹನೂರು ತಾಲ್ಲೂಕಿನಲ್ಲಿ ದುರಸ್ಥಿಗೆ ಒಳಗಾಗಿದ್ದ 22 ಕೊಳವೆ ಬಾವಿಗಳನ್ನು ಸರಿಪಡಿಸಲಾಗಿದೆ.

ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವುಗಳ ಸಂಬಂಧ ಜಿಲ್ಲಾಡಳಿತ ವತಿಯಿಂದ ತುರ್ತು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಈಗಾಗಲೇ ಜಿಲ್ಲೆಯಾದ್ಯಂತ 31,943 ಮೇವಿನ ಕಿಟ್‌ಗಳನ್ನು ಅರ್ಹ 14,045 ರೈತರಿಗೆ ವಿತರಿಸಲಾಗಿದೆ. ಈಗಾಗಲೇ ಹಲವು ರೈತರು ಜಾನುವಾರುಗಳಿಗೆ ಮೇವಿನ ಬೆಳೆಯನ್ನು ಬೆಳೆದಿರುತ್ತಾರೆ.

ಬರ ನಿರ್ವಹಣೆ ಸಂದರ್ಭದಲ್ಲಿ ಚಾಮರಾಜನಗರ ಜಿಲ್ಲೆಯ ರೈತರ ಜಾನುವಾರುಗಳ ಮೇವಿನ ಸಮಸ್ಯೆಗಳಿಗೆ ಸ್ಪಂದಿಸಿ ರಾಜ್ಯದಲ್ಲಿಯೇ ಅತೀ ಹೆಚ್ಚು ಗೋಶಾಲೆಗಳನ್ನು ತೆರೆದು ಜಾನುವಾರುಗಳಿಗೆ ಮೇವನ್ನು ಒದಗಿಸಲಾಗುತ್ತಿದೆ. ಹನೂರು ತಾಲ್ಲೂಕಿನಲ್ಲಿ ಈಗಾಗಲೇ 17 ಗೋಶಾಲೆಗಳನ್ನು ತೆರೆದು 9546 ದೊಡ್ಡ ಜಾನುವಾರುಗಳಿಗೆ ಮೇವು ಒದಗಿಸಿ ಆಶ್ರಯ ಕಲ್ಪಿಸಲಾಗಿದೆ. 1 ಕಡೆ ಮೇವು ನಿಧಿಯನ್ನು ತೆರೆಯಲಾಗಿದೆ. ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಅವಶ್ಯವಿದ್ದ 1 ಕಡೆ ಮೇವು ನಿಧಿಯನ್ನು ತೆರೆದು 947 ರೈತರಿಗೆ 115 ಟನ್, ಚಾಮರಾಜನಗರ ತಾಲ್ಲೂಕಿನಲ್ಲಿ 228 ರೈತರಿಗೆ 51.92 ಟನ್ ಸೇರಿದಂತೆ 1175 ರೈತರಿಗೆ ಒಟ್ಟು 166.74 ಟನ್ ಗಳ?ು ಮೇವನ್ನು ಮೇವು ಬ್ಯಾಂಕ್ ನಿಧಿಯಿಂದ ವಿತರಿಸಲಾಗಿದೆ.

ಅವಶ್ಯವಿರುವ ಕಡೆ ಮೇವು ಬ್ಯಾಂಕ್‌ಗಳನ್ನು ಸ್ಥಾಪಿಸಿ ರೈತರ ಜಾನುವಾರುಗಳಿಗೆ ಮೇವು ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜಾನುವಾರುಗಳಿಗೆ ಗ್ರಾಮಗಳಲ್ಲಿರುವ ಕುಡಿಯುವ ನೀರಿನ ತೊಟ್ಟಿಯನ್ನು ಸ್ವಚ್ಛ ಗೊಳಿಸಲಾಗುತ್ತಿದೆ. ಅವಶ್ಯವಿರುವ ಕಡೆ ದುರಸ್ಥಿಯನ್ನು ಗ್ರಾಮ ಪಂಚಾಯಿತಿ ವತಿಯಿಂದ ಮಾಡಿಸಲಾಗುತ್ತಿದೆ. ಅಲ್ಲದೇ ಜಾನುವಾರುಗಳಿಗೆ ಕುಡಿಯುವ ನೀರಿನ ಮೂಲಗಳು ಯಾವುದೂ ಇಲ್ಲದಿದ್ದಲ್ಲಿ ಟ್ಯಾಂಕರ್ ಮೂಲಕ ತೊಟ್ಟಿಗೆ ನೀರು ತುಂಬಿಸಲು ಅಧಿಕಾರಿಳಿಗೆ ನಿರ್ದೇಶನ ನೀಡಲಾಗಿದೆ. ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರವು ತೆರೆದಿರುವ ಸಹಾಯವಾಣಿ ಕೇಂದ್ರಕ್ಕೆ ಕುಡಿಯುವ ನೀರು ಮತ್ತು ಮೇವಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಬರುವ ದೂರುಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ 24 ಗಂಟೆಗಳಲ್ಲಿ ಸಮಸ್ಯೆಗೆ ಪರಿಹಾರವನ್ನು ಒದಗಿಸಲಾಗುತ್ತಿದೆ. ಜಿಲ್ಲೆಯಲ್ಲಿ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವುಗಳಿಗೆ ಸಂಬಂಧಪಟ್ಟಂತೆ ಅಲಭ್ಯತೆಯಿಂದ ಯಾವುದೇ ಜಾನುವಾರುಗಳು ಮೃತಪಟ್ಟಿಲ್ಲದಿರುವುದನ್ನು ಜಿಲ್ಲಾಡಳಿತವು ದೃಢಪಡಿಸಿಕೊಂಡಿದೆ ಎಂದು ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಬೆಳೆ ಹಾನಿ ಪರಿಹಾರ ಸಂಬಂಧ ಸಹಾಯವಾಣಿ ಕೇಂದ್ರಗಳ ಸ್ಥಾಪನೆ

ಚಾಮರಾಜನಗರ ಜಿಲ್ಲೆಯಲ್ಲಿ ಬರ ನಿರ್ವಹಣೆ ಸಂಬಂಧ 2023ರ ಮುಂಗಾರು ಹಂಗಾಮಿನಲ್ಲಿ ಬರ ಪರಿಸ್ಥಿಯಿಂದ ಉಂಟಾದ ಬೆಳೆ ಹಾನಿ ಪರಿಹಾರವನ್ನು ಪಾವತಿಸುವ ಬಗ್ಗೆ ರೈತರಿಗೆ ಮಾಹಿತಿ ನೀಡಲು ಸಹಾಯವಾಣಿ (ಹೆಲ್ಪ್‌ಡೆಸ್ಕ್) ಕೇಂದ್ರವನ್ನು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ತೆರೆಯಲಾಗಿದೆ. ಆಯಾ ತಾಲೂಕು ವ್ಯಾಪ್ತಿಗೆ ಒಳಪಡುವ ಅರ್ಹ ಫಲಾನುಭವಿ ರೈತರಿಗೆ ಈಗಾಗಲೇ ಪಾವತಿಯಾಗಿರುವ ಬೆಳೆಹಾನಿ ಪರಿಹಾರದ ವಿವರಗಳನ್ನು ಹಾಗೂ ಅರ್ಹತೆಗನುಗುಣವಾಗಿ ನಿಯಮಾನುಸಾರ ಪ್ರಸ್ತುತ ಪಾವತಿಯಾಗುತ್ತಿರುವ ಇನ್ನುಳಿದ ಬಾಕಿ ಬೆಳೆ ಹಾನಿ ಪರಿಹಾರದ ಮೊತ್ತದ ವಿವರಗಳ ಮಾಹಿತಿಯನ್ನು ಸಾರ್ವಜನಿಕರು ಹಾಗೂ ರೈತರಿಗೆ ನೀಡುವ ಸಲುವಾಗಿ ಉಪವಿಭಾಗಾಧಿಕಾರಿಗಳ ಕಚೇರಿ, ತಹಶೀಲ್ದಾರರ ಕಚೇರಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ತೆರೆಯಲಾಗಿದೆ. ಕೊಳ್ಳೇಗಾಲ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ತೆರೆಯಲಾಗಿರುವ ಸಹಾಯವಾಣಿ ಕೇಂದ್ರ, ದೂ.ಸಂ 08224-252329, ಚಾಮರಾಜನಗರ ತಾಲೂಕು ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗಿರುವ ಸಹಾಯವಾಣಿ ಕೇಂದ್ರ ದೂ.ಸಂ 08226-200254, ಗುಂಡ್ಲುಪೇಟೆ ತಾಲೂಕು ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗಿರುವ ಸಹಾಯವಾಣಿ ಕೇಂದ್ರ, ದೂ. ಸಂ 08229-222225, ಯಳಂದೂರು ತಾಲೂಕು ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗಿರುವ ಸಹಾಯವಾಣಿ ಕೇಂದ್ರ, ದೂ. ಸಂ 08226-240029, ಕೊಳ್ಳೇಗಾಲ ತಾಲೂಕು ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗಿರುವ ಸಹಾಯವಾಣಿ ಕೇಂದ್ರ, ದೂ.ಸಂ 08224-252329 ಹಾಗೂ ಹನೂರು ತಾಲೂಕು ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗಿರುವ ಸಹಾಯವಾಣಿ ದೂ.ಸಂ 08224-268032 ಕೇಂದ್ರಗಳನ್ನು ತೆರೆಯಲಾಗಿದೆ. ಸಾರ್ವಜನಿಕರು ಹಾಗೂ ರೈತರು ಸಹಾಯವಾಣಿ ಕೇಂದ್ರಗಳ ಸದುಪಯೋಗ ಪಡೆಯುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹನೂರು ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ಮೇವು ಬ್ಯಾಂಕ್ ಸ್ಥಾಪನೆ

**ಚಾಮರಾಜನಗರ, ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸುವ ಸಲುವಾಗಿ ಜಿಲ್ಲಾಡಳಿತದಿಂದ ಹಲವು ಕ್ರಮಗಳನ್ನು ಕೈಗೊಂಡಿದ್ದು, ಪ್ರಸ್ತುತ ಹನೂರು ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಆವರಣದಲ್ಲಿಂದು ಮೇವು ಬ್ಯಾಂಕ್ ತೆರೆಯಲಾಗಿದೆ. ತೀವ್ರ ಬರದಿಂದ ಹನೂರು ತಾಲೂಕಿನ ಜಾನುವಾರುಗಳಿಗೆ ಉಂಟಾಗಿರುವ ಮೇವಿನ ಕೊರತೆಯನ್ನು ನೀಗಿಸಲು ಈಗಾಗಲೇ ತಾಲೂಕಿನಲ್ಲಿ 17 ಗೋಶಾಲೆಗಳನ್ನು ತೆರೆಯಲಾಗಿದ್ದು, ಸದರಿ ಗೋ ಶಾಲೆಗಳಿಗೆ 800 ಟನ್ ಮೇವು ವಿತರಿಸಲಾಗಿದೆ. ಪ್ರಸ್ತುತ ತೆರೆಯಲಾಗಿರುವ ಮೇವು ಬ್ಯಾಂಕ್ ಗಳಲ್ಲಿ 1 ಕೆ.ಜಿ ಒಣ ಮೇವಿಗೆ 2 ರೂ. ನಂತೆ ಸಬ್ಸಿಡಿ ದರದಲ್ಲಿ ಪ್ರತಿ ದಿನಕ್ಕೆ 50 ಮಂದಿ ರೈತರಿಗೆ ಒಬ್ಬರಂತೆ, ಒಂದು ಜಾನುವಾರಿಗೆ ದಿನಕ್ಕೆ 6 ಕೆ.ಜಿಯಂತೆ ಒಂದು ವಾರಕ್ಕೆ ಲಭ್ಯವಾಗುವಷ್ಟು ಮೇವು ವಿತರಿಸಲಾಗುತ್ತಿದೆ. ಮೇವು ಬ್ಯಾಂಕಿನಲ್ಲಿ ಬೆಳಿಗ್ಗೆ 9.30 ರಿಂದ ಸಂಜೆ 5 ಗಂಟೆಯವರೆಗೆ ಮೇವು ವಿತರಿಸಲಾಗುತ್ತದೆ. ಮೇವು ಪಡೆಯಲು ಆಸಕ್ತ ರೈತರು ಸ್ಥಳೀಯ ಪಶುವೈದ್ಯ ಸಂಸ್ಥೆಯಿಂದ ದೃಢೀಕರಣ ಪತ್ರವನ್ನು ಹಾಜರುಪಡಿಸಿ ಮೇವು ಪಡೆಯುವಂತೆ ಹನೂರು ತಾಲೂಕು ತಹಶೀಲ್ದಾರ್ ಗುರುಪ್ರಸಾದ್ ಹಾಗೂ ಮುಖ್ಯ ಪಶುವೈದ್ಯಾಧಿಕಾರಿ ಡಾ. ಸಿದ್ದರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಕತ್ತೆಗಳಿಗೆ ಮದುವೆ ಮಾಡಿಸುವ ಮೂಲಕ ಮಳೆಗೆ ಪ್ರಾರ್ಥನೆ



**ತಿಪಟೂರು :** ಭೀಕರ ಬರಗಾಲ ಆವರಿಸಿರುವುದರಿಂದ ಕುಡಿಯುವ ನೀರಿಗೂ ತತ್ವಾರ ಉಂಟಾಗಿದ್ದು, ಮಳೆಗಾಲ ಆರಂಭವಾದರೂ ಮಳೆ ಬರುತ್ತಿಲ್ಲ ಎಂದು ತಾಲೂಕಿನ ನೊಣವಿನಕೆರೆ ಹೋಬಳಿ ಆಲ್ಬೂರು ಗ್ರಾಮಸ್ಥರು ಗ್ರಾಮದೇವತೆ ಶ್ರೀ ಕೆಂಪಮ್ಮದೇವಿ ದೇವಸ್ಥಾನದ ಆವರಣದಲ್ಲಿ ಕತ್ತೆಗಳಿಗೆ ಮದುವೆ ಮಾಡಿಸುವ ಮೂಲಕ ವರುಣದೇವನಿಗಾಗಿ ಪ್ರಾರ್ಥನೆ ಸಲ್ಲಿಸಿದರು.

ಕಳೆದ ಎರಡು ವರ್ಷಗಳಿಂದ ನಿರೀಕ್ಷಿತ ಮಳೆಯಾಗದೆ ಕೆರೆಕಟ್ಟೆಗಳು ಹಾಗೂ ಜಲಮೂಲಗಳು ಬತ್ತಿಹೋಗುತ್ತಿರುವುದರಿಂದ ಜನ–ಜಾನುವಾರುಗಳು ಸೇರಿದಂತೆ ಜೀವ ಸಂಕುಲವು ಹನಿ ನೀರಿಗಾಗಿ ಪರದಾಡುವಂತಾಗಿದ್ದು ನೀರಿಗಾಗಿ ಹಾಹಾಕಾರ ಉಂಟಾಗಿದೆ. ಮಳೆಗಾಲ ಪ್ರಾರಂಭವಾಗಿ ಭರಣಿ, ಅಶ್ವಿನಿ ಮಳೆಗಳು ಮುಗಿಯುತ್ತಾ ಬಂದಿದ್ದರೂ ವರುಣನ ಕೃಪೆ ಆರಂಭವಾಗಿಲ್ಲ. ಈ ವೇಳೆಗಾಗಲೇ ಪೂರ್ವ ಮುಂಗಾರು ಮಳೆ ಪ್ರಾರಂಭವಾಗಿ ಮುಂಗಾರು ಬೆಳೆಗಳನ್ನು ಬಿತ್ತನೆ ಮಾಡಬೇಕಿತ್ತು. ಆದರೆ ಮಳೆರಾಯನ ಕೃಪೆಯಾಗದ ಕಾರಣ ಎಲ್ಲಿ ಮಳೆ ಬರುವುದಿಲ್ಲವೋ ಎಂಬ ಆತಂಕ ಎಲ್ಲರಲ್ಲೂ ಮನೆ ಮಾಡಿದೆ. ಸುಡು ಬಿಸಿಲಿಗೆ ಜನ–ಜಾನುವಾರುಗಳು ಹೈರಾಣಾಗಿದ್ದು ಮಳೆ ಬಂದರೆ ಸಾಕಪ್ಪ ಎಂದು ರೈತರು ಮಳೆಗಾಗಿ ಆಗಸದತ್ತ ಮುಖಮಾಡಿದ್ದಾರೆ. ಪೂರ್ವಜರು ಮಳೆ ಬಾರದಿದ್ದರೆ ಕತ್ತೆಗಳ ಮದುವೆ, ಕಪ್ಪೆಗಳ ಮದುವೆ ಮತ್ತು ಚಿಕ್ಕ ಮಕ್ಕಳಿಗೆ ಮದುವೆ ಮಾಡಿಸುವ ಮೂಲಕ ವರುಣನಿಗೆ ಪೂಜೆ ಸಲ್ಲಿಸಿ ಪ್ರಾರ್ಥಿಸುತ್ತಿದ್ದರು. ಈ ವಾಡಿಕೆಯಂತೆ ಇಲ್ಲಿನ ಆಲ್ಬೂರು ಗ್ರಾಮದಲ್ಲಿ ಶ್ರೀ ಕೆಂಪಮ್ಮದೇವಿ ದೇವಸ್ಥಾನದಲ್ಲಿ ಕತ್ತೆಗಳಿಗೆ ಮದುವೆ ಮಾಡಿಸಿ ನವ ವಧು–ವರರಂತೆ ಕತ್ತೆಗಳನ್ನು ಶೃಂಗಾರ ಮಾಡಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿ ಮಳೆರಾಯನನ್ನು ಭಕ್ತಿಯಿಂದ ಪ್ರಾರ್ಥಿಸಲಾಯಿತು. ಕತ್ತೆಗಳಿಗೆ ಮದುವೆ ಮಾಡಿದರೆ ಒಂದೆರಡು ದಿನಗಳಲ್ಲಿ ಮಳೆ ಬರುತ್ತದೆ ಎಂಬುದು ಹಿರಿಯರ ನಂಬಿಕೆಯಾಗಿದ್ದು ನಮ್ಮಗ್ರಾಮಸ್ಥರೂ ಸಹ ಕತ್ತೆಗಳ ಮದುವೆ ಮಾಡಿದ್ದಾರೆಂದು ರೈತ ಸಂಘದ ಮುಖಂಡರಾದ ಆಲ್ಬೂರು ಗಂಗಾಧರ್ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಅಧ್ಯಕ್ಷ ಎ.ಬಿ. ಕೃಷ್ಣೇಗೌಡ, ಗ್ರಾಮಸ್ಥರಾದ ಸೋಮಶೇಖರ್, ಗಿರೀಶ್‌ಗೌಡ, ಕೆ. ಗಂಗಾಧರ್, ಕಂಚಿರಾಯಪ್ಪ, ರಮೇಶ್, ಸಂತೋಷ್, ಹೇಮಂತ್, ಪ್ರಸನ್ನಕುಮಾರ್, ಗಂಗಾಧರಯ್ಯ ಮತ್ತಿತರರಿದ್ದರು.

## ಛಾಯಗ್ರಾಹಕರಿಗೆ ಕ್ಯಾಮರಾ ಕಾರ್ಯಾಗಾರಗಳು ತುಂಬಾ ಮುಖ್ಯ

**ಕೋಲಾರ:** ಛಾಯಾಗ್ರಹಣ ಕ್ಷೇತ್ರದಲ್ಲಿ ಹೊಸ ಹೊಸ ಡಿಜಿಟಲ್ ಕ್ಯಾಮರಗಳು ಮಾರುಕಟ್ಟೆಗೆ ಬರುತ್ತಿದ್ದು, ಕ್ಯಾಮೆರಾಗಳ ಬಳಕೆ, ತಂತ್ರಜ್ಞಾನ, ವೈಶಿಷ್ಟ್ಯ ಬಗ್ಗೆ ತಿಳಿದುಕೊಳ್ಳಲು ಛಾಯಗ್ರಾಹಕರಿಗೆ ಕಾರ್ಯಾಗಾರಗಳು ತುಂಬಾ ಮುಖ್ಯ ಎಂದು ಕೋಲಾರ ಜಿಲ್ಲಾ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ವಿ.ಕೃಷ್ಣ ರವರು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಕೋಲಾರ ಜಿಲ್ಲಾ ಛಾಯಾಗ್ರಾಹಕರ ಸಂಘ ಹಾಗೂ ಕೆನಾನ್ ಕ್ಯಾಮರ ಸಂಸ್ಥೆಯ ಸಹಯೋಗದಲ್ಲಿ ಮಂಗಳವಾರ ನಡೆದ ''ಕೋಲಾರ ಛಾಯಗ್ರಾಹಕರಿಗೆ ಒಂದು ದಿನದ ಡಿಜಿಟಲ್ ಕ್ಯಾಮರ ಬಗ್ಗೆ ತರಬೇತಿ'' ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು, ಡಿಜಿಟಲ್ ಫೋಟೋಗ್ರಫಿಯ ತಂತ್ರಗಳು ಮತ್ತು ಕೌಶಲ್ಯಗಳನ್ನು ಕಲಿಸುವಲ್ಲಿ, ಛಾಯಾಗ್ರಹಣ ಪ್ರತಿಭೆಯನ್ನು ಅಭಿವೃದ್ಧಿಪಡಿಸಲು ಈ ವಿಶೇಷ ಕಾರ್ಯಾಗಾರ ಸಹಕಾರಿಯಾಗಿದ್ದು ಛಾಯಗ್ರಾಹಕರು ಕಾರ್ಯಗಾರದ ಸದುಪಯೋಗವನ್ನು ಪಡೆಯಿರಿ ಎಂದರು.

ಕೆನಾನ್ ಕ್ಯಾಮರ ಕಂಪನಿಯ ದಕ್ಷಿಣ ವಲಯ ತರಬೇತುದಾರ ದೀಪಿನ್ ಕುಮಾರ್ ರವರು, ಕೆನಾನ್ ಕ್ಯಾಮೆರಾ ಸ್ವರೂಪಗಳು, ಮೆಗಾಪಿಕ್ಸೆಲ್‌ಗಳು, ಕ್ಯಾಮೆರಾದ ದೇಹ, ಲೆನ್ಸ್‌ಗಳು, ಫೋಕಲ್ ಲೆಂತ್ ಮತ್ತು ಕ್ಯಾಮೆರಾ ಬಿಡಿಭಾಗಗಳಂತಹ ಮೂಲಭೂತ ಅಂಶಗಳನ್ನು ವಿವರಿಸಿದರು. ಆಟೋಫೋಕಸ್ ಪಾಯಿಂಟ್‌ಗಳು ಮತ್ತು ಫೋಕಸ್ ಮೋಡ್, ತೀಕ್ಷ್ಣತೆ, ವೈಟ್ ಬ್ಯಾಲೆನ್ಸ್, ಫಿಲ್ಟರ್‌ಗಳನ್ನು ಬಳಸುವುದ ಕುರಿತು ಸಂಪೂರ್ಣ ಮಾಹಿತಿ ನೀಡಿದರು. ಇದೇ ಸಂಧರ್ಭದಲ್ಲಿ ಕೋಲಾರ ಜಿಲ್ಲಾ ಛಾಯಾಗ್ರಾಹಕರ ಸಂಘದ ವತಿಯಿಂದ ಕೆನಾನ್ ಕಂಪನಿಯ ತರಬೇತುದಾರರಾದ ಬಾಲಂಕೇಶ್ವರ್, ನಾಗೇಶ್, ಯಲ್ಲಪ್ಪ ಗೌಡ ಪಾಟೀಲ್ ಹಾಗೂ ರೂಪದರ್ಶಿ ರವರನ್ನು ಸನ್ಮಾನಿಸಿದರು. ಕಾರ್ಯಾಗಾರದಲ್ಲಿ ಕೋಲಾರ ತಾಲ್ಲುಕು ಛಾಯಾಗ್ರಾಹಕರ ಸಂಘದ ಗೌರವಾಧ್ಯಕ್ಷ ಶ್ರೀನಿವಾಸ್, ಅಧ್ಯಕ್ಷ ಸ್ಪಂದನ ರಂಗನಾಥ್, ಸಂಘದ ಎಲ್ಲಾ ಪದಾಧಿಕಾರಿಗಳು ಹಾಗೂ ಜಿಲ್ಲೆಯ ಛಾಯಾಗ್ರಾಹಕರು ಭಾಗವಹಿಸಿದರು.





ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, ವಿಶ್ವವಿದ್ಯಾನಿಲಯದ ಮಟ್ಟದಲ್ಲಿ ಕಲ್ಪಸಿರಿ ಉತ್ಸವ ಎಂಬ ಕಾರ್ಯಕ್ರಮವನ್ನು 30 ಮೇ 2024 ರಂದು ಆಯೋಜಿಸಲಾಗಿದ್ದು ಇದರ ಅಂಗವಾಗಿ ತಿಪಟೂರಿನ ಸ್ನಾತಕೋತ್ತರ ಕೇಂದ್ರ, ಕಾಲೇಜಿನಲ್ಲಿ ಕಲ್ಪಸಿರಿ ಉತ್ಸವದ ಪೋಸ್ಟರ್‌ನ್ನು ತುಮಕೂರು ವಿಶ್ವವಿದ್ಯಾನಿಲಯದ ಮಾಜಿ ಸಿಂಡಿಕೇಟ್ ಸದಸ್ಯರಾದ ರಾಜುರವರು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊಫೆಸರ್ ವೆಂಕಟಾಚಲಯ್ಯ ಬಿಡುಗಡೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಕಾರ್ಯಕ್ರಮವನ್ನು ಸ್ನಾತಕೋತ್ತರ ಕೇಂದ್ರದ ಸಂಯೋಜಕರಾದ ಡಾ.ದೇವರಾಜಪ್ಪ ಅವರ ನೇತೃತ್ವದಲ್ಲಿ ನಡೆಸಲಾಗುತ್ತಿದೆ ಹಾಗೂ ವಿಶ್ವವಿದ್ಯಾನಿಲಯದ ಮಟ್ಟದಲ್ಲಿ ಈ ಕಾರ್ಯಕ್ರಮವನ್ನು ಏರ್ಪಡಿಸಿರುವುದರಿಂದ ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದರು.

# ಬಿಜೆಪಿ, ಜೆಡಿಎಸ್ ಪ್ರತಿಭಟನೆ

**ಕೋಲಾರ:** ನಗರದ ಹೊಸ ಬಸ್ ಸ್ಟಾಂಡ್ ವೃತ್ತದ ಬಳಿ ರಾಜ್ಯ ಸರ್ಕಾರದ ವಿರುದ್ಧ ಬಿ ಜೆ ಪಿ ಮತ್ತು ಜೆ ಡಿ ಎಸ್ ಪಕ್ಷದವರು ಪ್ರತಿಭಟನೆ ನಡೆಸಿದರು .

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಜೆ ಡಿ ಎಸ್ ಮುಖಂಡರಾದ ಸಿ ಎಂ ಆರ್ ಶ್ರೀನಾಥ್ ಮಾತನಾಡಿ ನಿಮಗೆಲ್ಲ ತಿಳಿದಂತೆ ಪ್ರಜ್ವಲ್ ರೇವಣ್ಣರವರ ಅಶ್ಲೀಲ ವೀಡಿಯೋ ಪ್ರಕರಣ ಕುರಿತು, ತಪ್ಪು ಮಾಡಿದ್ದರೆ ಉಪ್ಪು ತಿಂದವರು ನೀರುಕುಡಿಯಲೇಬೇಕು ಎಂಬ ಸ್ಪಷ್ಟವಾದ ನಿಲುವನ್ನು ನಮ್ಮ ನಾಯಕರು ನಮ್ಮ ಪಕ್ಷದ ರಾಜ್ಯಾಧ್ಯಕ್ಷರಾದ ಹೆಚ್. ಡಿ. ಕುಮಾರಸ್ವಾಮಿರವರು ತಿಳಿಸಿದ್ದಾರೆ.

ಇದೆಲ್ಲದರ ಮಧ್ಯೆ ಇಂದು ವಕೀಲರಾದ ದೇವರಾಜೇಗೌಡರು ಪತ್ರಿಕಾಗೋಷ್ಠಿಯಲ್ಲಿ ಬಹಿರಂಗಗೊಳಿಸಿದ ಕೆಲ ಸಂಗತಿಗಳನ್ನು ಗಮನಿಸಿದಾಗ ಕಾಂಗ್ರೆಸ್ ಪಕ್ಷದ ರಾಜ್ಯಾದ್ಯಕ್ಷರಾದ ಡಿ.ಕೆ.ಶಿವಕುಮಾರ್ ರವರು ಮತ್ತು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಜೆಡಿಎಸ್-ಬಿಜೆಪಿ



ಮೈತ್ರೀಕೂಟಕ್ಕೆ ಮತ್ತು ನಮ್ಮ ವರಿಷ್ಠರಾದ ಹೆಚ್.ಡಿ.ದೇವೇಗೌಡ ರವರಿಗೆ ಹಾಗೂ ನಮ್ಮ ಪ್ರಧಾನಿಗಳಾದ ವಿಶ್ವಗುರು ಸನ್ಮಾನ್ಯ ನರೇಂದ್ರ ಮೋದಿ ರವರ ಘನತೆಗೆ ದಕ್ಕೆ ತರಲೆಂದೇ ಈ ಹುನ್ನಾರ ಮಾಡಿದಂತೆ ಭಾಸವಗುತ್ತಿದೆ.

ಇಂತಹ ಇನ್ನೂ ಅನೇಕ ಸಂಗತಿಗಳು ಇದರ ವಿರುದ್ಧ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ನಾವುಗಳು ಬೀದಿಗಿಳಿದು ಹೋರಾಟ ಮಾಡುವುದು ಅನಿವಾರ್ಯವಾಗಿದೆ ಎಂದರು .

ನಗರದ ಹೊಸ ಬಸ್ ಸ್ಟಾಂಡ್ ವೃತ್ತದ ಬಳಿ ನಡೆದ ಪ್ರತಿಭಟನೆ ಯಲ್ಲಿ ಎಂ ಎಲ್ಸಿ ಇಂಚರ ಗೋವಿಂದರಾಜು ,ವಡಗೂರು ರಾಮು ,ಬಾಬು ಮೌನಿ ,ಶಬರೀಶ್ ಯಾದವ್,ಬಣಕನಹಳ್ಳಿ ನಟರಾಜ್, ಚೆಂಬೆರಾಜೇಶ್ ,ರೋಟರಿ ಸುಧಾಕರ್ ಬಿ ಜೆ ಪಿ ಮತ್ತು ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.



## ಬಸವ ನಿಧನ

ತಿಪಟೂರು ನಗರದ ಅಧಿದೇವತೆಯಾದ ಕೆಂಪಮ್ಮದೇವಿಯವರ ದೇವಾಸ್ಥಾನಕ್ಕೆ ಮೀಸಲು ಬಿಡಲಾಗಿದ್ದ ಬಸವ ವಯೋಸಹಜ ಅನಾರೋಗ್ಯದಿಂದ ಸಾವನ್ನಪ್ಪಿದ್ದು, ಕಲ್ಲೇಶ್ವರ ದೇವಾಸ್ಥಾನದ ಪಕ್ಕದಲ್ಲಿ ಹಿಂದೂ ಸಂಪ್ರದಾಯದಂತೆ ವಿಧಿ ವಿಧಾನಗಳ ಮೂಲಕ ಅಂತ್ಯಕ್ರಿಯೆ ನೆರವೇರಿಸಲಾಯಿತು.

# ಶಾಸಕ ಎಚ್.ಡಿ.ರೇವಣ್ಣ ವಿರುದ್ಧ ತನಿಖೆ ಚುರುಕುಗೊಳಿಸಿ

**ಚಾಮರಾಜನಗರ:** ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಮಾಜಿ ಸಚಿವ ಹಾಲಿ ಶಾಸಕ ಎಚ್.ಡಿ.ರೇವಣ್ಣ ವಿರುದ್ಧ ದಾಖಲಾಗಿರುವ ಲೈಂಗಿಕ ಅತ್ಯಾಚಾರ ಪ್ರಕರಣದ ತನಿಖೆ ಯನ್ನು ಚುರುಕುಗೊಳಿಸುವಂತೆ ಎದ್ದೇಳು ಕರ್ನಾಟಕ ಸಂಘಟನೆ ಹಾಸನ ಸಂಸದ ಪ್ರಜ್ವಲ್ ವತಿಯಿಂದ ಪ್ರತಿಭಟನೆ ನಡೆಯಿತು.





ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಮಂಗಳವಾರ ಜಮಾಯಿಸಿದ ಪ್ರತಿಭಟನಾಕಾರರು ಪ್ರಜ್ವಲ್ ಹಾಗೂ ರೇವಣ್ಣ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿ ದರು.

ನಂತರ ಮೆರವಣಿಗೆ ಹೊರಟ ಅವರು ಭುವನೇಶ್ವರಿ ವೃತ್ತದಲ್ಲಿ ಕೆಲಕಾಲ ಮಾನವ ಸರಪಳಿ ರಚಿಸಿ ರಸ್ತೆ ತಡೆ ಸಾಹಿತಿ ಕೆ.ವೆಂಕಟರಾಜು ಮಾತನಾಡಿ,

ಪ್ರಜ್ವಲ್ ಹಾಗೂ ಆತನ ತಂದೆ ರೇವಣ್ಣ ಲೈಂಗಿಕ ಪ್ರಕರಣವು ಇಡೀ ದೇಶವೇ ತಲೆ ತಗ್ಗಿಸುವಂತಹ ಅಮಾನವೀಯ ಘಟನೆಯಾಗಿದೆ. ಈ ದೌರ್ಜನ್ಯ ಕುರಿತು ಸರಕಾರ ಈಗಾಗಲೇ ಕ್ರಮ ಜರುಗಿಸಿದ್ದು, ಅದನ್ನು ಚುರುಕುಗೊಳಿಸುವಂತೆ ಒತ್ತಾಯಿಸಿದರು. ಈ ಪ್ರಕರಣ ಕುರಿತು ತಕ್ಷಣವೇ ಚಾರ್ಜ್ ಶೀಟ್ ಸಲ್ಲಿಸಬೇಕು. ಪ್ರತಿದಿನ ವಿಚಾರಣೆ ನಡೆಸಿ ವರದಿ ಸಲ್ಲಿಸಬೇಕು. ದೌರ್ಜನ್ಯಕ್ಕೊಳಗಾಗಿರುವ ಮಹಿಳೆಯರು ಹಾಗೂ ಅವರ ಕುಟುಂಬದವರು ಇದರ ಬಗ್ಗೆ ಮುಜುಗರಕ್ಕೆ ಒಳಗಾಗದೇ, ತಮಗಾಗಿರುವ ಅನ್ಯಾಯದ ಬಗ್ಗೆ ದೂರು ಸಲ್ಲಿಸಬೇಕು. ಆದ್ದರಿಂದ ಇದಕ್ಕೆ ಪ್ರತಿಯೊಬ್ಬರ ಬೆಂಬಲ ದೊರೆಯಬೇಕು ಎಂದರು.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾ ಸಂಚಾಲಕ ವೀರಭದ್ರನಾಯಕ, ಮುತ್ತಯ್ಯ, ಆಬ್ರಾಹಿ ಡಿ ಸಿಲ್ವ, ಬ್ರಿಜೇಶ್, ಸುಭಾಷ್ ಮಾತ್ರಹಳ್ಳಿ, ಉಲ್ಲಾಸ್, ಪುಟ್ಟಮ್ಮ, ರಾಜೇಶ್ವರಿ, ಸಾಕಮ್ಮ, ಪುಟ್ಟಗೌರಿ, ಸುಂದ್ರಮ್ಮ ಭಾಗವಹಿಸಿದ್ದರು.

## ಮೇವು ಬ್ಯಾಂಕ್ ಪ್ರಾರಂಭ

ತಿಪಟೂರು ತಾಲೂಕನ್ನು ರಾಜ್ಯ ಸರ್ಕಾರ ಬರಪೀಡಿತ ತಾಲೂಕು ಎಂದು ಘೋಷಣೆ ಮಾಡಿದ್ದು ಅದರನ್ವಯ ಜಾನುವಾರುಗಳ ಸಂರಕ್ಷಣೆ ಮಾಡುವ ಸಲುವಾಗಿ ತಾಲೂಕಿನ ಕಸಬಾ ಹೋಬಳಿಯ ಕಲ್ಲೇಗೌಡನ ಪಾಳ್ಯದ ಗ್ರಾಮದ ಸಮುದಾಯ ಭವನದಲ್ಲಿ ಇಂದಿನಿಂದ ಮೇವು ಬ್ಯಾಂಕ್ ಪ್ರಾರಂಭಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಾಲೂಕು ತಹಶೀಲ್ದಾರ್ ಮನವಿ ಮಾಡಿರುತ್ತಾರೆ.

### ಮಂಡ್ಯ ಜಿಲ್ಲೆಯ 79839 ರೈತರ ಖಾತೆಗೆ 34.94 ಕೋಟಿ ರೂಪಾಯಿ

# ಬೆಳೆಹಾನಿ ಪರಿಹಾರ ಜಮೆ

**ಮಂಡ್ಯ:** ಜಿಲ್ಲೆಯಲ್ಲಿ ಬರದ ಹಿನ್ನಲೆ ಬೆಳೆಹಾನಿ ಪರಿಹಾರ ಬಾಬ್ತು 34,94,97,157 /-ರೂ ಹಣವನ್ನು 79,839 ರೈತರ ಖಾತೆಗೆ ಜಮೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ: ಕುಮಾರ ತಿಳಿಸಿದರು.

ಸೋಮವಾರ ವಿಡಿಯೋ ಸಂವಾದದ ಮೂಲಕ ತಹಶೀಲ್ದಾರ್ ಗಳೊಂದಿಗೆ ಮಾತನಾಡಿ ಬರದ ಹಿನ್ನಲೆ ಬೆಳೆ ನಷ್ಟವಾಗಿರುವ ರೈತರಿಗೆ ಪರಿಹಾರದ ಹಣವನ್ನು ಜಮೆ ಮಾಡಲಾಗಿದ್ದು, ಬಹಳಷ್ಟು ರೈತರು ತಮಗೆ ಹಣ ಬಂದಿರುವುದಿಲ್ಲ ಎಂದು ಮೌಖಿಕವಾಗಿ ಕರೆ ಮಾಡಿ ದೂರು ಸಲ್ಲಿಸುತ್ತಿದ್ದು, ತಾಲ್ಲೂಕು ಮಟ್ಟದಲ್ಲಿ ಹೆಲ್ಪ್ ಡೆಸ್ಕ್ ಅಥವಾ ಸಹಾಯವಾಣಿ ಪ್ರಾರಂಭಿಸಿ ರೈತರ ಸಮಸ್ಯೆ ಪರಿಹರಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಮಳೆಯ ಕೊರತೆ ಹಿನ್ನಲೆ ಬೆಳೆ ನಷ್ಟ ಕುರಿತಂತೆ ಸಮೀಕ್ಷೆ ನಡೆಸಿ ಸುಮಾರು 79,839 ರೈತರ 39812 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟವಾಗಿರುವುದಾಗಿ ವರದಿ ಸಲ್ಲಿಸಲಾಗಿತ್ತು. ಎಸ್.ಡಿ.ಆರ್.ಎಫ್ ನಿಯಮದ ಅನುಸಾರ ಪರಿಹಾರ ಹಣವನ್ನು ಬಿಡುಗಡೆ ಮಾಡಲಾಗಿರುತ್ತದೆ. ರೈತರ ಖಾತೆಗೆ ಜಮೆ ಮಾಡಿರುವ ಪರಿಹಾರ ಹಣ ಹಾಗೂ ಫಲಾನುಭವಿಗಳ ವಿವರವನ್ನು ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್ ಹಾಗೂ ತಹಶೀಲ್ದಾರ್ ಕಚೇರಿಯಲ್ಲಿ ಪ್ರಕಟಿಸುವಂತೆ ತಿಳಿಸಿದರು. ಬೆಳೆಹಾನಿ ರೈತರ ಖಾತೆಗೆ ಜಮೆ ಮಾಡಿರುವ ವಿವರವನ್ನು ಗ್ರಾಮ ಪಂಚಾಯಿತಿಗಳ ವೆಬ್ ಸೈಟ್ ಗಳಲ್ಲೂ ಸಹ ಪ್ರಕಟಿಸಲಾಗುವುದು ಎಂದರು.

ರೈತರ ಜಮೀನಿನ ಸರ್ವೆ ಸಂಖ್ಯೆ, ರೈತರ ಹೆಸರು ಮೊಬೈಲ್ ಸಂಖ್ಯೆ ಹಾಗೂ ಇನ್ನಿತರೆ ವಿವರಗಳು ಹೆಲ್ಪ್ ಡೆಸ್ಕ್ ನಲ್ಲಿ ಲಭ್ಯವಿರಬೇಕು. ರೈತರು ಸಂಪರ್ಕಿಸಿದ ತಕ್ಷಣ ಅವರಿಗೆ ಮಂಜೂರಾಗಿರುವ ಪರಿಹಾರದ ವಿವರ, ಮಂಜೂರಾಗಿಲ್ಲದಿದ್ದಾರೆ ನಿಖರ ಮಾಹಿತಿ ನೀಡಬೇಕು ಪರಿಹಾರ ಬಂದಿಲ್ಲ ಎಂದ ಕೂಡಲೇ ಜಿಲ್ಲಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಿ ಎಂದು ಅವರನ್ನು ಅಲೆದಾಡುವಂತೆ ಮಾಡಬೇಡಿ ಎಂದರು.

ಪರಿಹಾರ ಹಣ ಪಾವತಿಗೆ ಸಂಬಂಧಿಸಿದಂತೆ ಸುಮಾರು 1000 ರೈತರಿಗೆ ಆಧಾರ್ ಬ್ಯಾಂಕ್ ಖಾತೆಗೆ ಜೋಡಣೆಯಾಗದೆ, ಖಾತೆ ನಿಷ್ಕ್ರಿಯೆ



ಹಾಗೂ ಸರಿಯಾದ ಐ.ಎಫ್.ಎಸ್.ಸಿ ಕೋಡ್ ಇಲ್ಲ ಎಂದು ಪಾವತಿಯಾಗಿರುವುದಿಲ್ಲ. ಇವುಗಳನ್ನು 24 ಗಂಟೆಯೊಳಗೆ ತಹಶೀಲ್ದಾರ್ ವಿಶೇಷ ಕಾಳಜಿ ವಹಿಸಿ ಪರಿಹಾರ ಹಣ ಪಾವತಿಯಾಗಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು ಎಂದರು.

ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ಸರಬರಾಜು ಮಾಡುತ್ತಿದ್ದಾರೆ ಕಡ್ಡಾಯವಾಗಿ ಟ್ಯಾಂಕರ್ ಮ್ಯಾನೆಜ್‌ಮೆಂಟ್ ಆ?ಯಪ್ ನ ಮೂಲಕ ನಿರ್ವಹಿಸಬೇಕು. ಇಲ್ಲಾವದಲ್ಲಿ ಹಣ ಪಾವತಿ ಮಾಡಲು ಸಾಧ್ಯವಾಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಕೆ.ಆರ್.ಪೇಟೆಯಲ್ಲಿ 17298 ರೈತರ ಒಟ್ಟು 9322.06 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 7,70,60,982 ರೂ ಪರಿಹಾರದ ಹಣ ಪಾವತಿಸಲಾಗಿದೆ. ಮದ್ದೂರಿನಲ್ಲಿ 12499 ರೈತರ ಒಟ್ಟು 3050.20 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 3,62,56,911/- ರೂ ಪರಿಹಾರದ ಹಣ ಪಾವತಿಸಲಾಗಿದೆ.

ಮಳವಳ್ಳಿ ಯಲ್ಲಿ 11599 ರೈತರ ಒಟ್ಟು 4240.50 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 4,63,86,485/- ರೂ ಪರಿಹಾರದ ಹಣ ಪಾವತಿಸಲಾಗಿದೆ. ಮಂಡ್ಯ ತಾಲ್ಲೂಕಿನಲ್ಲಿ 4408 ರೈತರ ಒಟ್ಟು 2078.04 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 1,74,35,984/- ರೂ ಪರಿಹಾರದ ಹಣ ಪಾವತಿಸಲಾಗಿದೆ.

ನಾಗಮಂಗಲ ತಾಲ್ಲೂಕಿನಲ್ಲಿ 28926 ರೈತರ ಒಟ್ಟು 18646.80 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 15,15,74,633/- ರೂ ಪರಿಹಾರದ ಹಣ ಪಾವತಿಸಲಾಗಿದೆ.

ಪಾಂಡವಪುರ ತಾಲ್ಲೂಕಿನಲ್ಲಿ 4700 ರೈತರ ಒಟ್ಟು 2323.86 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 1,94,82,867/- ರೂ ಪರಿಹಾರದ ಹಣ ಪಾವತಿಸಲಾಗಿದೆ.

ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ 409 ರೈತರ ಒಟ್ಟು 150.66 ಹೆಕ್ಟೇರ್ ಪ್ರದೇಶದ ಬೆಳೆ ಹಾನಿಗೆ ಒಟ್ಟು 12,99,295/- ರೂ ಪರಿಹಾರದ ಹಣ ಪಾವತಿಸಲಾಗಿದೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ; ಹೆಚ್ ಎಲ್ ನಾಗರಾಜು, ಉಪವಿಭಾಗಾಧಿಕಾರಿ ಮಹೇಶ್, ಪಶುಸಂಗೋಪನೆ ಇಲಾಖೆ ಉಪನಿರ್ದೇಶಕ ಡಾ: ಸುರೇಶ್, ಜಂಟಿ ಕೃಷಿ ನಿರ್ದೇಶಕ ಅಶೋಕ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ ಉಪಸ್ಥಿತರಿದ್ದರು.

## ಶ್ರೀದೇವಿ ಐಟಿಟಿ ಕಾಲೇಜಿನಲ್ಲಿ ''ಫಿಸಿಯೋಥೆರಪಿ ಟೆಕ್ನಿಷಿಯನ್'' ವಿನೂತನ ಕೋರ್ಸ್ ಲಭ್ಯ

**ತುಮಕೂರು:** ನಗರದ ಶಿರಾರಸ್ತೆಯ ಶ್ರೀದೇವಿ ಕೈಗಾರಿಕಾ ತರಬೇತಿ ಕೇಂದ್ರದ ವತಿಯಿಂದ ಫಿಟ್ಟರ್, ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ಸ್ ಮೆಕಾನಿಕ್ ಕೋರ್ಸ್‌ಗಳು ಅಷ್ಟೇ ಅಲ್ಲದೇ ವಿಶೇಷವಾಗಿ ಪರಿಚಯಿಸುತ್ತಿರುವ ಹೊಸ ಕೋರ್ಸ್‌ಗಳಾದ ಟರ್ನರ್, ಕಂಪ್ಯೂಟರ್ ಆಪರೇಟರ್ ಮತ್ತು ಪ್ರೋಗ್ರಾಮಿಂಗ್ ಸಹಾಯಕರು, ಫಿಸಿಯೋಥೆರಪಿ ಟೆಕ್ನಿಷಿಯನ್ ಹಾಗೂ ಸರ್ವೆಯರ್ ಕೋಸ್‌ಗಳು ಲಭ್ಯವಿದ್ದು, ತುಮಕೂರು ಜಿಲ್ಲೆ ಹಾಗೂ ರಾಜ್ಯದಲ್ಲಿಯೇ ವಿಶೇಷವಾಗಿ ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿಗಳಿಗಾಗಿ ಉದ್ಯೋಗಕ್ಕೆ ಸಂಬಂಧಿಸಿದಂತೆ ಉಪಯುಕ್ತ ಕೋರ್ಸ್‌ಗಳು ಲಭ್ಯವಿದೆ. ನಮ್ಮ ಸಂಸ್ಥೆಯ ಐ.ಟಿ.ಐ. ವಿದ್ಯಾರ್ಥಿಗಳು ದೇಶ ವಿದೇಶದಲ್ಲಿಯೂ ಕೆಲಸ ನಿರ್ವಹಿಸುತ್ತಿದ್ದಾರೆ. ''ಫಿಸಿಯೋಥೆರಪಿ ಟೆಕ್ನಿಷಿಯನ್'' ಒಂದು ವರ್ಷದ ಕೋರ್ಸ್ ಆಗಿದ್ದು, ತುಮಕೂರು ಜಿಲ್ಲೆಯಲ್ಲಿಯೇ ಈ ಕೋರ್ಸ್‌ಗೆ ಬೇಡಿಕೆ ಹೆಚ್ಚಾಗಿದೆ. ಆರೋಗ್ಯ ಕ್ಷೇತ್ರದಲ್ಲಿ ಉದ್ಯೋಗಾವಕಾಶ ಲಭಿಸಲಿದೆ. ಎನ್.ಟಿ.ಸಿ. ಸರ್ಟಿಫಿಕೇಟ್ ಮಾನ್ಯತೆ ಪಡೆದಿದೆ. ಈ ''ಫಿಸಿಯೋಥೆರಪಿ ಟೆಕ್ನಿಷಿಯನ್'' ಕೋರ್ಸ್‌ಗಳು ರಾಜ್ಯದಲ್ಲಿಯೇ ಸೀಮಿತವಾದ ಕಾಲೇಜಿನಲ್ಲಿ ಈ ಹೊಸ ಕೋರ್ಸ್ ಲಭ್ಯವಿದ್ದು, ತುಮಕೂರಿನಲ್ಲಿ ಪ್ರಪ್ರಥಮ ಶ್ರೀದೇವಿ ಐ.ಟಿ.ಐ. ಕಾಲೇಜಿನಲ್ಲಿ ''ಫಿಸಿಯೋಥೆರಪಿ ಟೆಕ್ನಿಷಿಯನ್'' ಕೋರ್ಸ್‌ಗಳು ಲಭ್ಯವಿದೆ. ಈ ಕೋಸ್ ್ಗೆ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಬಹಳಷ್ಟು ಬೇಡಿಕೆಯಿದೆ. ಈ ಅವಕಾಶವನ್ನು ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿಗಳು ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಶ್ರೀದೇವಿ ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಪಿ.ಎಸ್.ಪುರುಷೋತ್ತಮ್‌ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೊಸ ಕೋರ್ಸ್‌ಗೆ ಪ್ರವೇಶಾತಿಗಾಗಿ ದೂರವಾಣಿ ಸಂಖ್ಯೆ 9739172455, 9686114950, 9686114793 ರವರನ್ನು ಸಂಪರ್ಕಿಸಬಹುದಾಗಿದೆ.

## ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ

**ಮಂಡ್ಯ:** ಜಿಪಂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಮೇ 2024 ರ ಮಾಹೆಯ ಮೇ 14 ರಿಂದ ಮೇ 28 ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ. ಮೇ 14 ರಂದು ಮದ್ದೂರು ತಾಲೂಕಿನ ಸರ್ಕಾರಿ ಆರೋಗ್ಯ ಕೇಂದ್ರ, ಮೇ 15 ರಂದು ಕೆ.ಎಂ.ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, ಮೇ 16 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, ಮೇ 17 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, ಮೇ 18 ರಂದು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ ಹಾಗೂ ಮಧ್ಯಾಹ್ನ 1 ಗಂಟೆಗೆ ನಾಗಮಂಗಲ ಸರ್ಕಾರಿ ಆಸ್ಪತ್ರೆಯಲ್ಲಿ, ಮೇ 21 ರಂದು ಪಾಂಡವಪುರ ಉಪ ವಿಭಾಗ ಸರ್ಕಾರಿ ಆರೋಗ್ಯ ಕೇಂದ್ರ, ಮೇ 22 ರಂದು ಕೆ.ಆರ್.ಪೇಟೆ ತಾಲ್ಲೂಕು ಆಸ್ಪತ್ರೆ, ಮೇ 24 ರಂದು ಮಂಡ್ಯ ಮಿಮ್ಸ್, ಮೇ 28 ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ ನಡೆಯಲಿದೆ.

## ಆಹಾರ ಮೇಳ, ವಸ್ತು ಪ್ರದರ್ಶನ

**ಮಂಡ್ಯ:** ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಒಂದು ಅಪ್ಪಟ ಚರ್ಮ ವಸ್ತುಗಳ ಮಾರಾಟ ಮಳಿಗೆಯನ್ನು, ಸ್ವರ್ಣ ಟಿವಿ ವತಿಯಿಂದ ಬೃಹತ್ ಆಹಾರ ಮೇಳ ಮತ್ತು ವಸ್ತು ಪ್ರದರ್ಶನವನ್ನು ಮೇ 9 ರಿಂದ 13 ರವರೆಗೆ ಮಂಡ್ಯ ನಗರದ ಸರ್ಕಾರಿ ಬಾಲಕಿಯರ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ವಸ್ತು ಪ್ರದರ್ಶನದಲ್ಲಿ ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಅಪ್ಪಟ ಚರ್ಮ ವಸ್ತುಗಳಿಂದ ಮಾಡಿರುವಂತಹ ಚರ್ಮ ಪಾದರಕ್ಷೆಗಳು ಮುಂತಾದ ಚರ್ಮ ವಸ್ತುಗಳ ಮೇಲೆ ಆಕರ್ಷಕ ರಿಯಾಯಿತಿ ದರದ ಮಾರಾಟದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಲಿಡ್ಕರ್ ಮಾರಾಟ ಮಳಿಗೆಯಲ್ಲಿ ಅತ್ಯುತ್ತಮ ಗುಣಮಟ್ಟದ ಚರ್ಮ ಕುಶಲಕರ್ಮಿಗಳಿಂದ ಮಾಡಲ್ಪಟ್ಟ ಚರ್ಮದ ಪಾದರಕ್ಷೆ, ಶೂ, ವ್ಯಾನಿಟಿ ಬ್ಯಾಗ್, ಬೆಲ್ಟ್, ವ್ಯಾಲೆಟ್ ಮುಂತಾದ ಚರ್ಮ ವಸ್ತುಗಳು ದೊರೆಯಲಿವೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 0821-2444019/ 9731833307 ಅನ್ನು ಸಂಪರ್ಕಿಸಬಹುದು.

# 6ನೇ ತರಗತಿ ಪ್ರವೇಶಕ್ಕೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-2025 ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರತಿಷ್ಠಿತ ಶಾಲೆಗಳಿಗೆ 6 ನೇ ತರಗತಿಗೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು. ಕಡ್ಡಾಯವಾಗಿ ಆಧಾರ್ ಕಾರ್ಡ್ ಹೊಂದಿರತಕ್ಕದ್ದು. 5 ನೇ ತರಗತಿಯಲ್ಲಿ ಶೇ 60% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರಬೇಕು. ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು 5 ನೇ ತರಗತಿಯ ಅಂಕಪಟ್ಟಿ ಕಡ್ಡಾಯವಾಗಿ ಲಗತ್ತಿಸಬೇಕು, ಮುಖ್ಯೋಪಾಧ್ಯಾಯರು ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು, ಅಂಕಪಟ್ಟಿಯಲ್ಲಿ ಗ್ರೇಡ್ ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಕುಟುಂಬದ ವಾರ್ಷಿಕ ವರಮಾನ 2 ಲಕ್ಷ ರೂ ಒಳಗಿರಬೇಕು. ಅರ್ಹ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಪ್ರವೇಶ ಪರೀಕ್ಷೆ ಮುಖಾಂತರ ಆಯ್ಕೆ ಮಾಡಲಾಗುವುದು. ಒಂದು ಕುಟುಬಂದಲ್ಲಿ ಎರಡು ಮಕ್ಕಳಿಗೆ ಮಾತ್ರ ಅಂದರೆ ಒಬ್ಬ ಬಾಲಕ ಮತ್ತು ಒಬ್ಬ ಬಾಲಕಿಗೆ ಅವಕಾಶ ಕಲ್ಪಿಸಲಾಗುವುದು, ಬಾಲಕ ಇಲ್ಲದ್ದಿದ್ದಲ್ಲಿ ಇಬ್ಬರು ಬಾಲಕಿಯರಿಗೆ ಅವಕಾಶ ನೀಡಲಾಗುತ್ತದೆ. ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಕನ್ನಡ ಮತ್ತು ಆಂಗ್ಲ ಹಿರಿಯ ಪ್ರಾಥಮಿಕ ಶಾಲೆ, ಅಗಲಗುರ್ಕಿ, ಚಿಕ್ಕಬಳ್ಳಾಪುರ. ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಗ್ರಾಮಾಂತರ ಆಂಗ್ಲ ಪ್ರೌಢ ಶಾಲೆ, ಅಗಲಗುರ್ಕಿ, ಚಿಕ್ಕಬಳ್ಳಾಪುರ. ಡಾಲ್ಫಿನ್ ಹಿರಿಯ ಪ್ರಾಥಮಿಕ ಶಾಲೆ, ನಲ್ಲಿಮರದಹಳ್ಳಿ ರೋಡ್ , ಶಿಡ್ಲಘಟ್ಟ. ಡಾಲ್ಫಿನ್ ಹಿರಿಯ ಪ್ರಾಥಮಿಕ ಶಾಲೆ(ಸಿಬಿಎಸ್‌ಸಿ)ನಲ್ಲಿಮರದಹಳ್ಳಿ ರೋಡ್, ಶಿಡ್ಲಘಟ್ಟ. ಎಸ್.ಎಫ್.ಎಸ್ ಸೂಲ್ಕ್, ಎಂ.ಜಿ ರೋಡ್, ಚಿಂತಾಮಣಿ. ಸೆಂಟ್ಸ್ ಅನಾನ್ಸ್ ಸೂಲ್ಕ್(ಐ.ಸಿ.ಎ.ಸಿ.ಇ) ಮಾದನಹಳ್ಳಿ, ಗೌರಿಬಿದನೂರು. ನ್ಯೂ ಹ್ರೈಜೆನ್ ಇಂಗ್ಲೀಷ್ ಸೂಲ್ಕ್, ಚಿಕ್ಕಬಳ್ಳಾಪುರ. ಶ್ರೀ ಅರವಿಂದ್ರ ಪ್ರಾಥಮಿಕ ಮತ್ತು ಪ್ರೌಢ ಶಾಲೆ, (ಆಂಗ್ಲ) ಗುಡಿಬಂಡೆ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ನೀಡಲಾಗುತ್ತದೆ. ಚಿಕ್ಕಬಳ್ಳಾಪರದ ಸಮಾಜ ಕಲ್ಯಾಣ ಇಲಾಖೆ, ಉಪನಿರ್ದೇಶಕರ ಕಚೇರಿ, ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಕಚೇರಿಗಳಲ್ಲಿ ಮೇ 9 ರಿಂದ ಅರ್ಜಿ ಪಡೆದು ಮೇ 21 ರ ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಳೆ ಚುರುಕು: ಬಿತ್ತನೆ ಬೀಜ ವಿತರಣೆ

**ಯಳಂದೂರು:** ತಾಲ್ಲೂಕಿನಲ್ಲಿ ಮಳೆ ಚುರುಕಾಗಿದ್ದು, ಕೃಷಿ ಇಲಾಖೆ ರೈತರಿಗೆ ದ್ವಿದಳ ಧಾನ್ಯ ಬಿತ್ತನೆ ಬೀಜ ಪೂರೈಸಲು ಸಿದ್ಧತೆ ನಡೆಸಿದೆ.

ಎರಡು ವರ್ಷಗಳಿಂದ ಅನಾವೃಷ್ಟಿ ಆವರಿಸಿದೆ. ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದೆ. ಆದರೆ, ಈ ಸಲ ಮೇ ಎರಡನೇ ವಾರದಿಂದ ಮಳೆ ಸುರಿಯುವ ನಿರೀಕ್ಷೆ ಮೂಡಿಸಿದೆ. ಹಾಗಾಗಿ, ಇಲಾಖೆ ಸಾಗುವಳಿದಾರರಿಗೆ ಉದ್ದು, ಹೆಸರು ಹಾಗೂ ಹಲಸಂದೆ ಬೀಜ ವಿತರಿಸುತ್ತಿದೆ.

ತಾಲ್ಲೂಕಿನ 1500 ಹೆಕ್ಟೇರ್ ಪ್ರದೇಶದಲ್ಲಿ ದ್ವಿದಳ ಧಾನ್ಯ ಬಿತ್ತನೆ ನಡೆಯಲಿದೆ. ಎಕರೆವಾರು ಪ್ರತಿ ರೈತರಿಗೆ 10 ಕೆ.ಜಿ ಬಿತ್ತನೆ ಬೀಜ ಸಿಗಲಿದೆ. ಮಳೆ ಸುರಿದರೆ ಬೆಳೆ ಕೈ ಹಿಡಿಯಲಿದೆ. ಮಳೆ ಕೊರತೆ ಕಂಡು ಬಂದಲ್ಲಿ ಫಸಲು ಕೈ ಬಿಡಲಿದೆ. ಆದರೆ, ಮಳೆ ಸುರಿಯುವ ನಿರೀಕ್ಷೆಯಿಂದ ಕೃಷಿಕರಿಗೆ ಬಿತ್ತನೆಬೀಜ ವಿತರಿಸಲಾಗುತ್ತದೆ ಎಂದು ಕೃಷಿ ಇಲಾಖೆ ತಾಂತ್ರಿಕ ಅಧಿಕಾರಿ ವೆಂಕಟರಂಗಶೆಟ್ಟಿ ಹೇಳಿದರು. ಎರಡು ದಿನಗಳಿಂದ ಮಳೆ ಬರುವ ನಿರೀಕ್ಷೆ ಮೂಡಿಸಿದೆ. ಆದರೆ, ಕೃಷಿಕರು ಬರದ ಹಿನ್ನೆಲೆಯಲ್ಲಿ ಸಾಗುವಳಿ ಸಿದ್ಧಪಡಿಸಿಲ್ಲ. ಒಂದೆರಡು ಮಳೆ ಉತ್ತಮವಾಗಿ ಸುರಿದರೆ ಮಾತ್ರ ಭೂಮಿ ಸಿದ್ಧತೆ ಸಾಧ್ಯವಾಗಲಿದೆ. ನಂತರ ಬಿತ್ತನೆ ಮಾಡಿದ್ದಲ್ಲಿ ಒಂದಷ್ಟು ಇಳುವರಿ ಪಡೆಯಬಹುದು ಎಂದು ರೈತ ಮಹಿಳೆ ನಿಂಗಮ್ಮ ಹೇಳಿದರು.



# ಅಕ್ಕನ ಮನೆ ದೋಚಿ ಜೈಲು ಪಾಲಾದ ತಂಗಿ

**ಬೆಂಗಳೂರು:** ಅಕ್ಕನ ಮನೆಯಲ್ಲಿ 52 ಲಕ್ಷ ರೂಪಾಯಿ ನಗದು ಮತ್ತು ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಕದ್ದಿದ್ದ 22 ವರ್ಷದ ಯುವತಿಯನ್ನು ಕೆಂಗೇರಿ ಪೊಲೀಸರು ಬಂಧಿಸಿದ್ದಾರೆ. ಆರೋಪಿಯನ್ನು ಲಗ್ಗೆರೆ ನಿವಾಸಿ ಉಮಾ ಎಂದು ಗುರುತಿಸಲಾಗಿದ್ದು, ಆಟೋ ಕನ್ಸಲ್ಟೆಂಟ್ ಆಗಿ ಕೆಲಸ ಮಾಡುತ್ತಿದ್ದಾರೆ. ಉಮಾ 5 ಲಕ್ಷ ಸಾಲ ಮಾಡಿಕೊಂಡಿದ್ದರು. ಆಕೆಯ ಸಹೋದರಿ ಸುಮಾ ಹಾಗೂ ಭಾವ ಕುನ್ನೇಗೌಡ ಬಳಿ ಹಣ ಕೇಳಿದಾಗ ಅವರು ನಿರಾಕರಿಸಿದ್ದಾರೆ. ಹೀಗಾಗಿ, ಮನೆಯಲ್ಲಿ ಅಪಾರ ಪ್ರಮಾಣದ ನಗದು ಇಟ್ಟಿರುವುದನ್ನು ತಿಳಿದ ಉಮಾ ಕಳ್ಳತನಕ್ಕೆ ಸಂಚು ರೂಪಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ೈಲ್ ಮತ್ತು ಸಿಮೆಂಟ್ ವ್ಯಾಪಾರ ಮಾಡುತ್ತಿರುವ ಕುನ್ನೇಗೌಡ ಅವರು ಕುಟುಂಬ ಸಮೇತರಾಗಿ ಮಾರ್ಚ್ 22 ರಂದು ತುಮಕೂರು ಜಿಲ್ಲೆಯ ಹುಲಿಯೂರುದುರ್ಗದಲ್ಲಿ ಜಾತ್ರೆಗೆಂದು ಹೋಗಿತ್ತು. ಅವರು ಹಿಂದಿರುಗುವವರೆಗೆ ತಮ್ಮ ಮನೆಯಲ್ಲಿ ತಂಗಲು ಸಂಬಂಧಿಕರೊಬ್ಬರಿಗೆ ಸೂಚಿಸಿದ್ದರು. ಈ ವೇಳೆ ಉಮಾ ಅವರು ನಕಲಿ ಕೀ ಬಳಸಿ ಮಾರ್ಚ್ 24 ರಂದು ಕಳ್ಳತನ ಮಾಡಿದ್ದಾರೆ. ರಾತ್ರಿ ಸಂಬಂಧಿಕರು ಬಂದಾಗ, ಯಾರೋ ಮನೆಗೆ ನುಗ್ಗಿರುವುದು ಕಂಡುಬಂದಿದೆ ಮತ್ತು ಈ ವಿಚಾರವನ್ನು ಕುನ್ನೇಗೌಡ ಅವರಿಗೆ ತಿಳಿಸಿದ್ದಾರೆ. ಅವರು ಮನೆಗೆ ಧಾವಿಸಿ ನೋಡಿದಾಗ 52 ಲಕ್ಷ ರೂ. ನಗದು ಮತ್ತು 182 ಗ್ರಾಂ ಚಿನ್ನದ ನಾಣ್ಯಗಳು ಕಳ್ಳತನವಾಗಿರುವುದು ಪತ್ತೆಯಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ.

# ಮಳೆ ಹಾನಿಗೊಳಗಾದ ಪ್ರದೇಶಗಳಿಗೆ ಎಂ.ಆರ್ ಮಂಜುನಾಥ್ ಭೇಟಿ

**ಕೊಳ್ಳೇಗಾಲ:** ತಾಲೂಕಿನ ಸತ್ತೇಗಾಲ ವ್ಯಾಪ್ತಿಯ ವಿವಿಧಡೆ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಶಾಸಕ ಎಂ.ಆರ್ ಮಂಜುನಾಥ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತಾಲೂಕಿನಾದ್ಯಂತ ಶುಕ್ರವಾರ ಗುಡುಗು ಸಹಿತ ಬಾರಿ ಬಿರುಗಾಳಿ ಸಾಧಾರಣ ಮಳೆಗೆ ರೈತರ ಜಮೀನುಗಳಲ್ಲಿ ಬೆಳೆಯಲಾಗಿದ್ದ ಬಾಳೆ ಬೆಳೆ ಮತ್ತು ಮನೆಗಳ ಮೇಲ್ಚಾವಣಿ ಬಿರುಗಾಳಿಗೆ ನೆಲ ಕಚ್ಚಿದೆ. ರೈತರಿಗೆ ಭಾರಿ ಬಿರುಗಾಳಿಯಿಂದ ಹಾನಿಯಾಗಿರುವ ಬೆಳೆಗಳಿಗೆ ಕಂದಾಯ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಜಂಟಿ ಸರ್ವೆ ನಡೆಸಿ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ವರದಿ ನೀಡಲು ಸೂಚನೆ ನೀಡಲಾಗುವುದು ಈಗಾಗಲೇ ಅಧಿಕಾರಿಗಳ ಜೊತೆ ಮಾತನಾಡಿದ್ದೇನೆ ಹೀಗಾಗಿ ರೈತರು ತಮ್ಮ ಜಮೀನುಗಳಲ್ಲಿ ಬೆಳೆಗಳು ಹಾಳಾಗಿರುವ ಬಗ್ಗೆ ಸೂಕ್ತ ದಾಖಲಾತಿಗಳನ್ನು ಅಧಿಕಾರಿಗಳಿಗೆ ನೀಡುವ ಮೂಲಕ ಪ್ರಕೃತಿ ವಿಕೋಪ ದಡಿ ಸಿಗುವ ಸೂಕ್ತ ಪರಿಹಾರ ಪಡೆಯಲು ಅನುಕೂಲ ಕಂಪಿಸಲಾಗುವುದು ಎಂದರು. ಜೆಡಿಎಸ್ ಮುಖಂಡರುಗಳು ಹಾಗೂ ಕಾರ್ಯಕರ್ತರು ಗ್ರಾಮಸ್ಥರು ಉಪಸ್ಥಿತರಿದ್ದರು.



# ಇಂಡಿಗನತ್ತ: ಗ್ರಾಮಸ್ಥರೊಂದಿಗೆ ಸಭೆ

**ಮಹದೇಶ್ವರ ಬೆಟ್ಟ:** ತಾಲ್ಲೂಕಿನ ಇಂಡಿಗನತ್ತ ಗ್ರಾಮದಲ್ಲಿ ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಮುಖಂಡ ಹೊನ್ನೂರು ಪ್ರಕಾಶ್ ಅಧ್ಯಕ್ಷತೆ ಗ್ರಾಮಸ್ಥರು ಹಾಗೂ ರೈತ ಸಂಘದ ಸದಸ್ಯರ ಸಭೆ ಮಂಗಳವಾರ ನಡೆಯಿತು.

ಮತದಾನದ ದಿನ ನಡೆದ ಘರ್ಷಣೆ, ಕಾನೂನು ಹೋರಾಟ, ಗ್ರಾಮದಲ್ಲಿ ಶಾಂತಿ ನೆಲೆಸುವಂತೆ ಮಾಡುವುದು ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಮುಖಂಡರು ಚರ್ಚೆ ನಡೆಸಿದರು.

ಘರ್ಷಣೆ ಪ್ರಕರಣದಲ್ಲಿ ಆರೋಪಿಗಳಾಗಿದ್ದುಕೊಂಡು ತಲೆಮರೆಸಿಕೊಂಡಿರುವ ಆರೋಪಿಗಳು ಪೊಲೀಸರಿಗೆ ಶರಣಾಗುವ ನಿಟ್ಟಿನಲ್ಲಿ ಮನವರಿಗೆ ಮಾಡುವುದು, ಗ್ರಾಮಕ್ಕೆ ಮೂಲ ಸೌಕರ್ಯ ಕಲ್ಪಿಸುವ ಸಂಬಂಧ ಜಿಲ್ಲಾಡಳಿತ ಮತ್ತು ಚುನಾಯಿತ ಜನಪ್ರತಿನಿಧಿಗಳ ಜೊತೆ ಚರ್ಚಿಸುವ ಸಂಬಂಧ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಮತಗಟ್ಟೆ ಧ್ವಂಸ ಹಲ್ಲೆ ಪ್ರಕರಣದಿಂದ ಇಂಡಿಗನತ್ತ ಹಾಗೂ ಮೆಂದಾರೆ ಗ್ರಾಮಸ್ಥರ ನಡುವೆ ಉಂಟಾಗಿರುವ ವೈಮನಸ್ಸನ್ನು ಸರಿ ಮಾಡುವುದು, ಪ್ರಕರಣ ವಾಪಸ್ ಪಡೆಯುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆಸುವ ಬಗ್ಗೆಯೂ ತೀರ್ಮಾನಿಸಲಾಯಿತು.

ಗ್ರಾಮದಲ್ಲಿರುವ ಮಕ್ಕಳಿಗೆ ಆಹಾರ, ಆರೈಕೆ ಜೊತೆಗೆ ಜೀವನ ಮುಖ್ಯವಾಗಿದೆ. ಜಾನುವಾರುಗಳಿಗೆ ಮೇವು, ನೀರು, ಮೂಲ ಸೌಕರ್ಯ ಬೇಕಾಗಿದೆ. ಈ ಸಂಬಂಧ ಜಿಲ್ಲಾಡಳಿತದೊಂದಿಗೆ ಚರ್ಚಿಸಲಾಗುವುದು. ಜೊತೆಗೆ ಆರೋಪಿಗಳಿಗೆ ಆದಷ್ಟು ಬೇಗ ಜಾಮೀನು ಕೊಡಿಸಲು ಪ್ರಯತ್ನ ನಡೆಸಲಾಗುವುದು ಎಂದು ಹೊನ್ನೂರು ಪ್ರಕಾಶ್ ತಿಳಿಸಿದರು.



## ವಿಚಾರಣೆ ಮುಂದೂಡಿಕೆ

ಇಂಡಿಗನತ್ತ ಗ್ರಾಮದಲ್ಲಿ ಮತದಾನ ದಿನ ನಡೆದ ಘರ್ಷಣೆಗೆ ಸಂಬಂಧಿಸಿದಂತೆ ಬಂಧಿತ ಆರೋಪಿಗಳ ಜಾಮೀನು ಅರ್ಜಿ ವಿಚಾರಣೆಯನ್ನು ಇಲ್ಲಿನ ನ್ಯಾಯಾಲಯ ಮುಂದೂಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ 33 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. 33 ಮಂದಿಯೂ ಜಾಮೀನು ಕೋರಿ ನಗರದ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಮಂಗಳವಾರ ಅರ್ಜಿಯ ವಿಚಾರಣೆ ನಡೆದಿದ್ದು ಪಬ್ಲಿಕ್ ಪ್ರಾಸಿಕ್ಯೂಟರ್ ಮಂಜುನಾಥ್ ಅವರು ಆಕ್ಷೇಪಣೆ ಸಲ್ಲಿಸಲು ಸಮಯಾವಕಾಶ ಕೇಳಿದ್ದರಿಂದ ನ್ಯಾಯಾಧೀಶರು ವಿಚಾರಣೆಯನ್ನು ಇದೇ 13ರವರೆಗೆ ಮುಂದೂಡಿದ್ದಾರೆ.

# ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗಾಗಿ ಅರ್ಜಿ

**ಬೆಂಗಳೂರು:** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಬೆಂಗಳೂರು ಇದರ ಅಂಗ ಸಂಸ್ಥೆಯಾದ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್, ಬೆಂಗಳೂರು ವತಿಯಿಂದ ನಡೆಸಲಾಗುವ ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯನ್ನು ಜುಲೈ 1 ರಿಂದ ಪ್ರಾರಂಭಿಸಲಾಗುತ್ತಿದ್ದು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮತ್ತು ರಾಮನಗರ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಂದ ಮತ್ತು ಎಲ್ಲಾ ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿ ಪಡೆಯುವುದರಿಂದ ಸಹಕಾರ ಸಂಘ / ಸಂಸ್ಥೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯಲು ಅನುಕೂಲವಾಗುತ್ತದೆ ಮತ್ತು ನೇಮಕಾತಿ ಪ್ರಕ್ರಿಯೆಯಲ್ಲಿ ಆದ್ಯತೆ ನೀಡಲಾಗುವುದು.

ಈ ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಅರ್ಜಿಯನ್ನು ಮೇ 31 ರ ಒಳಗಾಗಿ ಸಲ್ಲಿಸುವುದು. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 500/- ಶಿಷ್ಯ ವೇತನ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 600/- ಶಿಷ್ಯ ವೇತನ ನೀಡಲಾಗುವುದು.

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಭವನ, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಕಟ್ಟಡ, ನಂ 1/3, 2ನೇ ಮಹಡಿ, 3ನೇ ಮುಖ್ಯರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ, ಮಕ್ಕಳಕೂಟ ಹತ್ತಿರ, ಚಾಮರಾಜಪೇಟೆ, ಬೆಂಗಳೂರು ಹಾಗೂ ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಬೆಂಗಳೂರು ಗ್ರಾಮಾಂತರ ಈ ಜಿಲ್ಲೆಯ ಜಿಲ್ಲಾ ಸಹಕಾರ ಸಂಘಗಳಲ್ಲೂ ಸಹ ಅರ್ಜಿ ದೊರೆಯುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9902189872, 9036256781 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.



## ಸಾರ್ವಜನಿಕ ವಿತರಣೆಯಿಂದ 41.15 ಕೋಟಿ ರೂ.ಗಳವರೆಗೆ ಸಂಗ್ರಹಿಸಲು ಮುಂದಾದ ಎನರ್ಜಿ ಮಿಷನ್ ಮೆಷಿನರೀಸ್

ವಿವಿಧ ಶ್ರೇಣಿಯ ಶೀಟ್ ಮೆಟಲ್ ಯಂತ್ರೋಪಕರಣಗಳ ವಿನ್ಯಾಸ ಮತ್ತು ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಅಹಮದಾಬಾದ್ ಮೂಲದ ಎನರ್ಜಿ ಮಿಷನ್ ಮೆಷಿನರೀಸ್ (ಇಂಡಿಯಾ) ಲಿಮಿಟೆಡ್ ತನ್ನ ಎಸ್ಎಂಇ ಸಾರ್ವಜನಿಕ ವಿತರಣೆಯಿಂದ 41.15 ಕೋಟಿ ರೂ.ಗಳನ್ನು ಸಂಗ್ರಹಿಸಲು ಯೋಜಿಸಿದೆ. ರಾಷ್ಟ್ರೀಯ ಸ್ಟಾಕ್ ಎಕ್ಸ್ಚೇಂಜ್ ನ ಎನ್ಎಸ್ಇ ಎಮರ್ಜ್ ಪ್ಲಾಟ್ ಫಾರ್ಮ್ ನಲ್ಲಿ ತನ್ನ ಸಾರ್ವಜನಿಕ ವಿತರಣೆಯನ್ನು ಪ್ರಾರಂಭಿಸಲು ಕಂಪನಿಯು ಅನುಮೋದನೆ ಪಡೆದಿದೆ. ಸಾರ್ವಜನಿಕ ವಿತರಣೆಯು ಮೇ 9 ರಂದು ಚಂದಾದಾರಿಕೆಗೆ ತೆರೆಯುತ್ತದೆ ಮತ್ತು ಮೇ 13 ರಂದು ಕೊನೆಗೊಳ್ಳುತ್ತದೆ. ಸಾರ್ವಜನಿಕ ವಿತರಣೆಯಿಂದ ಬರುವ ಆದಾಯವನ್ನು ಸಿವಿಲ್ ನಿರ್ಮಾಣ ಕಾರ್ಯಗಳು, ಗುಜರಾತ್ ನ ಸನಂದನಲ್ಲಿ ಅಸ್ತಿತ್ವದಲ್ಲಿರುವ ಉತ್ಪಾದನಾ ಘಟಕದಲ್ಲಿ ಹೊಸ ಸ್ಥಾವರ ಮತ್ತು ಯಂತ್ರೋಪಕರಣಗಳು, ಕಾರ್ಪೊರೇಟ್ ಉದ್ದೇಶಗಳನ್ನು ಪೂರೈಸುವುದು ಸೇರಿದಂತೆ ಕಂಪನಿಯ ವಿಸ್ತರಣಾ ಯೋಜನೆಗಳಿಗೆ ಧನಸಹಾಯ ನೀಡಲು ಬಳಸಲಾಗುವುದು. ಹೆಮ್ ಸೆಕ್ಯುರಿಟೀಸ್ ಲಿಮಿಟೆಡ್ ಈ ಸಂಚಿಕೆಯ ಪ್ರಮುಖ ವ್ಯವಸ್ಥಾಪಕರಾಗಿದ್ದಾರೆ. ಆರಂಭಿಕ ಸಾರ್ವಜನಿಕ ಕೊಡುಗೆಯು ಸಾರ್ವಜನಿಕ ವಿತರಣೆಗಾಗಿ ಪ್ರತಿ ಷೇರಿಗೆ 131 ರಿಂದ 138 ರೂ.ಗಳ ಬೆಲೆ ಬ್ಯಾಂಡ್ ನಲ್ಲಿ ತಲಾ 10 ರೂ.ಗಳ ಮುಖಬೆಲೆಯ 29.82 ಲಕ್ಷ ಈಕ್ವಿಟಿ ಷೇರುಗಳನ್ನು ಹೊಸದಾಗಿ ವಿತರಿಸುವುದನ್ನು ಒಳಗೊಂಡಿದೆ. 41.15 ಕೋಟಿ ರೂ.ಗಳ ವಿತರಣಾ ಆದಾಯದಲ್ಲಿ 6.86 ಕೋಟಿ ರೂ.ಗಳನ್ನು ಸನಂದ್‌ನಲ್ಲಿರುವ ಅಸ್ತಿತ್ವದಲ್ಲಿರುವ ಉತ್ಪಾದನಾ ಘಟಕದಲ್ಲಿ ಸಿವಿಲ್ ನಿರ್ಮಾಣ ಕಾರ್ಯಗಳಿಗೆ, 7.43 ಕೋಟಿ ರೂ.ಗಳನ್ನು ಹೊಸ ಸ್ಥಾವರ ಸ್ಥಾಪನೆಗೆ, 15 ಕೋಟಿ ರೂ.ಗಳನ್ನು ದುಡಿಯುವ ಬಂಡವಾಳದ ಅಗತ್ಯಗಳಿಗಾಗಿ ಬಳಸಲು ಕಂಪನಿ ಯೋಜಿಸಿದೆ.

## ಡ್ರೈ ಪನೀರ್ ಮಂಚೂರಿ ರೆಸಿಪಿ

### ಪಾಕ ಶಾಲೆ



### ಮಾಡುವ ವಿಧಾನ

ಒಂದು ದೊಡ್ಡ ಬೌಲ್ ನಲ್ಲಿ ಮೈದಾಹಿಟ್ಟು ಮತ್ತು ಕಾರ್ನ್ ಫ್ಲೋರ್ ಮಿಕ್ಸ್ ಮಾಡಿ. ಅದಕ್ಕೆ ಒಂದು ಚಮಚ ಅಚ್ಚಖಾರದ ಪುಡಿ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಬೆರೆಸಿ. ಅಗತ್ಯವಿರುವಷ್ಟು ನೀರನ್ನು ಹಾಕಿ ಕಲಸಿಕೊಳ್ಳಿ. ನಂತಹ ಕಲಸಿದ ಹಿಟ್ಟಿನಲ್ಲಿ ಪನೀರ್ ತುಂಡುಗಳನ್ನು ಅದ್ದಿ, ಹೊಂಬಣ್ಣ ಬರುವವರೆಗೆ ಎಣ್ಣೆಯಲ್ಲಿ ಕರಿಯಿರಿ. ಕಿಚನ್ ಪೇಪರ್ ಸಹಾಯದಿಂದ ಹೆಚ್ಚುವರಿ ಎಣ್ಣೆಯನ್ನು ತೆಗೆದುಹಾಕಿ. ದೊಡ್ಡ ಕಡಾಯಿಯಲ್ಲಿ 3 ಚಮಚ ಎಣ್ಣೆ ಹಾಕಿ. ಎಣ್ಣೆ ಬಿಸಿಯಾದ ತಕ್ಷಣ ಹೆಚ್ಚಿದ ಶುಂಠಿ, ಬೆಳ್ಳುಳ್ಳಿ, ಈರುಳ್ಳಿ ಹಾಕಿ ಹುರಿಯಿರಿ. ನಂತರ ಟೊಮೊಟೋ ಸಾಸ್, ಸೋಯಾ ಸಾಸ್ ಮತ್ತು ವಿನಿಗರ್ ಬೆರೆಸಿ. ಸ್ವಲ್ಪ ಉಪ್ಪು ಮತ್ತು ಅರ್ಧ ಚಮಚ ಅಚ್ಚಖಾರದ ಪುಡಿ ಹಾಕಿ ತೊಳಸಿ. ಸಾಸ್ ಸ್ವಲ್ಪ ಗಟ್ಟಿಯಾಗುವವರೆಗೆ ಅಂದ್ರೆ, ಒಂದು ನಿಮಿಷ ತೊಳಸುತ್ತಾ ಇರಿ. ನಂತರ ಕರಿದಿಟ್ಟಿದ್ದ ಪನೀರ್, ಹೆಚ್ಚಿಟ್ಟಿದ್ದ ಸ್ಪ್ರಿಂಗ್ ಆನಿಯನ್ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಬಿಸಿಬಿಸಿ ಇದ್ದಾಗಲೇ ಸವಿಯಲು ಕೊಡಿ.

### ಬೇಕಾಗಿರುವ ಪದಾರ್ಥ

**ಪನೀರ್ ನ ಚಿಕ್ಕ ಚಿಕ್ಕ ತುಣುಕುಗಳು, ಅರ್ಧ ಕಪ್ ಮೈದಾಹಿಟ್ಟು, 2 ಚಮಚ ಕಾರ್ನ್ ಫ್ಲೋರ್, ಒಂದೂವರೆ ಚಮಚ ಅಚ್ಚಖಾರದ ಪುಡಿ, ರುಚಿಗೆ ತಕ್ಕಷ್ಟು ಉಪ್ಪು, ಅರ್ಧ ಕಪ್ ನೀರು, ಕರಿಯಲು ಎಣ್ಣೆ. 3 ಚಮಚ ಎಣ್ಣೆ, ಸಣ್ಣಗೆ ಹೆಚ್ಚಿದ 1 ಚಮಚ ಶುಂಠಿ, ಸಣ್ಣಗೆ ಹೆಚ್ಚಿದ ಎರಡು ಬೆಳ್ಳುಳ್ಳಿ ಎಸಳು, ಸಣ್ಣಗೆ ಹೆಚ್ಚಿದ ಅರ್ಧ ಈರುಳ್ಳಿ, ಅರ್ಧ ಕಪ್ ಟೊಮೆಟೋ ಸಾಸ್, ಒಂದು ಚಮಚ ಸೋಯಾ ಸಾಸ್, ಒಂದು ಚಮಚ ವಿನಿಗರ್, ಹೆಚ್ಚಿದ ಸ್ಪ್ರಿಂಗ್ ಆನಿಯನ್.**

## ಆಲಿಯಾ ಭಟ್‌ಗೆ ಮತ್ತೆ ಕಾಡಿದ ಡೀಪ್ಫೇಕ್



ಬಾಲಿವುಡ್ ಮಂದಿಯನ್ನು ಡೀಪ್ಫೇಕ್ ಭೂತ ಬಿಟ್ಟು ಬಿಡದೆ ಕಾಡ್ತಿದೆ. ರಶ್ಮಿಕಾ ಮಂದಣ್ಣ ಡೀಫ್ಫೇಕ್ ವಿಡಿಯೋ ಮೂಲಕ ಆರಂಭವಾದ ನಕಲಿ ವಿಡಿಯೋಗಳ ಹಾವಳಿ ಇನ್ನು ನಿಂತಿಲ್ಲ. ಕತ್ರಿನಾ, ಕಾಜೋಲ್, ಆಲಿಯಾ ಭಟ್ ಸೇರಿದಂತೆ ಕೆಲ ನಟಿಯರ ಡೀಪ್ ಫೇಕ್ ವಿಡಿಯೋಗಳು ವೈರಲ್ ಆಗಿತ್ತು. ಲೋಕಸಭೆ ಚುನಾವಣೆ ಬಳಿಕ ಅಮೀರ್ ಖಾನ್, ಅಲ್ಲು ಅರ್ಜುನ್ ಪ್ರಚಾರದ ಫೇಕ್ ವಿಡಿಯೋಗಳು ಕೂಡ ಭಾರೀ ಸದ್ದು ಮಾಡಿದ್ವು. ಇದೀಗ ಬಾಲಿವುಡ್ ನಟಿ ಅಲಿಯಾ ಭಟ್ ಅವರ ಮತ್ತೊಂದು ಫೇಕ್ ವಿಡಿಯೋ ವೈರಲ್ ಆಗಿದೆ. ಆಲಿಯಾ ಭಟ್ ಡೀಪ್ ಫೇಕ್ ವಿಡಿಯೋ ವೈರಲ್ ಎಐ ತಂತ್ರಜ್ಞಾನದ ಬಳಸಿಕೊಂಡು ಕಿಡಿಗೇಡಿಗಳು ಆಲಿಯಾ ಭಟ್ ಮುಖವನ್ನು ಬೇರೆ ನಟಿಯ ದೇಹಕ್ಕೆ ಜೋಡಿಸಿ ಮಾರ್ಫ್ ಮಾಡಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ನಟಿ ಆಲಿಯಾ ಭಟ್ ಫೇಕ್ ವಿಡಿಯೋ ನೋಡಿ ನೆಟ್ಟಿಗರು ಶಾಕ್ ಆಗಿದ್ದಾರೆ. ಈ ವಿಡಿಯೋ ನೋಡಿದ್ರೆ, ಅಚ್ಚು ಅಲಿಯಾ ಭಟ್ ರವರನ್ನೇ ನೋಡಿದಂತಿದೆ. ತುಂಬಾ ಹೋಲಿಕೆ ಇದೆ. ಆದ್ರೆ ಇದು ನಕಲಿ ವಿಡಿಯೋ ಆಗಿದೆ. ನಟಿ ವಾಮಿಕಾ ಗಬ್ಬಿ ಅವರ ವಿಡಿಯೋ ಮೇಲೆ ಆಲಿಯಾ ಭಟ್ ಮುಖವನ್ನು ಮಾಡಲಾಗಿದೆ. ವಿಡಿಯೋ ನೋಡಿದ ಅನೇಕರು ಈ ವಿಡಿಯೋದಲ್ಲಿರೋದು ಆಲಿಯಾ ಭಟ್ ಎಂದೇ ನಂಬಿದ್ದಾರೆ. ವಾಮಿಕಾ ವಿಡಿಯೋಗೆ ಆಲಿಯಾ ಮುಖ! ವಾಮಿಕಾ ಕೆಲವು ದಿನಗಳ ಹಿಂದೆ ತನ್ನ ಖಟಿಣಚಿರಡಿಚಿಟ ಖಾತೆಯಲ್ಲಿ ಸೀರೆಯುಟ್ಟ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ಕ್ಲಿಪ್ ನಲ್ಲಿ, 'ಜೂಬಿಲಿ' ನಟಿ ರೆಡ್ ಸೀರೆಯಲ್ಲಿ ಮಿಂಚುತ್ತಿದ್ರು. ಅವರು ಸಂಜಯ್ ಲೀಲಾ ಬನ್ಸಾಲಿಯವರ ನೆಟ್ಫ್ಲಿಕ್ಸ್ ಸರಣಿ 'ಹೀರಾಮಂಡಿ' ಸ್ಕ್ರೀನಿಂಗ್ ಗಾಗಿ ಧರಿಸಲು ನಟಿ ವಾಮಿಕಾ ರೆಡ್ ಸೀರೆಯನ್ನು ಆಯ್ಕೆ ಮಾಡಿಕೊಂಡಿದ್ದರು, ಅಲ್ಲಿ ಆಲಿಯಾ ಕೂಡ ಇದ್ದರು. ಈ ವಿಡಿಯೋವನ್ನು ಕೆಲವರು ಮಾರ್ಫ್ ಮಾಡಿದ್ದಾರೆ. ಬಿಗ್ ಆಫರ್! ಡೀಪ್ಫೇಕ್ ವಿಡಿಯೋಗೆ ಆಲಿಯಾ ಅಭಿಮಾನಿಗಳಿಂದ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇದು ಕಾನೂನುಬದ್ಧವೇ ಎಂದು ಸೋಶಿಯಲ್ ಮೀಡಿಯಾ ಬಳಕೆದಾರೊಬ್ಬರು ಕಮೆಂಟ್ ಮಾಡಿದ್ದಾರೆ. ನೀವು ಆಲಿಯಾಳ ಮುಖವನ್ನು ಬಳಸುತ್ತಿದ್ದೀರಿ ಇದಕ್ಕೆಲ್ಲಾ ಬ್ರೇಕ್ ಬೀಳಲೇಬೇಕು ಎಂದಿದ್ದಾರೆ.



## ಹಲ್ಲುನೋವಿಗೆ ಮನೆಮದ್ದು



ಹೆಲ್ತ್ ಟಿಪ್ಸ್

ಹಲ್ಲುಗಳು ನಮಗೆ ಬಹಳ ಮುಖ್ಯ. ಅದರ ಸಹಾಯದಿಂದ,ಆಹಾರವನ್ನು ಸರಿಯಾಗಿ ಅಗಿಯಲು ಸಾಧ್ಯವಾಗುತ್ತದೆ. ಇದು ನಮ್ಮ ದೇಹಕ್ಕೆ ಪೌಷ್ಟಿಕಾಂಶವನ್ನು ಒದಗಿಸುತ್ತದೆ. ಲ್ಲುಗಳಲ್ಲಿ ಯಾವುದೇ ರೀತಿಯ ಸಮಸ್ಯೆ ಕಂಡುಬಂದರೂ ಆಹಾರವನ್ನು ಅಗಿಯುವುದು ಸಾಧ್ಯವಾಗುವುದಿಲ್ಲ. ಸಾಮಾನ್ಯವಾಗಿ ಜನರು ಸೌಮ್ಯವಾದ ಹಲ್ಲುನೋವು ಕಾಣಿಸಿಕೊಂಡಾಗ ಅದನ್ನು ನಿರ್ಲಕ್ಷಿಸುತ್ತಾರೆ.ಕ್ರಮೇಣ ಈ ಹಲ್ಲುನೋವು ಗಣನೀಯವಾಗಿ ಹೆಚ್ಚಾಗುತ್ತದೆ.ಆಗ ಪೈನ್ ಕಿಲ್ಲರ್ ಬಳಸುತ್ತಾರೆ. ಆದರೆ ಪೈನ್ ಕಿಲ್ಲರ್ ಬಳಸುವ ಬದಲು ಕೆಲವು ಮನೆ ಮದ್ದು ಬಳಸುವ ಮೂಲಕ ಹಲ್ಲುನೋವಿನ ಸಮಸ್ಯೆಯನ್ನು ನಿವಾರಿಸಬಹುದು. ಹಲ್ಲುನೋವಿನ ಸಂದರ್ಭದಲ್ಲಿ,ಕಲ್ಲು ಉಪ್ಪನ್ನು ಬಳಸಬಹುದು.ಕಲ್ಲು ಉಪ್ಪನ್ನು ಬಳಸುವುದರಿಂದ ಹಲ್ಲಿನ ಸಮಸ್ಯೆಗಳನ್ನು ಬಹಳ ಮಟ್ಟಿಗೆ ಕಡಿಮೆ ಮಾಡಬಹುದು. ಇದಕ್ಕಾಗಿ, 1 ಗ್ಲಾಸ್ ಉಗುರು ಬೆಚ್ಚಗಿನ ನೀರನ್ನು ತೆಗೆದುಕೊಂಡು,ಅದರಲ್ಲಿ ಒಂದು ಚಿಟಿಕೆ ಕಲ್ಲು ಉಪ್ಪು ಮಿಶ್ರಣ ಮಾಡಿ ಮತ್ತು ಅದರೊಂದಿಗೆ ಗಾರ್ಗಲ್ ಮಾಡಬೇಕು. ಇದು ಹಲ್ಲಿನಲ್ಲಿರುವ ಬ್ಯಾಕ್ಟೀರಿಯಾವನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ. ಈರುಳ್ಳಿ ರಸವನ್ನು ಬಳಸುವುದು ಹಲ್ಲುಗಳಲ್ಲಿನ ಊತ ಮತ್ತು ನೋವನ್ನು ಪರಿಣಾಮಕಾರಿಯಾಗಿ ಕಡಿಮೆ ಮಾಡಲು ಪರಿಣಾಮಕಾರಿಯಾಗಿದೆ.ಈರುಳ್ಳಿ ರಸವು ಉರಿಯೂತದ ಮತ್ತು ಉತ್ಕರ್ಷಣ ನಿರೋಧಕಗಳನ್ನು ಹೊಂದಿರುತ್ತದೆ. ಇದು ಹಲ್ಲು ನೋವನ್ನು ಕಡಿಮೆ ಮಾಡುತ್ತದೆ.ಇದಕ್ಕಾಗಿ ಸುಮಾರು 1 ಚಮಚ ಈರುಳ್ಳಿ ರಸವನ್ನು ತೆಗೆದುಕೊಂಡು ಅದನ್ನು ಹಲ್ಲುಗಳಿಗೆ ಹಚ್ಚಿ ಸುಮಾರು 10 ನಿಮಿಷಗಳ ಕಾಲ ಮಸಾಜ್ ಮಾಡಬೇಕು. ಇದರಿಂದ ನೋವಿನಿಂದ ಮುಕ್ತಿ ಪಡೆಯಬಹುದು. ಹಲ್ಲುನೋವು ಕಡಿಮೆ ಮಾಡಲು ಲವಂಗದ ಎಣ್ಣೆಯನ್ನು ಬಳಸಬಹುದು. ಲವಂಗದ ಎಣ್ಣೆಯು ಬ್ಯಾಕ್ಟೀರಿಯಾ ವಿರೋಧಿ,ಶಿಲೀಂಧ್ರ ವಿರೋಧಿ ಗುಣಗಳನ್ನು ಹೊಂದಿದೆ. ಇದು ನೋವನ್ನು ಕಡಿಮೆ ಮಾಡುತ್ತದೆ.ಅಲ್ಲದೆ, ಸಡುಗಳಲ್ಲಿನ ಊತವನ್ನು ಕಡಿಮೆ ಮಾಡಲು ಕೂಡಾ ಇದು ಪ್ರಯೋಜನಕಾರಿಯಾಗಿದೆ. ಇಂಗು ಮತ್ತು ನಿಂಬೆ ರಸವನ್ನು ಬಳಸುವುದು ಕೂಡಾ ಹಲ್ಲು ನೋವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

## ಸೂಕ್ಷ್ಮ ಚರ್ಮದವರಿಗೆ ತೆಂಗಿನ ಎಣ್ಣೆ ಹಾನಿಕರ

ತೆಂಗಿನ ಎಣ್ಣೆ ಚರ್ಮಕ್ಕೆ, ಕೂದಲಿಗೆ ಬಹಳ ಒಳ್ಳೆಯದು. ಇದನ್ನು ಆಹಾರದಲ್ಲಿಯೂ ಸೇವನೆ ಮಾಡ್ತೇವೆ. ಇದು ಆರೋಗ್ಯಕ್ಕೆ ಅತ್ಯುತ್ತಮ ಎಂದು ನಂಬಲಾಗಿದೆ. ತುಂಬಾ ಪ್ರಯೋಜನಕಾರಿ ಎಂದುಕೊಂಡಿರುವ ತೆಂಗಿನ ಎಣ್ಣೆಯಲ್ಲೂ ಚರ್ಮಕ್ಕೆ ಹಾನಿಪಡಿಸುವಂತಹ ಅಂಶವಿದೆ ಎಂದ್ರೆ ನಂಬಲೇಬೇಕು. ತೆಂಗಿನ ಎಣ್ಣೆ ಮಾಯಿಶ್ಚರೈಸರ್ ಕೆಲಸ ಮಾಡುತ್ತದೆ. ಆದ್ರೆ ಎಲ್ಲ ರೀತಿಯ ಚರ್ಮಕ್ಕೂ ಇದು ಒಳ್ಳೆಯದಲ್ಲ. ಒಣ ಚರ್ಮದವರಿಗೆ ಇದು ಹೊರಗಿನಿಂದ ಪೋಷಕಾಂಶ ನೀಡುತ್ತದೆ. ಆದ್ರೆ ಒಳಗಿನಿಂದ ಮಾಯಿಶ್ಚರೈಸರ್ ಮಾಡುವುದಿಲ್ಲ. ಆಯುರ್ವೇದದ ಪ್ರಕಾರ ತೆಂಗಿನ ಎಣ್ಣೆಯಲ್ಲಿ ಉಷ್ಣತೆ ಹೆಚ್ಚಿರುತ್ತದೆ. ಹಾಗಾಗಿ ಎಣ್ಣೆಯುಕ್ತ ಚರ್ಮ ಹೊಂದಿರುವವರು ಇದ್ರ ಸೇವನೆ ಮಾಡದಿರುವುದು ಒಳ್ಳೆಯದು. ಮೊಡವೆ ಸಮಸ್ಯೆಯಿರುವವರು ಕೂಡ ತೆಂಗಿನ ಎಣ್ಣೆಯಿಂದ ದೂರವಿರುವುದು ಬೆಸ್ಟ್. ಇದು ಮೊಡವೆ ಸಮಸ್ಯೆಯನ್ನು ಇನ್ನಷ್ಟು ಹೆಚ್ಚಿಸುವ ಸಾಧ್ಯತೆಯಿರುತ್ತದೆ. ತುಂಬಾ ಸೂಕ್ಷ್ಮ ಚರ್ಮದವರು ಮೊದಲು ತೆಂಗಿನ ಎಣ್ಣೆಯನ್ನು ಅಂಗೈಗೆ ಅಥವಾ ಕಿವಿ ಹಿಂದೆ ಹಚ್ಚಿ ನೋಡಿ. ಕೆಲವೊಮ್ಮೆ ತೆಂಗಿನ ಎಣ್ಣೆ ತುರಿಕೆಗೆ ಕಾರಣವಾಗುತ್ತದೆ. ತೆಂಗಿನ ಎಣ್ಣೆ ಚರ್ಮವನ್ನು ಮತ್ತಷ್ಟು ಶುಷ್ಕ ಹಾಗೂ ಒರಟು ಮಾಡುತ್ತದೆ.

### ಬ್ಯೂಟಿ ಟಿಪ್ಸ್



## ಬೆಂಗಳೂರಿನ ಫನ್ ವರ್ಲ್ಡ್ ಅಮ್ಯೂಸ್ಮೆಂಟ್ ಪಾರ್ಕ್ ನಿಂದ ಅದ್ಭುತ ಹೊಸ ಆಕರ್ಷಣೆಗಳ ಅನಾವರಣ







ಫನ್ ವರ್ಲ್ಡ್ ಅಮ್ಯೂಸ್ಮೆಂಟ್ ಪಾರ್ಕ್ ಬೆಂಗಳೂರಿನಲ್ಲಿ ಥ್ರಿಲ್ ಮತ್ತು ಉತ್ಸಾಹವನ್ನು ಮರು ವ್ಯಾಖ್ಯಾನಿಸುವ ತನ್ನ ಹೊಚ್ಚಹೊಸ ಆಕರ್ಷಣೆಗಳನ್ನು ಅನಾವರಣಗೊಳಿಸಲು ಸಂತೋಷ ಪಡುತ್ತದೆ. ಹಲವು ವರ್ಷಗಳಿಂದ ಕೋಟ್ಯಂತರ ಜನರನ್ನು ರಂಜಿಸುತ್ತಿರುವ ಪರಂಪರೆ ಹೊಂದಿರುವ ಫನ್ ವರ್ಲ್ಡ್ ಕುಟುಂಬಗಳು ಮತ್ತು ಸಾಹಸ ನಿರೀಕ್ಷಿಸುವರಿಗೆ ಪ್ರಮುಖ ತಾಣವಾಗಿ ಮುಂದುವರಿಯುತ್ತಿದೆ. ಫನ್ ವರ್ಲ್ಡ್ ಇದೀಗ 29 ರೋಮಾಂಚಕ ಹೊಸ ವಾಟರ್ ಸ್ಲೈಡ್ ಗಳನ್ನು ಪರಿಚಯಿಸಿದ್ದು ಅದರಲ್ಲಿ ದೇಶದಲ್ಲೇ ಅತ್ಯಂತ ಎತ್ತರದ ರೈಡ್ ಒಳಗೊಂಡಿದ್ದು ಈ ವಿಶೇಷವು ನಮ್ಮ ಪಾರ್ಕ್ ನಲ್ಲಿ ಮಾತ್ರ ಲಭ್ಯವಿದೆ. ಈ ಮಹತ್ತರ ಸೇರ್ಪಡೆಯು ಹಿಂದೆಂದೂ ಕಾಣದ ರೋಮಾಂಚಕ ಅನುಭವ ನೀಡುತ್ತದೆ. ಈ ಉತ್ಸಾಹಕ್ಕೆ ಸೇರ್ಪಡೆಯಾದಂತೆ ಫನ್ ವರ್ಲ್ಡ್ ಹೆಮ್ಮೆಯಿಂದ ದೇಶದ ಅತ್ಯಂತ ದೊಡ್ಡ ಕರೌಸಲ್ ಹೊಂದಿದ್ದು 100 ಸೀಟುಗಳ ಸಾಮರ್ಥ್ಯ ಹೊಂದಿದ್ದ ಎಲ್ಲ ವಯೋಮಾನದವರನ್ನೂ ರಂಜಿಸುತ್ತದೆ. ಬೆಂಗಳೂರಿನ ನಗರದ ಕೇಂದ್ರದಲ್ಲಿರುವ ಫನ್ ವರ್ಲ್ಡ್ ನಲ್ಲಿರುವ ಹೊಸ ಮಾನವ ನಿರ್ಮಿತ ಜಲಪಾತವು ಪಾರ್ಕ್ ನ ಸಾಹಸಗಳ ಸಾಲಿಗೆ ಆಕರ್ಷಕ ಸೇರ್ಪಡೆಯಾಗಿದೆ.ಈ ಪ್ರಾರಂಭೋತ್ಸವದಲ್ಲಿ ವಯಸ್ಕರು ಹಾಗೂ ಮಕ್ಕಳಿಗೆ ಎಚ್ಚರಿಕೆಯಿಂದ ರೂಪಿಸಲಾದ 10 ಉತ್ಸಾಹಕರ ಕ್ರೀಡೆಗಳನ್ನು ಪ್ರದರ್ಶಿಸಿದ್ದು ಅವು ಪಾರ್ಕ್ ನ ವಿಸ್ತಾರ ಕೊಡುಗೆಗಳನ್ನು ಮತ್ತಷ್ಟು ಹೆಚ್ಚಿಸುತ್ತವೆ. ಒಟ್ಟು 85ಕ್ಕೂ ಹೆಚ್ಚು ರೈಡ್ ಗಳನ್ನು ಯುವ ಮತ್ತು ಯುವ ಮನಸ್ಸು ಹೊಂದಿದವರಿಗೆ ತಂದಿರುವ ಫನ್ ವರ್ಲ್ಡ್ ಭೇಟಿ ನೀಡಿದ ಎಲ್ಲರಿಗೂ ಸ್ಮರಣೀಯ ಅನುಭವ ನೀಡುತ್ತದೆ. ಫನ್ ವರ್ಲ್ಡ್ ಮ್ಯಾನೇಜರ್ ಶ್ರೀ ಪ್ರದೀಪ್, ''ನಾವು ನಮ್ಮ ಹೊಚ್ಚಹೊಸ ಆಕರ್ಷಣೆಗಳ ರೋಮಾಂಚನ ಮತ್ತು ಅದ್ಭುತವನ್ನು ಅನುಭವಿಸಲು ಸಾರ್ವಜನಿಕರನ್ನು ಆಹ್ವಾನಿಸಲು ಸಂತೋಷಿಸುತ್ತೇವೆ'' ಎಂದರು. ''ಈ ಮಹತ್ತರ ರೈಡ್ ಗಳು ಮತ್ತು ಅನುಭವಗಳ ಪರಿಚಯದಿಂದ ನಾವು ಸ್ಮರಣೀಯ ನೆನಪುಗಳನ್ನು ಸೃಷ್ಟಿಸಲು ಮತ್ತು ಎಲ್ಲ ವಯೋಮಾನದ ಸಂದರ್ಶಕರಿಗೆ ಸರಿಸಾಟಿ ಇರದ ಮನರಂಜನೆ ನೀಡುವ ಗುರಿ ಹೊಂದಿದ್ದೇವೆ'' ಎಂದರು. ಹಿಂದೆಂದೂ ಕಾಣದಂತಹ ಸಾಹಸದಲ್ಲಿ ತೊಡಗಿಕೊಳ್ಳುವ ಅವಕಾಶ ತಪ್ಪಿಸಿಕೊಳ್ಳಬೇಡಿ. ನಾವು ಹೊಚ್ಚಹೊಸ ಕೊಡುಗೆಗಳನ್ನು ಅನಾವರಣಗೊಳಿಸುತ್ತಿರುವ ಫನ್ ವರ್ಲ್ಡ್ ಸೇರಿಕೊಳ್ಳಿರಿ ಮತ್ತು ವಿನೋದ ಮತ್ತು ಉತ್ಸಾಹದ ಸ್ಫೂರ್ತಿಯನ್ನು ಸಂಭ್ರಮಿಸಿ. ಫನ್ ವರ್ಲ್ಡ್, ಟಿ.ವಿ. ಟವರ್ ಎದುರು, ಪ್ಯಾಲೇಸ್ ಗ್ರೌಂಡ್ಸ್, ಜಯಮಹಲ್ ಮುಖ್ಯರಸ್ತೆ, ಜೆ.ಸಿ.ನಗರ, ಬೆಂಗಳೂರು

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
**ಖ್ಯಾತ ಜ್ಯೋತಿಷಿ**
ದೂರವಾಣಿ–9964739507
www.jyotishyavaastu.com

**ಮೇಷ:** ಬಂಧುಗಳಿಂದ ತೊಂದರೆ, ಚಂಚಲ ಮನಸ್ಸು, ಧನವ್ಯಯ, ಆಕಸ್ಮಿಕ ಖರ್ಚು, ಶತ್ರು ಭಯ, ಎಲ್ಲಿ ಹೋದರು ಅಶಾಂತಿ.

**ವೃಷಭ:** ವ್ಯಾಪಾರ ವ್ಯವಹಾರಗಳಲ್ಲಿ ಲಾಭ, ವಾಹನ ರಿಪೇರಿ, ದುಷ್ಟಬುದ್ಧಿ, ತೀರ್ಥಯಾತರ ದರ್ಶನ, ಧನಪ್ರಾಪ್ತಿ.

**ಮಿಥುನ:** ಪಾಪ ಬುದ್ಧಿ, ಅತಿಯಾದ ಕೋಪ, ಸಾಲಭಾದೆ, ಅನಾರೋಗ್ಯ, ವಿದ್ಯಾಭ್ಯಾಸದಲ್ಲಿ ಹಿನ್ನಡೆ.

**ಕಟಕ:** ಕುಟುಂಬ ಸೌಖ್ಯ, ವ್ಯಾಪಾರದಲ್ಲಿ ಮಂದಗತಿ, ದೂರ ಪ್ರಯಾಣ, ಮನಶಾಂತಿ, ಅಧಿಕಾರಿಗಳಿಂದ ಪ್ರಶಂಸೆ.

**ಸಿಂಹ:** ಹೊಸ ಅವಕಾಶಗಳು, ಧಾರ್ಮಿಕ ಕಾರ್ಯಗಳಿಗೆ ಖರ್ಚು, ಮಹಿಳೆಯರಿಗೆ ಶುಭ, ಮನಸ್ತಾಪ.

**ಕನ್ಯಾ:** ಆರ್ಥಿಕ ಪರಿಸ್ಥಿತಿ ಚೇತರಿಕೆ, ಅನಾರೋಗ್ಯ, ಕಾರ್ಯಸಾಧನೆ, ಕೃಷಿಯಲ್ಲಿ ಲಾಭ, ಅನ್ಯ ಜನರಲ್ಲಿ ದ್ವೇಷ.

**ತುಲಾ:** ಅನಿರೀಕ್ಷಿತ ದ್ರವ್ಯಲಾಭ, ಯತ್ನ ಕಾರ್ಯಾನುಕೂಲ, ಋಣ ಭಾದೆ, ವೈಮನಸ್ಸು, ಇತರರ ಮಾತಿಗೆ ಮರುಳಾಗಬೇಡಿ.

**ವೃಶ್ಚಿಕ:** ದೇವತಾ ಕಾರ್ಯ ಮಾಡುವಿರಿ, ಕೆಲಸದಲ್ಲಿ ನಿರಾಶೆಯಾಗುವುದು, ಉದ್ವೇಗಕ್ಕೆ ಒಳಗಾಗುವಿರಿ, ಮನಕ್ಲೇಶ.

**ಧನಸ್ಸು:** ಹಿರಿಯರ ಸಲಹೆ ಸ್ವೀಕರಿಸಿ, ಸಾಲಭಾದೆ, ಖರ್ಚಿನ ಮೇಲೆ ಹಿಡಿತವಿರಲಿ.

**ಮಕರ:** ಗೆಳೆಯರಿಂದ ಸಹಾಯ ಪಡೆಯುವಿರಿ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ವೈಯಕ್ತಿಕ ವಿಚಾರಗಳಲ್ಲಿ ಜಾಗ್ರತೆ.

**ಕುಂಭ:** ಮನಸ್ಸಿನಲ್ಲಿ ಭಯಭೀತಿ, ಯಾರನ್ನು ಹೆಚ್ಚಾಗಿ ನಂಬಬೇಡಿ, ಮನಸ್ತಾಪ, ಅಲಂಕಾರಿಕ ವಸ್ತುಗಳಿಗೆ ಖರ್ಚು.

**ಮೀನ:** ಪರರಿಂದ ಮೋಸ ಎಚ್ಚರ, ಉದ್ಯೋಗದಲ್ಲಿ ಬಡ್ತಿ, ಸತ್ಕಾರ್ಯಸಕ್ತಿ, ಬುದ್ಧಿವಂತಿಕೆಯಿಂದ ಕೆಲಸ ಮಾಡುವಿರಿ.

## ವಿಶ್ವ ಕತ್ತೆ ದಿನ




ಪ್ರತಿ ವರ್ಷ ಮೇ 8 ರಂದು ವಿಶ್ವ ಕತ್ತೆ ದಿನವನ್ನು ಆಚರಿಸಲಾಗುತ್ತದೆ. ಅನೇಕ ವರ್ಷಗಳಿಂದ, ಕತ್ತೆ ಮಾನವರಿಗೆ ಉತ್ತಮ ಸೇವೆ ಸಲ್ಲಿಸುತ್ತಿದೆ. ಪ್ರಪಂಚದಾದ್ಯಂತ, ಈ ಪ್ರಾಣಿ ಹೊರೆ ಮತ್ತು ಪರ್ವತದ ಪ್ರಾಣಿಯಾಗಿ ಕಾರ್ಯನಿರ್ವಹಿಸಿದೆ. ಕಠಿಣ ಹವಾಮಾನ ಮತ್ತು ಕಠಿಣ ಭೂಪ್ರದೇಶಗಳಿರುವ ಪ್ರದೇಶಗಳಲ್ಲಿಯೂ ಸಹ ಇದು ಉಳಿದುಕೊಂಡಿದೆ ಮತ್ತು ಅಭಿವೃದ್ಧಿ ಹೊಂದಿದೆ. ಕತ್ತೆಗಳು ತಮ್ಮ ಸಹಿಷ್ಣುತೆ ಮತ್ತು ನಿರಂತರತೆಗೆ ಹೆಸರುವಾಸಿಯಾಗಿದೆ. ಇದು ಅವರನ್ನು ಗೌರವಾನ್ವಿತ ಮತ್ತು ಪ್ರೀತಿಯ ಪ್ರಾಣಿಗಳನ್ನಾಗಿ ಮಾಡುತ್ತದೆ. ಯಶಸ್ವಿಯಾಗಲು ಅವರ ಸಾಮರ್ಥ್ಯವು ಭಾಗಶಃ ಅವರ ಮೊಂಡುತನದ ಸ್ವಭಾವದಿಂದಾಗಿ. ಮರುಭೂಮಿ ಪ್ರಾಣಿಗಳ ಮೇಲೆ ಕೇಂದ್ರೀಕೃತವಾಗಿರುವ ವಿಜ್ಞಾನಿ ಆರ್ಕ್ ರಾಯಿಖ್ ಅವರು ವಿಶ್ವ ಕತ್ತೆ ದಿನವನ್ನು ರಚಿಸಿದ್ದಾರೆ. ಕಷ್ಟಪಟ್ಟು ದುಡಿಯುವ ಕತ್ತೆ ನಮ್ಮ ಸಮಾಜವನ್ನು ಕಟ್ಟುವ ಪ್ರಯತ್ನಕ್ಕೆ ಮನ್ನಣೆ ನೀಡುತ್ತಿಲ್ಲ ಎಂದು ಅವರು ಅರಿತುಕೊಂಡರು. ಅವರ ಇನ್ಪುಟ್ ಪ್ರಪಂಚದಾದ್ಯಂತದ ಜನರ ಜೀವನದ ಗುಣಮಟ್ಟವನ್ನು ಸುಧಾರಿಸಿದೆ. ಅವರು ಪ್ರಾಣಿಗಳ ಬಗ್ಗೆ ಫೇಸ್ಬುಕ್ ಗುಂಪನ್ನು ರಚಿಸುವ ಮೂಲಕ ಪ್ರಾರಂಭಿಸಿದರು. 2018 ರಲ್ಲಿ, ವಿಶ್ವ ಕತ್ತೆ ದಿನವನ್ನು ಅಧಿಕೃತವಾಗಿ ಸ್ಥಾಪಿಸಲಾಯಿತು ಮತ್ತು ಇದನ್ನು ಪ್ರತಿ ವರ್ಷ ಆಚರಿಸಲಾಗುತ್ತದೆ. ಕತ್ತೆಗಳು ಮತ್ತು ಅವು ಮಾನವ ಜೀವನದ ಮೇಲೆ ಹೇಗೆ ಪರಿಣಾಮ ಬೀರುತ್ತವೆ ಎಂಬುದರ ಕುರಿತು ಮಾಹಿತಿಯನ್ನು ಹರಡುವುದು ಇದರ ಉದ್ದೇಶವಾಗಿದೆ. ಆಧುನಿಕ ಕತ್ತೆ ಎರಡು ಪೂರ್ವಜರನ್ನು ಹೊಂದಿದೆ, ಆಫ್ರಿಕನ್ ಕಾಡು ಕತ್ತೆಯ ಎರಡೂ ಉಪಜಾತಿಗಳು, ಅವುಗಳೆಂದರೆ, ಸೊಮಾಲಿ ಕಾಡು ಕತ್ತೆ ಮತ್ತು ನುಬಿಯನ್ ಕಾಡು ಕತ್ತೆ. ಪ್ರಸ್ತುತ ಪುರಾವೆಗಳು ಕತ್ತೆಗಳು ಶತಮಾನಗಳಿಂದ ಮನುಷ್ಯರಿಗೆ ಕೆಲಸ ಮಾಡುತ್ತಿವೆ ಎಂದು ಸೂಚಿಸುತ್ತದೆ. ಕತ್ತೆಗಳನ್ನು ತಮ್ಮ ವಿವಿಧ ಉಪಯೋಗಗಳಿಗಾಗಿ ಪ್ರಪಂಚದಾದ್ಯಂತ ಸಾಕಲಾಗುತ್ತದೆ. ವಿದ್ಯುತ್ ಅಥವಾ ಉಗಿ ಶಕ್ತಿ ಇರುವ ಮೊದಲು ಕತ್ತೆಗಳು ಶಕ್ತಿಯನ್ನು ಒದಗಿಸುವ ಮೂಲಕ ಸಮಾಜವನ್ನು ನಿರ್ಮಿಸಲು ಸಹಾಯ ಮಾಡುತ್ತವೆ. ಈ ಪ್ರಾಣಿಗಳನ್ನು ತಮ್ಮ ಶಕ್ತಿ ಮತ್ತು ಶ್ರದ್ಧೆಗಾಗಿ ಗೌರವಿಸಲಾಗುತ್ತದೆ ಮತ್ತು ಆಚರಿಸಲಾಗುತ್ತದೆ. ಅವರು ಕೆಲಸದಿಂದ ಹಿಂದೆ ಸರಿಯುವುದಿಲ್ಲ. ಮೈಲುಗಟ್ಟಲೆ ಸರಕನ್ನು ಎಳೆಯುವ ಸಾಮರ್ಥ್ಯ ಹೊಂದಿದ್ದು, ಕತ್ತೆ ಎಳೆಯುವ ಗಾಡಿಗಳ ಕಲ್ಪನೆ ಹುಟ್ಟಿಕೊಂಡಿದೆ. ಅವರು ಇತರ ಪ್ರಾಣಿಗಳಿಗಿಂತ ಹೆಚ್ಚು ಸಮಯ ಮತ್ತು ಕಠಿಣವಾಗಿ ಕೆಲಸ ಮಾಡಬಹುದು. ಅವರ ಓಟದ ವೇಗವು ಗಂಟೆಗೆ 31 ಮೈಲುಗಳವರೆಗೆ ಪಡೆಯಬಹುದು. ಅವರ ಜೀವಿತಾವಧಿ 50 ರಿಂದ 54 ವರ್ಷಗಳವರೆಗೆ ಇರುತ್ತದೆ. ಅವುಗಳನ್ನು ಪ್ರಕೃತಿಯಿಂದ ಅದ್ಭುತ ಕೊಡುಗೆ ಎಂದು ಪರಿಗಣಿಸಲಾಗುತ್ತದೆ.

# ಕೊರೊನಾ ವ್ಯಾಕ್ಸಿನ್ ಹಿಂಪಡೆದ ಅಸ್ಟ್ರಾಜೆನೆಕಾ

ಕೊರೊನಾ ವ್ಯಾಕ್ಸಿನ್ ಮತ್ತು ಕೋವಶೀಲ್ಡ್ ಪಡೆದವರಲ್ಲಿ ಅಡ್ಡಪರಿಣಾಮಗಳು ಕಾಣಿಸಿಕೊಳ್ಳುತ್ತವೆ ಎಂಬ ಮಾತಿಗೆ ಧಂಗಾಗಿರುವ ಜನರಿಗೆ ಇದೀಗ ಕೊರೊನಾ ವ್ಯಾಕ್ಸಿನ್ ಹಿಂಪಡೆದ ಅಸ್ಟ್ರಾಜೆನೆಕಾ ಇನ್ನೂ ಆತಂಕ ತಂದೊಡ್ಡಿದೆ. ತಾನು ಅಭಿವೃದ್ಧಿಪಡಿಸಿದ್ದ ಕೋವಿಶೀಲ್ಡ್ ವ್ಯಾಕ್ಸಿನ್‌ನಿಂದ ಅಪರೂಪದ ಪ್ರಕರಣಗಳಲ್ಲಿ ಅಡ್ಡಪರಿಣಾಮ ಉಂಟು ಮಾಡಲಿದೆ ಎಂದು ಕೋರ್ಟ್‌ಗೆ ದಾಖಲೆ ಸಲ್ಲಿಸಿದ ಬೆನ್ನಲ್ಲೇ, ಈ ನಿರ್ಧಾರಕ್ಕೆ ಬಂದಿದೆ. ಆದರೆ ಆರ್ಥಿಕ ಕಾರಣ ಹಿನ್ನೆಲೆಯಲ್ಲಿ ಜಾಗತಿಕವಾಗಿ ವ್ಯಾಕ್ಸಿನ್‌ಗಳನ್ನು ವಾಪಸ್ ಪಡೆಯುತ್ತಿದ್ದೇವೆ ಎಂದು ಸಂಸ್ಥೆ ಹೇಳಿದೆ ಎಂದು ವರದಿಯಾಗಿದೆ. ಲಸಿಕೆ ಇನ್ಮುಂದೆ ತಯಾರು ಮಾಡುವುದಿಲ್ಲ, ಜೊತೆಗೆ ಎಲ್ಲಿಯೂ ಕೂಡ ಸಪ್ಲೈ ಮಾಡುವುದಿಲ್ಲ ಎಂದು ಕಂಪನಿ ಹೇಳಿದೆ. ಲಸಿಕೆಯನ್ನು ವಾಪಸ್ ಪಡೆದುಕೊಳ್ಳುತ್ತಿರೋದು ಸಂಪೂರ್ಣ ಕಾಕತಾಳೀಯ. ವ್ಯಾಕ್ಸಿನ್ ಪಡೆಯುವುದರಿಂದ ಟಿಟಿಎಸ್ ಬರುತ್ತದೆ ಅನ್ನೋದನ್ನು ಅಲ್ಲಗಳೆದಿದೆ. ಅದಕ್ಕೂ, ವ್ಯಾಕ್ಸಿನ್ ಪಡೆಯುತ್ತಿರೋದಕ್ಕೂ ಯಾವುದೇ ಸಂಬಂಧ ಇಲ್ಲ ಎಂದು ಫಾರ್ಮಾ ಕಂಪನಿ ಹೇಳಿದೆ ಎಂದು ವರದಿಯಾಗಿದೆ.




## ಅಮೆರಿಕದಲ್ಲಿ ಪತ್ತೆಯಾಗಿದೆ ಹೊಸ ಕೊರೊನಾ



ಕೋವಿಡ್ ಮುಗಿದು ಎಲ್ಲವು ಸುಸೂತ್ರವಾಗಿ ನಡೆಯುತ್ತಿರುವಾಗ ಹೊಸದೊಂದು ಆತಂಕ ಮತ್ತೆ ಎದುರಾಗಿದೆ. ಹೌದು ಕೋವಿಡ್ ಕಾಲದಲ್ಲಿ ಕಂಡುಬಂದಿದ್ದ ಒಮಿಕ್ರಾನ್ ರೂಪಾಂತರ ಎಷ್ಟು ಅಪಾಯಕಾರಿಯಾಗಿತ್ತು ಎಂಬುದು ನಮಗೆಲ್ಲಾ ತಿಳಿದಿದೆ. ಈ ತಳಿಯಿಂದಾಗಿ ಹತ್ತಾರು ಹೊಸ ತಳಿಗಳು ಹುಟ್ಟಿಕೊಂಡಿದ್ದು ನಮಗೆ ತಿಳಿದೇ ಇದೆ. ಆದರೆ ಈಗ ಇದೇ ತಳಿಯಿಂದ ಮತ್ತೊಂದು ರೂಪಾಂತರ ಹೊರಬಂದಿದೆ. ಯುನೈಟೆಡ್ ಸ್ಟೇಟ್ಸ್‌ನಲ್ಲಿ ಪತ್ತೆಯಾದ ಈ ಭಿನ್ನ ಗುಂಪನ್ನು ತೀವ್ರ, ತೀವ್ರ ಉಸಿರಾಟದ ಸಿಂಡ್ರೋಮ್ ಕೊರೊನಾವೈರಸ್ 2 ಈಐಖಖಿ ರೂಪಾಂತರ ಏಕ.2 ಎಂದು ಹೆಸರಿಸಲಾಗಿದೆ ಮತ್ತು ಇದು ಎಎ.1.11.1 ರ ಸ್ಪಿನ್ ಆಫ್ ಆಗಿದೆ. ಇದು ಯುಎಸ್‌ನಲ್ಲಿ ವೇಗವಾಗಿ ಹರಡುತ್ತಿದೆ ಎಂದು ವರದಿಗಳು ತಿಳಿಸಿವೆ. ಯುಎಸ್ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ (ಸಿಡಿಸಿ) ಪ್ರಕಾರ, ರೂಪಾಂತರವು ಏಪ್ರಿಲ್ 27, 2024ಕ್ಕೆ ಕೊನೆಗೊಳ್ಳುವ ಎರಡು ವಾರಗಳವರೆಗೆ ಸುಮಾರು 25 ಪ್ರತಿಶತದಷ್ಟು ಹೊಸ ಅನುಕ್ರಮ ಪ್ರಕರಣಗಳನ್ನು ಹೊಂದಿದೆ.

## ಐದು ಮಂದಿಗೆ ವೆಸ್ಟ್ ನೈಲ್ ಜ್ವರ

**ಕೋಯಿಕ್ಕೋಡ್:** ವೆಸ್ಟ್ ನೈಲ್ ಫೀವರ್ ನ ಐದು ಪ್ರಕರಣಗಳು ಕೇರಳದ ಕೋಯಿಕ್ಕೋಡ್ ಜಿಲ್ಲೆಯಲ್ಲಿ ಪತ್ತೆಯಾಗಿದ್ದು, ಇದೀಗ ಆತಂಕಕ್ಕೆ ಕಾರಣವಾಗಿದೆ. ಕೇರಳ ರಾಜ್ಯದ ತ್ರಿಶೂರ್, ಮಲಪ್ಪುರಂ ಮತ್ತು ಕೋಝಿಕ್ಕೋಡ್ ಜಿಲ್ಲೆಗಳಲ್ಲಿ ವೆಸ್ಟ್ ನೈಲ್ ಜ್ವರ ಪ್ರಕರಣಗಳು ವರದಿಯಾಗಿವೆ. ಅವರ ಆರೋಗ್ಯ ಸ್ಥಿತಿ ಸಹಜವಾಗಿದ್ದು, ಮನೆಗಳಲ್ಲೇ ಚಿಕಿತ್ಸೆ ಪಡೆಯುತ್ತಿದ್ದಾರೆ. ರೋಗಿಗಳು ವಾಸವಿರುವ ಮನೆಗಳ ಸುತ್ತ ಬೇರೆ ಯಾರಲ್ಲೂ ಜ್ವರ ಕಂಡುಬಂದಿಲ್ಲ ಎಂದು ಜಿಲ್ಲಾ ಕಣ್ಗಾವಲು ತಂಡದ ಅಧಿಕಾರಿ ಹೇಳಿದ್ದಾರೆ. ಒಬ್ಬ ವ್ಯಕ್ತಿಯಲ್ಲಿ ಮಾತ್ರ ಸೋಂಕು ಕಂಡುಬಂದಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಕ್ಯುಲೆಕ್ಸ್ ಜಾತಿಯ ಸೊಳ್ಳೆಗಳಿಂದ ಹರಡುವ ವೈರಲ್ ಜ್ವರ ಇದಾಗಿದ್ದು, ಸೊಳ್ಳೆಗಳ ಸಂತಾನೋತ್ಪತ್ತಿ ಸ್ಥಳಗಳನ್ನು ನಾಶಪಡಿಸುವ ಮೂಲಕ ಸೊಳ್ಳೆಗಳ ನಿಯಂತ್ರಣಕ್ಕೆ ಕ್ರಮಕೈಗೊಳ್ಳುವಂತೆ ಕೇರಳದ ಆರೋಗ್ಯ ಸಚಿವೆ ವೀಣಾ ಜಾರ್ಜ್ ಆದೇಶಿಸಿದ್ದಾರೆ.



## ಕಾಂಗ್ರೆಸ್ ನಾಯಕಿ ಬಿಜೆಪಿ ಸೇರ್ಪಡೆ..!

**ನವದೆಹಲಿ:** ಹಿರಿಯ ನಾಯಕರಿಂದ ಕಿರುಕುಳದ ಗಂಭೀರ ಆರೋಪ ಮಾಡಿ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದ ಎಐಸಿಸಿ ವಕ್ತಾರೆ, ರಾಜಸ್ಥಾನದ ಕಾಂಗ್ರೆಸ್ ನಾಯಕಿ ರಾಧಿಕಾ ಖೇರಾ ಬಿಜೆಪಿ ಸೇರ್ಪಡೆಯಾಗಿದ್ದಾರೆ. ಬಿಜೆಪಿ ಕೇಂದ್ರ ಕಚೇರಿಯಲ್ಲಿ ಅವರು ಪಕ್ಷದ ಹಿರಿಯ ನಾಯಕರ ಸಮ್ಮುಖದಲ್ಲಿ ಸೇರ್ಪಡೆಯಾದರು.

ಬಿಜೆಪಿ (ಃಎಕ) ಸೇರ್ಪಡೆ ಬಳಿಕ ಮಾತನಾಡಿದ ಅವರು, ರಾಮನ ಭಕ್ತೆ ಎಂಬ ಕಾರಣಕ್ಕೆ, ರಾಮಲಲ್ಲಾನ ದರ್ಶನ ಪಡೆದಿದ್ದಕ್ಕೆ ಕೌಶಲ್ಯ ಮಾತೆಯ ಭೂಮಿಯಲ್ಲಿ ನನ್ನೊಂದಿಗೆ ಅನುಚಿತವಾಗಿ ವರ್ತಿಸಿದ ರೀತಿ ಕರಾಳವಾಗಿದೆ. ಬಿಜೆಪಿ ಸರ್ಕಾರದ ರಕ್ಷಣೆ ಸಿಗದಿದ್ದರೆ ನಾನು ಇಲ್ಲಿಗೆ ಬರಲು ಸಾಧ್ಯವಾಗುತ್ತಿರಲಿಲ್ಲ. ಇಂದಿನ ಕಾಂಗ್ರೆಸ್ ಮಹಾತ್ಮ ಗಾಂಧಿಯವರ ಕಾಂಗ್ರೆಸ್ ಆಗಿ ಉಳಿದಿಲ್ಲ. ಅದು ರಾಮ ವಿರೋಧಿ, ಹಿಂದೂ ವಿರೋಧಿಯಾಗಿದೆ ಎಂದು ಅವರು ಹೇಳಿದರು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಲ್ಲಿಸಿದ ರಾಜೀನಾಮೆ ಪತ್ರದಲ್ಲಿ, ರಾಧಿಕಾ ಖೇರಾ ಅವರು ರಾಮಮಂದಿರಕ್ಕೆ ಭೇಟಿ ಮತ್ತು ರಾಮಲಲ್ಲಾ ಮೂರ್ತಿಯ ದರ್ಶನ ಪಡೆಯುವುದರಿಂದ ಪಕ್ಷದೊಳಗೆ ಟೀಕೆಗಳನ್ನು ಎದುರಿಸಬೇಕಾಯಿತು ಎಂದು ಆರೋಪಿಸಿದ್ದರು. ಇದಕ್ಕೂ ಮುನ್ನ ಖೇರಾ ಅವರ ಬಗೆಗಿನ ಅಗೌರವದ ಬಗ್ಗೆ ಅಸಮಾಧಾನ ವ್ಯಕ್ತಪಡಿಸುವ ವೀಡಿಯೊ ವೈರಲ್ ಆಗಿತ್ತು. ಪಕ್ಷದಲ್ಲಿ ಯಾರೂ ವಿಶೇಷವಾಗಿ ಮಹಿಳಾ ರಾಜಕಾರಣಿಗಳನ್ನು ಗೌರವಿಸುವುದಿಲ್ಲ ಎಂದು ಹೇಳಿದ್ದರು.



### ಲೋಕಸಭಾ ಚುನಾವಣೆ

# ಮತದಾನ ಪ್ರಮಾಣ ಮತ್ತೆ ಕುಸಿತ

**ನವದೆಹಲಿ:** ಮೂರನೇ ಹಂತದ ಮತದಾನ ನಡೆದ 93 ಕ್ಷೇತ್ರಗಳಲ್ಲಿ ಮತದಾನ ಪ್ರಮಾಣ ಕಳೆದ ಸಾರ್ವತ್ರಿಕ ಚುನಾವಣೆಗೆ ಹೋಲಿಸಿದರೆ ಶೇಕಡ 1.5 ರಷ್ಟು ಕಡಿಮೆಯಾಗಿದೆ. 2019ರಲ್ಲಿ ಈ ಕ್ಷೇತ್ರಗಳಲ್ಲಿ ಶೇಕಡ 66ರಷ್ಟು ಮತದಾನವಾಗಿದ್ದರೆ, ಈ ಬಾರಿ 64.5ಕ್ಕೆ ಕುಸಿದಿದೆ. 543 ಕ್ಷೇತ್ರಗಳ ಪೈಕಿ ಅರ್ಧಕ್ಕಿಂತ ಹೆಚ್ಚು ಕಡೆಗಳಲ್ಲಿ ಮತದಾನ ಪೂರ್ಣಗೊಂಡಂತಾಗಿದೆ.

ಮೊದಲ ಎರಡು ಹಂತಗಳಂತೆ ಮೂರನೇ ಹಂತದಲ್ಲಿ ಕೂಡಾ ಮತದಾನ ಪ್ರಮಾಣ ಇಳಿಕೆಯಾಗಿದ್ದು, ಅಂತರ ಮಾತ್ರ ಕಡಿಮೆಯಾಗಿರುವುದು ಸಮಾಧಾನಕರ ಅಂಶ. ಅಸ್ಸಾಂನಲ್ಲಿ ಅತ್ಯಧಿಕ ಅಂದರೆ ಶೇಕಡ 81.7ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ರಾತ್ರಿ 11.45ಕ್ಕೆ ಬಿಡುಗಡೆ ಮಾಡಿದ ಅಂಕಿ ಅಂಶಗಳಿಂದ ತಿಳಿದು ಬಂದಿದೆ. ಉತ್ತರ ಪ್ರದೇಶದ 10 ಕ್ಷೇತ್ರಗಳಲ್ಲಿ ಅತ್ಯಂತ ಕನಿಷ್ಠ ಅಂದರೆ ಶೇಕಡ 57.3ರಷ್ಟು ಮತದಾನವಾಗಿದೆ. ಈ ಕ್ಷೇತ್ರಗಳಲ್ಲಿ ಕಳೆದ ಬಾರಿ ಶೇಕಡ 60ರಷ್ಟು ಮತದಾನವಾಗಿತ್ತು. ಉಳಿದಂತೆ ಬಿಹಾರ (58.2) ಮತ್ತು ಗುಜರಾತ್ (ಶೇಕಡ 59.2) ಕೂಡಾ ಕಡಿಮೆ ಮತದಾನ ದಾಖಲಿಸಿವೆ.

ಬಿಹಾರ ಮತ್ತು ಉತ್ತರ ಪ್ರದೇಶದಲ್ಲಿ ಎಲ್ಲ ಮೂರು ಹಂತಗಳಲ್ಲಿ ಮತದಾನ ಪ್ರಮಾಣ ಇಳಿಕೆಯಾಗಿದೆ ಎಂದು ಚುನಾವಣಾ ವಿಶ್ಲೇಕರು ಹೇಳಿದ್ದಾರೆ. ಮತದಾನ ಹೆಚ್ಚಳಕ್ಕೆ ಚುನಾವಣಾ ಆಯೋಗ ಹಲವು ಪ್ರಯತ್ನಗಳನ್ನು ಮಾಡಿದರೂ ಏರಿಕೆಯಾಗಿಲ್ಲ ಎಂದು ಮೂಲಗಳು ಹೇಳಿವೆ. ಛತ್ತೀಸ್ಗಢ, ಕರ್ನಾಟಕ ಮತ್ತು ಗೋವಾದಲ್ಲಿ ಮತದಾನ ಪ್ರಮಾಣ ಮೂರನೇ ಹಂತದಲ್ಲಿ ಏರಿಕೆಯಾಗಿದೆ.

ಮೂರನೇ ಹಂತದ ಮುಕ್ತಾಯದೊಂದಿಗೆ 20 ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ 283 ಕ್ಷೇತ್ರಗಳಲ್ಲಿ ಮತದಾನ ಪೂರ್ಣಗೊಂಡಿದೆ.



## ಮೂರನೇ ಹಂತದ ಮತದಾನ ಮುಕ್ತಾಯ

ದೇಶದಾದ್ಯಂತ ಮೂರನೇ ಹಂತದ ಮತದಾನ ಮುಕ್ತಾಯವಾಗಿದೆ. ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೂ ಮತದಾನ ನಡೆಯಿತು. ಸಣ್ಣಪುಟ್ಟ ಗಲಾಟೆಗಳನ್ನು ಹೊರತುಪಡಿಸಿದರೆ



ಮತದಾನ ಶಾಂತಿಯುತವಾಗಿ ನಡೆಯಿತು. ದೇಶದಾದ್ಯಂತ ಮಧ್ಯಾಹ್ನ 3 ಗಂಟೆವರೆಗೂ ಶೇ 50ಕ್ಕಿಂತ ಹೆಚ್ಚು ಮತದಾನ ದಾಖಲಾಗಿದೆ ಎಂದು ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ. ಮಧ್ಯಾಹ್ನ 3 ಗಂಟೆಯ ವೇಳೆಗೆ ಮಹಾರಾಷ್ಟ್ರದಲ್ಲಿ ಶೇ 42.63 ರಷ್ಟು ಕಡಿಮೆ ಮತದಾನವಾಗಿದೆ. ಪಶ್ಚಿಮ ಬಂಗಾಳದಲ್ಲಿ ಶೇ 63.11 ರಷ್ಟು ಹೆಚ್ಚು ಮತದಾನವಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಇನ್ನು ಮಧ್ಯಾಹ್ನ 3 ಗಂಟೆ ವೇಳೆಗೆ ಕರ್ನಾಟಕದಲ್ಲಿ ಶೇ.54.20 ರಷ್ಟು ಮತದಾನವಾಗಿತ್ತು. 14 ಕ್ಷೇತ್ರಗಳ ಪೈಕಿ ಚಿಕ್ಕೋಡಿಯಲ್ಲಿ ಅತಿ ಹೆಚ್ಚು ಶೇ.59.65, ಹಾವೇರಿಯಲ್ಲಿ ಶೇ.58.45, ಗುಲ್ಬರ್ಗದಲ್ಲಿ ಅತಿ ಕಡಿಮೆ ಶೇ.47.67ರಷ್ಟು ಮತದಾನವಾಗಿದೆ. ಸಂಜೆ 5 ರವರೆಗೆ ಕರ್ನಾಟಕದಲ್ಲಿ ಶೇ.60.05 ರಷ್ಟು ಮತದಾನವಾಗಿದೆ. ಚಿಕ್ಕೋಡಿಯಲ್ಲಿ ಗರಿಷ್ಠ 72.75% ರಷ್ಟು ಮತದಾನವಾಗಿದೆ ಮತ್ತು ಗುಲ್ಬರ್ಗದಲ್ಲಿ 57.20% ರಷ್ಟು ಕಡಿಮೆ ಮತದಾನವಾಗಿದೆ.

## ಸಿಬ್ಬಂದಿ ಕರೆದೊಯ್ಯುತ್ತಿದ್ದ ಬಸ್‌ಗೆ ಬೆಂಕಿ

ಮಧ್ಯಪ್ರದೇಶದ ಬೇತಲ್ ಜಿಲ್ಲೆಯಲ್ಲಿ ಮತಗಟ್ಟೆ ಅಧಿಕಾರಿಗಳು ಮತ್ತು ವಿದ್ಯುನ್ಮಾನ ಮತಯಂತ್ರಗಳನ್ನು ಹೊತ್ತೊಯ್ಯುತ್ತಿದ್ದ ಬಸ್ಗೆ ಬೆಂಕಿ ಹೊತ್ತಿಕೊಂಡಿದ್ದು, ಹಲವಾರು ಇವಿಎಂಗಳಿಗೆ ಹಾನಿಯಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ಖಚಿತಪಡಿಸಿದ್ದಾರೆ. ಆದರೆ, ಘಟನೆಯಲ್ಲಿ ಯಾವುದೇ ಮತಗಟ್ಟೆ ಸಿಬ್ಬಂದಿ ಹಾಗೂ ಬಸ್ ಚಾಲಕನಿಗೆ ಯಾವುದೇ ಗಾಯಗಳಾಗಿಲ್ಲ. ಮೇ 7ರ ಮಂಗಳವಾರ ರಾತ್ರಿ 11 ಗಂಟೆ ಸುಮಾರಿಗೆ ಜಿಲ್ಲೆಯ ಗೋಲಾ ಗ್ರಾಮದ ಬಳಿ ಈ ಘಟನೆ ನಡೆದಿದೆ ಎಂದು ಬೇತುಲ್ ಕಲೆಕ್ಟರ್ ನರೇಂದ್ರ ಸೂರ್ಯವಂಶಿ ತಿಳಿಸಿದ್ದಾರೆ. ಬೂತ್ ಸಂಖ್ಯೆ 275, 276, 277, 278, 279 ಮತ್ತು 280 ಸೇರಿದಂತೆ ನಾಲ್ಕು ಮತಗಟ್ಟೆಗಳ ಇವಿಎಂಗಳಿಗೆ ಬೆಂಕಿ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಘಟನೆಯ ವೇಳೆ ಆರು ಮತಗಟ್ಟೆಗಳು ಮತ್ತು ಅಷ್ಟೇ ಸಂಖ್ಯೆಯ ಇವಿಎಂಗಳು ಬಸ್ನಲ್ಲಿ ಇದ್ದವು. ಈ ಪೈಕಿ ನಾಲ್ಕು ಇವಿಎಂಗಳು ಹಾನಿಗೊಳಗಾಗಿದ್ದು, ಎರಡು ಸುರಕ್ಷಿತವಾಗಿವೆ. ಬೆಂಕಿಯ ಪರಿಣಾಮ ಇವಿಎಂಗಳಲ್ಲಿ ನಿಯಂತ್ರಣ ಘಟಕ ಅಥವಾ ಬ್ಯಾಲೆಟ್ ಯೂನಿಟ್ ಹಾನಿಯಾಗಿದೆ ಎಂದು ಸೂರ್ಯವಂಶಿ ಹೇಳಿದ್ದಾರೆ.



## ರಷ್ಯಾ ಅಧ್ಯಕ್ಷರಾಗಿ ವಾಡ್ಲಿಮಿರ್ ಪುಟಿನ್ 5ನೇ ಬಾರಿಗೆ ಅಧಿಕಾರ ಸ್ವೀಕಾರ

ರಷ್ಯಾ ಅಧ್ಯಕ್ಷರಾಗಿ ವ್ಲಾಡಿಮಿರ್ ಪುಟಿನ್ ಅವರು ಆರು ವರ್ಷಗಳ ಹೊಸ ಅವಧಿಗೆ ಮಂಗಳವಾರ ಪ್ರಮಾಣ ವಚನ ಸ್ವೀಕರಿಸಿದರು. ಕ್ರೆಮ್ಲಿನ್ನಲ್ಲಿ ನಡೆದ ಉದ್ಘಾಟನಾ ಸಮಾರಂಭದಲ್ಲಿ ಅವರು ದಾಖಲೆಯ ಐದನೇ ಅಧ್ಯಕ್ಷೀಯ ಅವಧಿಗೆ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಸಾಂವಿಧಾನಿಕ ನ್ಯಾಯಾಲಯದ ಅಧ್ಯಕ್ಷ ವ್ಯಾಲೆರಿ ಜೋರ್ಕಿನ್ ಅವರು ಪುಟಿನ್ ಅವರು ರಷ್ಯಾದ ಅಧ್ಯಕ್ಷರಾಗಿ ಮತ್ತೊಂದು ಆರು ವರ್ಷಗಳ ಅವಧಿಗೆ ಔಪಚಾರಿಕವಾಗಿ ಅಧಿಕಾರ



ವಹಿಸಿಕೊಂಡಿದ್ದಾರೆ ಎಂದು ಖಿಂಖಖ ವರದಿ ಮಾಡಿದೆ. ಪುಟಿನ್ ಜನರಿಗೆ ಪ್ರಮಾಣವಚನ ಸ್ವೀಕರಿಸಿದ ನಂತರ, ಜೋರ್ಕಿನ್ ಅವರಿಗೆ ಅಧ್ಯಕ್ಷೀಯ ಚಿಹ್ನೆ ಸೇರಿದಂತೆ ಅಧ್ಯಕ್ಷೀಯ ಅಧಿಕಾರದ ಚಿಹ್ನೆಗಳನ್ನು ನೀಡಿದರು, ಅಂದರೆ ಸೇಂಟ್ ಜಾರ್ಜ್ ಅವರ ಚಿನ್ನದ ಶಿಲುಬೆ, ರಷ್ಯಾದ ಕೋಟ್ ಆಫ್ ಆರ್ಮ್ಸ್ ಮತ್ತು ಚಿನ್ನದ ಸರಪಳಿಯನ್ನು ಸದ್ಗುಣ, ಪ್ರಾಮಾಣಿಕತೆ ಎಂಬ ಪದಗಳೊಂದಿಗೆ ಚಿತ್ರಿಸಲಾದ ಚಿಹ್ನೆಗಳನ್ನು ನೀಡಿದರು. ಪ್ರಮಾಣ ವಚನ ಸ್ವೀಕಾರ ಸಮಾರಂಭದ ನಂತರ ರಾಜ್ಯ ಮುಖ್ಯಸ್ಥರು ಭಾಷಣ ಮಾಡಿದರು. ಈ ಸಮಾರಂಭವು ಪುಟಿನ್ ಅವರ ಐದನೇ ಅಧ್ಯಕ್ಷೀಯ ಅವಧಿಯ ಪ್ರಾರಂಭವನ್ನು ಸೂಚಿಸುತ್ತದೆ. ಇದಲ್ಲದೆ, ಅವರ ಮೊದಲ ಎರಡು ಅವಧಿಗಳು ನಾಲ್ಕು ವರ್ಷಗಳ ಕಾಲ ಅಧಿಕಾರದಲ್ಲಿದ್ದವು. ಆದಾಗ್ಯೂ, ಸಂವಿಧಾನದ ತಿದ್ದುಪಡಿಗಳ ಆಧಾರದ ಮೇಲೆ ಅಧ್ಯಕ್ಷೀಯ ಅವಧಿಯನ್ನು ಆರು ವರ್ಷಗಳವರೆಗೆ ವಿಸ್ತರಿಸಲಾಯಿತು ಎಂದು ಮಾತನಾಡಿದರು.

## ಉತ್ತರಾಧಿಕಾರಿ ಸ್ಥಾನದಿಂದ ಸೋದರಳಿಯ ಆಕಾಶ್ ಆನಂದ್‌ನನ್ನು ತೆಗೆದುಹಾಕಿದ ಮಾಯಾವತಿ

**ಲಖನೌ:** ಲೋಕಸಭೆ ಚುನಾವಣೆಯ ಸಮಯದಲ್ಲೇ ನಡೆದ ಪ್ರಮುಖ ರಾಜಕೀಯ ಬೆಳವಣಿಗೆಯಲ್ಲಿ ಬಹುಜನ ಸಮಾಜ ಪಕ್ಷದ(ಬಿಎಸ್‌ಪಿ) ಮುಖ್ಯಸ್ಥೆ ಮಾಯಾವತಿ ಅವರು ಮಂಗಳವಾರ ತಮ್ಮ ಸೋದರಳಿಯ ಆಕಾಶ್ ಆನಂದ್(28) ಅವರನ್ನು ಪಕ್ಷದ ರಾಷ್ಟ್ರೀಯ ಸಂಯೋಜಕ ಹುದ್ದೆಯಿಂದ ಮತ್ತು ತಮ್ಮ ಉತ್ತರಾಧಿಕಾರಿ ಸ್ಥಾನದಿಂದ ತೆಗೆದುಹಾಕಿದ್ದಾರೆ. ಈ ಕುರಿತು ಮೈಕ್ರೋಬ್ಲಾಗಿಂಗ್ ಸೈಟ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಮಾಯಾವತಿ, ಪಕ್ಷ ಮತ್ತು ಬಹುಜನ ಚಳುವಳಿಯ ಹಿತಾಸಕ್ತಿಯಿಂದ, ಪಕ್ಷದ ರಾಷ್ಟ್ರೀಯ ಸಂಯೋಜಕ ಮತ್ತು ನನ್ನ ಉತ್ತರಾಧಿಕಾರಿಯಾಗಿ ನೇಮಕಗೊಂಡಿದ್ದ ಆಕಾಶ್ ಆನಂದ್ ಅವರನ್ನು ಪೂರ್ಣ ಪ್ರಬುದ್ಧತೆ ಬರುವವರೆಗೆ ಎರಡೂ ನಿರ್ಣಾಯಕ ಜವಾಬ್ದಾರಿಗಳಿಂದ ಮುಕ್ತಗೊಳಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಬಿಜೆಪಿಯನ್ನು ತಾಲಿಬಾನ್‌ಗೆ ಹೋಲಿಸಿದ ಕೆಲವು ದಿನಗಳ ನಂತರ 28 ವರ್ಷದ ಆಕಾಶ್ ಆನಂದ್ ಅವರನ್ನು ಎರಡು ಪ್ರಮುಖ ಹುದ್ದೆಗಳಿಂದ ವಜಾಗೊಳಿಸಲಾಗಿದೆ. ಅಲ್ಲದೆ ಆಕಾಶ್ ಇನ್ನೂ ಅಪ್ರಬುದ್ಧ ಎಂದು ಬಿಎಸ್‌ಪಿ ನಾಯಕಿ ಹೇಳಿದ್ದಾರೆ. ಬಿಎಸ್‌ಪಿ ಕೇವಲ ಒಂದು ಪಕ್ಷವಲ್ಲ, ಬಾಬಾ ಸಾಹೇಬ್ ಡಾ. ಭೀಮರಾವ್ ಅಂಬೇಡ್ಕರ್ ಅವರ ಸ್ವಾಭಿಮಾನ ಮತ್ತು ಸಾಮಾಜಿಕ ಬದಲಾವಣೆಯ ಚಳುವಳಿಯಾಗಿದೆ. ಇದಕ್ಕಾಗಿ ಕಾನ್ಶಿ ರಾಮ್ ಜಿ ಮತ್ತು ನಾನು ನಮ್ಮ ಸಂಪೂರ್ಣ ಜೀವನವನ್ನು ಮುಡಿಪಾಗಿಟ್ಟೆವು. ಹೊಸ ಪೀಳಿಗೆಯು ಇದಕ್ಕೆ ವೇಗವನ್ನು ನೀಡಲು ಸಿದ್ಧವಾಗುತ್ತಿದೆ. ಆ ನಿಟ್ಟಿನಲ್ಲಿ ಪಕ್ಷದಲ್ಲಿ ಇತರರ ಜೊತೆಗೆ, ಆಕಾಶ್ ಆನಂದ್ ಅವರನ್ನು ರಾಷ್ಟ್ರೀಯ ಸಂಯೋಜಕ ಮತ್ತು ನನ್ನ ಉತ್ತರಾಧಿಕಾರಿ ಎಂದು ಘೋಷಿಸಲಾಯಿತು. ಆದರೆ ಅವರು ಪಕ್ಷ ಮತ್ತು ಚಳುವಳಿಯ ಹಿತಾಸಕ್ತಿಯಿಂದ ಅವರು ಪೂರ್ಣ ಪ್ರಬುದ್ಧತೆಯನ್ನು ಪಡೆಯುವವರೆಗೆ ಈ ಎರಡು ಪ್ರಮುಖ ಜವಾಬ್ದಾರಿಗಳನ್ನು ನೀಡಲಾಗುವುದಿಲ್ಲ ಎಂದು ಮಾಯಾವತಿ ಅವರು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಆದರೆ, ಆಕಾಶ್ ತಂದೆ ಆನಂದ್ ಕುಮಾರ್ ಅವರು ಪಕ್ಷದಲ್ಲಿ ತಮ್ಮ ಜವಾಬ್ದಾರಿಯನ್ನು ಮುಂದುವರಿಸಲಿದ್ದಾರೆ. ಪಕ್ಷದ ಹಿತದೃಷ್ಟಿಯಿಂದ ತ್ಯಾಗ, ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರ ಗುರಿಯನ್ನು ಮುನ್ನಡೆಸಲು ಬಿಎಸ್‌ಪಿ ನಾಯಕತ್ವ ಹಿಂದೆ ಸರಿಯುತ್ತಿಲ್ಲ ಎಂದು ಹೇಳಿದ್ದಾರೆ.

## ನಾನು ಇಸ್ಲಾಂ, ಮುಸ್ಲಿಮರ ವಿರೋಧಿಯಲ್ಲ: ಮೋದಿ



**ನವದೆಹಲಿ:** ನಾನು ಎಂದಿಗೂ ಇಸ್ಲಾಂ ಧರ್ಮ ಮತ್ತು ಮುಸ್ಲಿಂರನ್ನು ವಿರೋಧಿಸುವುದಿಲ್ಲ ಹೀಗಾಗಿ ಆ ಸಮುದಾಯದವರು ತಮ್ಮ ಹಕ್ಕು ಚಲಾಯಿಸುವಾಗ ತಮ ಭವಿಷ್ಯದ ಬೆಳವಣಿಗೆಯ ಬಗ್ಗೆ ಯೋಚಿಸಬೇಕೆಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಮಾಧ್ಯಮವೊಂದಕ್ಕೆ ನೀಡಿರುವ ಸಂದರ್ಶನದಲ್ಲಿ ಅವರು, ಭಾರತೀಯ ಜನತಾ ಪಕ್ಷವು ಮುಸ್ಲಿಮರನ್ನು ಗುರಿಯಾಗಿಸಿಕೊಂಡಿದೆ ಎಂದು ವಿರೋಧ ಪಕ್ಷಗಳು ಮಾಡುತ್ತಿರುವ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದಿದ್ದಾರೆ. ಕೆಲ ದಿನಗಳ ಹಿಂದೆ ಮೋದಿ ಅವರು ಮುಸಲಾನರನ್ನು ನುಸುಳುಕೋರರು ಎಂದು ಆರೋಪಿಸಿದ ನಂತರ ಅವರನ್ನು ಮುಸ್ಲಿಂ ವಿರೋಧಿ ಎಂದು ಬಿಂಬಿಸಲಾಗಿತ್ತು. ಹೀಗಾಗಿ ಅವರು ನಾನು ಎಂದಿಗೂ ಮುಸ್ಲಿಂ ವಿರೋಧಿಯಲ್ಲ ಎನ್ನುವುದನ್ನು ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್ಸವರು ನೆಹರೂ ಕಾಲದಿಂದಲೂ ನಮನ್ನು ಮುಸ್ಲಿಂ ವಿರೋಧಿ ಎಂದು ನಿಂದಿಸುತ್ತಿದ್ದಾರೆ. ಹಾಗೂ ತಮನ್ನು ಮುಸ್ಲಿಂ ಸ್ನೇಹಿ ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ ಏಕೆಂದರೆ ಅವರು ವೋಟ್ ಬ್ಯಾಂಕ್ ರಾಜಕಾರಣ ಮಾಡುತ್ತಿದ್ದಾರೆ ಎಂದು ಮೋದಿ ಆರೋಪಿಸಿದರು ಅದಕ್ಕಾಗಿಯೇ ಅವರು ಈ ಭಯದ ವಾತಾವರಣವನ್ನು ಸಷ್ಟಿಸಿದರು.

**ಕಾಂಗ್ರೆಸ್‌ನವರು ನೆಹರೂ ಕಾಲದಿಂದಲೂ ನಮನ್ನು ಮುಸ್ಲಿಂ ವಿರೋಧಿ ಎಂದು ನಿಂದಿಸುತ್ತಿದ್ದಾರೆ**

## ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದ ಪ್ರಜ್ವಲ್ ವಿದೇಶಕ್ಕೆ ಪರಾರಿ

**ನವದೆಹಲಿ:** ಕಾಂಗ್ರೆಸ್ ಸರ್ಕಾರ ನಿರ್ಲಕ್ಷ್ಯದಿಂದಲೇ ಪ್ರಜ್ವಲ್ ವಿದೇಶಕ್ಕೆ ಹೋಗಿದ್ದಾರೆ,ಈ ಘಟನೆಗೆ ರಾಜ್ಯ ಸರ್ಕಾರವೇ ನೇರ ಹೊಣೆ ಎಂದು ಪ್ರಧಾನಿ ಮೋದಿ ವಾಗ್ದಾಳಿ ನಡೆಸಿದರು.

ಪ್ರಜ್ವಲ್ ರೇವಣ್ಣ ವಿಡಿಯೋ ಪ್ರಕರಣ ಸಂಬಂಧ ಪ್ರಧಾನಿ ನರೇಂದ್ರ ಮೋದಿ ಇದೇ ಮೊದಲ ಬಾರಿಗೆ ಮೌನ ಮುರಿದಿದ್ದು ತಪ್ಪಿತಸ್ತರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಹೇಳಿದ್ದಾರೆ. ಖಾಸಗಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣರಂತಹ ವ್ಯಕ್ತಿಗಳ ವಿರುದ್ಧ ನಾವು ಸ್ಪಷ್ಟ ದೃಷ್ಟಿಕೋನವನ್ನು ಹೊಂದಿದ್ದೇವೆ. ಈ ರೀತಿಯ ವ್ಯಕ್ತಿಗಳ ವಿರುದ್ಧ ನಾವು ಶೂನ್ಯ ಸಹಿಷ್ಣುರಾಗಿದ್ದೇವೆ. ಪ್ರಜ್ವಲ್ ದೇಶದಿಂದ ಹೊರಹೋಗಲು ಕರ್ನಾಟಕದ ಕಾಂಗ್ರೆಸ್ ಸರ್ಕಾರವೇ ಅವಕಾಶ ಮಾಡಿಕೊಟ್ಟಿದೆ.ಇದು ಕಾನೂನು ಸುವ್ಯವಸ್ಥೆಗೆ ಸಂಬಂಧಿಸಿದ ವಿಷಯವಾದ ಕಾರಣ ಕ್ರಮ ವಹಿಸುವ ಜವಾಬ್ದಾರಿ ಕೂಡಾ ಆ ಸರ್ಕಾರದ ಮೇಲಿದೆ ಎಂದು ತಿಳಿಸಿದರು. ಸಹಸ್ರಾರು ವಿಡಿಯೋಗಳು ಇದೆ ಎಂದಾದರೆ ಅವು ಜೆಡಿಎಸ್ ಪಕ್ಷ ಕಾಂಗ್ರೆಸ್ ಜೊತೆ ಹೊಂದಾಣಿಕೆ ಮಾಡಿಕೊಂಡಿದ್ದ ಅವಧಿಗೆ ಸೇರಿದೆ ಎನ್ನುವುದು ಗೊತ್ತಾಗುತ್ತಿದೆ. ಅವರು ಅಧಿಕಾರದಲ್ಲಿದ್ದಾಗ ವಿಡಿಯೋಗಳನ್ನ ಸಂಗ್ರಹಿಸಿದ್ದರು, ಒಕ್ಕಲಿಗರು ಮತದಾನ ಹಕ್ಕನ್ನು ಚಲಾಯಿಸಿದ ನಂತರ ಕರ್ನಾಟಕದಲ್ಲಿ ಎರಡನೇ ಹಂತದ ಚುನಾವಣೆ ಸಂದರ್ಭದಲ್ಲಿ ಈ ವಿಡಿಯೋಗಳನ್ನ ಬಿಡುಗಡೆ ಮಾಡಿದ್ದಾರೆ ಅದೂ ಪ್ರಜ್ವಲ್ ಅವರನ್ನು ದೇಶದಿಂದ ಹೊರಗೆ ಕಳುಹಿಸಿದ ಮೇಲೆಯೇ ವಿಡಿಯೋ ರಿಲೀಸ್ ಮಾಡಲಾಗಿದೆ.ಇದೆಲ್ಲಾ ಬೆಳವಣಿಗೆ ನೋಡಿದರೆ ಅನುಮಾನಾಸ್ಪದವಾಗಿದೆ ಎಂದು ಪ್ರಧಾನಿ ಹೇಳಿದ್ದಾರೆ. ರಾಜ್ಯ ಸರ್ಕಾರದ ಬಳಿ ಮಾಹಿತಿ ಇದ್ದಿದ್ದರೆ ಅದರ ಬಗ್ಗೆ ಒಂದು ಕಣ್ಣಿಡಬೇಕಿತ್ತು ವಿಮಾನ ನಿಲ್ದಾಣಗಳಲ್ಲಿ ಹದ್ದಿನ ಕಣ್ಣಿಡಬೇಕಿತ್ತು. ರಾಜ್ಯ ಸರ್ಕಾರ ಏನನ್ನೂ ಮಾಡಲಿಲ್ಲ, ಕೇಂದ್ರ ಸರ್ಕಾರಕ್ಕೂ ಯಾವುದೇ ಮಾಹಿತಿ ನೀಡಲಿಲ್ಲ, ಇದೆಲ್ಲ ರಾಜಕೀಯ ಆಟ ಎಂದು ಮೋದಿ ಟೀಕಾಪ್ರಹಾರ ನಡೆಸಿದರು.

## ಅರವಿಂದ್ ಕೇಜ್ರಿವಾಲ್ ಕಡತಕ್ಕೆ ಸಹಿ ಹಾಕಲು ಸಾಧ್ಯವಿಲ್ಲ

**ನವದೆಹಲಿ:** ಅಬಕಾರಿ ನೀತಿ ಹಗರಣದಲ್ಲಿ ಬಂಧನಕ್ಕೀಡಾಗಿರುವ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಜೈಲಿನಿಂದ ಬಿಡುಗಡೆಯಾದರೂ ಅವರು ಮುಖ್ಯಮಂತ್ರಿಯಾಗಿ ಕಡತಗಳಿಗೆ ಸಹಿ ಹಾಕಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮಂಗಳವಾರ ಹೇಳಿದೆ.

ದೆಹಲಿ ಅಬಕಾರಿ ನೀತಿ ಹಗರಣ ಪ್ರಕರಣದಲ್ಲಿ ಬಂಧನದಲ್ಲಿರುವ ಸಿಎಂ ಅರವಿಂದ್ ಕೇಜ್ರಿವಾಲ್ ಅವರು ಸಲ್ಲಿಸಿರುವ ಮಧ್ಯಂತರ ಜಾಮೀನು ಅರ್ಜಿ ವಿಚಾರಣೆಯನ್ನು ಇಂದು ನಡೆಸಿದ ಸುಪ್ರೀಂ ಕೋರ್ಟ್ ನ ನ್ಯಾಯಮೂರ್ತಿಗಳಾದ ನ್ಯಾ ಸಂಜೀವ್ ಖನ್ನಾ ಮತ್ತು ನ್ಯಾ ದಿಪಾಂಕರ್ ದತ್ತಾ ಅವರನ್ನು ಒಳಗೊಂಡ ದ್ವಿ ಸದಸ್ಯ ನ್ಯಾಯಪೀಠ, ಅರವಿಂದ್ ಕೇಜ್ರಿವಾಲ್ ಅವರನ್ನು ಮಧ್ಯಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಿದರೂ ಅವರು ತಮ್ಮ ಅಧಿಕೃತ ಕರ್ತವ್ಯಗಳನ್ನು ನಿರ್ವಹಿಸುವುದು ಸಾಧ್ಯವಿಲ್ಲ. ಏಕೆಂದರೆ ಅದು ವ್ಯವಸ್ಥೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಅರವಿಂದ್ ಕೇಜ್ರಿವಾಲ್ ಅವರು 'ರೂಢಿಗತ ಅಪರಾಧಿ' ಅಲ್ಲ ಎಂದು ಹೇಳಿದ ಪೀಠ, ಇದು ಒಂದು ಅಸಾಧಾರಣ ಸನ್ನಿವೇಶ. ಅವರು ರೂಢಿಗತ ಅಪರಾಧಿ ಅಲ್ಲ. ಚುನಾವಣೆ ಐದು ವರ್ಷಕ್ಕೆ ಒಮ್ಮೆ ಬರುತ್ತದೆ. ಪ್ರತಿ ನಾಲ್ಕರಿಂದ ಆರು ತಿಂಗಳಿಗೆ ಬೆಳೆ ಕಟಾವು ಮಾಡುವ ರೀತಿ ಅಲ್ಲ ಇದು. ಅವರನ್ನು ಮಧ್ಯಂತರ ಜಾಮೀನಿನ ಅಡಿ ಬಿಡುಗಡೆ ಮಾಡಬಹುದೇ ಎಂಬುದನ್ನು ನಾವು ಆದ್ಯತೆ ಮೇರೆಗೆ ಪರಿಗಣಿಸಬೇಕಿದೆ ಎಂದು ಹೇಳಿತು.

ಲೋಕಸಭೆ ಚುನಾವಣೆ ಇಲ್ಲದೆ ಹೋಗಿದ್ದರೆ ಮಧ್ಯಂತರ ಜಾಮೀನಿನ ಪ್ರಶ್ನೆಯೇ ಉದ್ಭವಿಸುತ್ತಿರಲಿಲ್ಲ ಎಂದು ಹೇಳಿದ ನ್ಯಾ ದತ್ತಾ ಅವರು, ಇದು ಒಡೆತನ, ಸಾರ್ವಜನಿಕ ಹಿತಾಸಕ್ತಿಯ ಪ್ರಶ್ನೆ ಎಂಬ ನ್ಯಾ ಖನ್ನಾ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದರು. ಆದರೆ ಅಬಕಾರಿ ನೀತಿ ಹಗರಣದಲ್ಲಿ ಸಿಎಂ ಪಾತ್ರ ಮುಖ್ಯವಾಗಿದೆ ಎಂಬ ಇಡಿ ಆರೋಪವನ್ನು ಗಮನಿಸಿದ ನ್ಯಾಯಪೀಠ, ಒಂದು ವೇಳೆ ನಾವು ನಿಮ್ಮನ್ನು ಬಿಡುಗಡೆ ಮಾಡಿದರೆ ನೀವು ಚುನಾವಣೆಯಲ್ಲಿ ಭಾಗವಹಿಸಲು ಅನುಮತಿ ಪಡೆಯುತ್ತೀರಿ. ನೀವು ಅಧಿಕೃತ ಕರ್ತವ್ಯಗಳನ್ನೂ ನಿಭಾಯಿಸುತ್ತೀರಿ. ಇದು ನಕಾರಾತ್ಮಕ ಪರಿಣಾಮ ಉಂಟುಮಾಡಬಹುದು. ನಾವು ಸ್ಪಷ್ಟವಾಗಿ ಹೇಳುತ್ತೇವೆ. ನಾವು ನಿಮ್ಮನ್ನು ಬಿಡುಗಡೆ ಮಾಡಿದರೆ ನೀವು ಅಧಿಕೃತ ಕರ್ತವ್ಯ ನಿಭಾಯಿಸುವುದನ್ನು ನಾವು ಬಯಸುವುದಿಲ್ಲ ಎಂದು ಕೋರ್ಟ್ ಪುನರುಚ್ಚರಿಸಿತು.

ಆದರೆ, ಕೋರ್ಟ್ ಸಲಹೆಯನ್ನು ತಿರಸ್ಕರಿಸಿದ ಜಾರಿ ನಿರ್ದೇಶನಾಲಯ, ಇದು ತಪ್ಪು ಉದಾಹರಣೆ ಸೃಷ್ಟಿಸಲಿದೆ ಎಂದು ವಾದಿಸಿತು. ಈ ಕುರಿತು ತಮ್ಮ ವಾದ ಮಂಡಿಸಿದ ಜಾರಿ ನಿರ್ದೇಶನಾಲಯದ ಪರ ವಕೀಲರು, 'ಸಾಮಾನ್ಯ ನಾಗರಿಕರಿಗೆ ಹೋಲಿಸಿದರೆ ರಾಜಕಾರಣಿಗೆ ವಿಶೇಷ ಹಕ್ಕುಗಳು ಇರುವುದಿಲ್ಲ. ವಿಚಾರಣೆ ಎದುರಿಸುತ್ತಿರುವ ಎಲ್ಲ ಸಂಸದರು ಮತ್ತು ಶಾಸಕರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಬೇಕೇ? ಎಂದು ಪ್ರಶ್ನಿಸಿದರು.

''ಸಾಮಾನ್ಯ ವ್ಯಕ್ತಿಗೆ ಹೋಲಿಸಿದರೆ ರಾಜಕೀಯ ವ್ಯಕ್ತಿಗೆ ವಿಶೇಷ ಸವಲತ್ತು ನೀಡಬಹುದೇ? 5000 ಮಂದಿ ವಿಚಾರಣೆ ಎದುರಿಸುತ್ತಿದ್ದಾರೆ. ಅವರೆಲ್ಲರೂ ನಾವು ಪ್ರಚಾರಕ್ಕೆ ಹೋಗಬೇಕು ಎಂದರೆ ಏನಾಗಲಿದೆ? ಆರು ತಿಂಗಳಲ್ಲಿ 9 ಸಮನ್ಸ್‌ಗಳನ್ನು ನೀಡಲಾಗಿದೆ. ಇದೇ ಸಮಯವನ್ನು ಆಯ್ಕೆ ಮಾಡಿರುವುದಕ್ಕೆ ಜಾರಿ ನಿರ್ದೇಶನಾಲಯವನ್ನು ದೂಷಿಸಲು ಸಾಧ್ಯವಿಲ್ಲ. ಅವರಿಗೆ ಇನ್ನೂ ಯಾವುದೇ ಪುರಾವೆಗಳು ಸಿಕ್ಕಿಲ್ಲ. ಹೀಗಾಗಿ ಈ ಹಂತದಲ್ಲಿ ಮಧ್ಯಂತರ ಜಾಮೀನು ಮಂಜೂರು ಮಾಡಬಹುದೇ? ಎಂದು ಹೇಳಿದರು.

ಈ ವೇಳೆ ಇಡಿ ಪ್ರಸ್ತಾಪಿಸಿದ ವಿಚಾರಗಳಿಗೆ ಪ್ರತಿಕ್ರಿಯೆ ನೀಡುವಂತೆ ಕೇಜ್ರಿವಾಲ್ ಪರ ಹಾಜರಾದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಅವರಿಗೆ ಕೋರ್ಟ್ ಸೂಚಿಸಿತು. ಇದೇ ವೇಳೆ ವಾದ-ಪ್ರತಿವಾದಗಳನ್ನು ಆಲಿಸಿದ ಸುಪ್ರೀಂ ಕೋರ್ಟ್ ಕೇಜ್ರಿವಾಲ್ ಅವರ ಮಧ್ಯಂತರ ಜಾಮೀನು ಅರ್ಜಿಯ ಆದೇಶವನ್ನು ಕಾಯ್ದಿರಿಸಿದ್ದು, ಗುರುವಾರ ಅಥವಾ ಮುಂದಿನ ವಾರ ಮತ್ತೆ ವಿಚಾರಣೆ ನಡೆಸುವುದಾಗಿ ಪೀಠ ಹೇಳಿದೆ.

### ಹೈದರಾಬಾದ್ ನಲ್ಲಿ ಗೋಡೆ ಕುಸಿದು

# ಏಳು ಮಂದಿ ದುರ್ಮರಣ

**ಹೈದರಾಬಾದ್:** ನಗರದ ಬಾಚುಪಲ್ಲಿಯ ರೇಣುಕಾ ಎಲ್ಲಮ್ಮ ಕಾಲೋನಿಯಲ್ಲಿ ಗೋಡೆ ಕುಸಿದು ಏಳು ಮಂದಿ ಸಾವನ್ನಪ್ಪಿದ್ದಾರೆ.

ನಿನ್ನೆ ಸಂಜೆ ಸುರಿದ ಭಾರೀ ಮಳೆಗೆ ಬಾಚುಪಲ್ಲಿಯ ರೇಣುಕಾ ಎಲ್ಲಮ್ಮ ಕಾಲೋನಿಯಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡದ ತಡೆಗೋಡೆ ಕುಸಿದಿದೆ. ಸ್ಥಳೀಯರಿಂದ ಮಾಹಿತಿ ಪಡೆದ ಪೊಲೀಸರು ಹಾಗೂ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿದ್ದಾರೆ.

ಘಟನೆ ನಡೆದ ಪ್ರದೇಶದಲ್ಲಿ ನಿನ್ನೆ(ಮಂಗಳವಾರ) ಸಂಜೆಯಿಂದ ಇಂದು ಬೆಳಗಿನ ಜಾವದವರೆಗೆ ರಕ್ಷಣಾ ಕಾರ್ಯಾಚರಣೆ ನಡೆಸಲಾಗಿದೆ. ಕುಸಿದ ಗೋಡೆಯ ಅವಶೇಷಗಳಡಿಯಿಂದ ಒಟ್ಟು ಏಳು ಮೃತ ದೇಹಗಳು ಪತ್ತೆಯಾಗಿವೆ. ನಂತರ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಗಾಂಧಿ ಆಸ್ಪತ್ರೆಗೆ ಕೊಂಡೊಯ್ಯಲಾಯಿತು. ಮೃತರೆಲ್ಲರೂ ಛತ್ತೀಸ್ಗಢ ಮತ್ತು ಒಡಿಶಾ ರಾಜ್ಯಗಳಿಗೆ ಸೇರಿದವರು.

ಮೃತರನ್ನು ತಿರುಪತಿ(20), ಶಂಕರ್(22), ರಾಜು(25), ಖುಷಿ(23), ರಾಮ್ ಯಾದವ್ (34), ಗೀತಾ(32) ಮತ್ತು ಹಿಮಾಂಶು(4) ಎಂದು ಗುರುತಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಮಂತಾ ಬೆತ್ತಲೆ ಫೋಟೋ

## ಪರೋಕ್ಷವಾಗಿ ಪ್ರತಿಕ್ರಿಯೆ ನೀಡಿದ ನಟಿ



ಒಂದಿಲ್ಲೊಂದು ಕಾರಣಕ್ಕಾಗಿ ಸಮಂತಾ ಸದಾ ಸುದ್ದಿಯಲ್ಲಿರುತ್ತಾರೆ. ತಾವು ಮಾಡಿದತಪ್ಪಿಗೆ ಸುದ್ದಿ ಆಗೋದು ಸಹಜ. ಮಾಡದೇ ಇರೋತಪ್ಪಿಗೂ ಬಲಿಯಾಗುತ್ತಾರೆ. ಅಂಥದ್ದೇಒಂದು ಬಲಿಪಶು ಸ್ಟೋರಿ ಬೆತ್ತಲೇ ಫೋಟೋದ್ದು. ಸಮಂತಾ ತಮ್ಮ ಸೋಷಿಯಲ್ ಮೀಡಿಯಾಖಾತೆಯಲ್ಲಿ ಬೆತ್ತಲೆ ಫೋಟೋ ಹಾಕಿದ್ದಾರೆ ಎನ್ನುವ ವಿಚಾರ ನಿನ್ನೆಯಿಂದ ಭರ್ಜರಿ ಸೇಲ್ಆಗಿತ್ತು.

ಡಿವೋರ್ಸ್ ನಂತರ ಸಮಂತಾಯಾಕೆ ಹೀಗೆ ಆದರು ಎನ್ನುವ ಪ್ರಶ್ನೆಯನ್ನೂ ಹಲವರು ಮಾಡಿದ್ದರು. ಬೆತ್ತಲೇ ಫೋಟೋ ಹಾಕಿ, ಯಾಕೆಡಿಲಿಟ್ ಮಾಡಿದರು ಎನ್ನುವ ಕುತೂಹಲ ಕೂಡ ಹಲವರದ್ದಾಗಿತ್ತು.ಅದುಅವರೇ ಮಾಡಿದ್ದಾರಾ? ಅಥವಾ ಬೇರೆಯಾರಾದರೂ ಸುಳ್ಳು ಸುದ್ದಿ ಹಬ್ಬಿಸಿದ್ದಾರೆ ಎನ್ನುವಚರ್ಚೆಕೂಡ ಮಾಡಲಾಯಿತು.

ಈಗ ಸಮಂತಾ ಈ ಕುರಿತಂತೆ ಪರೋಕ್ಷವಾಗಿ ಪ್ರತಿಕ್ರಿಯೆ ನೀಡಿದ್ದಾರೆ. ನಮ್ಮದಲ್ಲದ ತಪ್ಪಿಗೆ ಅಥವಾ ಪ್ರತಿಕ್ರಿಯೆ ನೀಡಲುಯೋಗ್ಯವಲ್ಲದಕ್ಕೆ ಪ್ರತಿಕ್ರಿಯೆ ನೀಡಬಾರದುಎಂದು ಬರೆದು ಕೊಂಡಿದ್ದಾರೆ. ಅಂದರೆ, ಅದುತಮ್ಮಿಂದ ಆಗಿರುವ ತಪ್ಪಲ್ಲ. ಹಾಗಾಗಿ ಪ್ರತಿಕ್ರಿಯೆಅನಗತ್ಯಎಂದಿದ್ದಾರೆ.



# ಮದುವೆ ಆಗಲ್ಲ, ಆದರೆ ರಾಜಕೀಯಕ್ಕೆ ಬರುವ ಪ್ಲ್ಯಾನ್ ಇದೆ

ಅಕ್ರಮವಾಗಿ ಮಗು ದತ್ತು ಪಡೆದ ಪ್ರಕರಣದಲ್ಲಿ ಜೈಲು ಸೇರಿದ್ದ 'ಬಿಗ್ ಬಾಸ್' ಖ್ಯಾತಿಯ ಸೋನು ಶ್ರೀನಿವಾಸ್‌ಗೌಡತಮ್ಮ ಮದುವೆ ಬಗ್ಗೆ ಮೌನ ಮುರಿದಿದ್ದಾರೆ. ತಮ್ಮಯೂಟ್ಯೂಬ್‌ಚಾನೆಲ್‌ನಲ್ಲಿ ಮದುವೆ ಮತ್ತುರಾಜಕೀಯಕ್ಕೆಎಂಟ್ರಿಕೊಡುವ ಬಗ್ಗೆ ನಟಿ ಮಾತನಾಡಿದ್ದಾರೆ.

ಸದಾ ಸೋಷಿಯಲ್ ಮೀಡಿಯಾದಲ್ಲಿ ಆಕ್ಟೀವ್‌ಇರುವ ನಟಿ ಇದೀಗ ಅಭಿಮಾನಿಗಳ ಜೊತೆ ಪ್ರಶ್ನಾವಳಿ ಮಾಡಿದ್ದಾರೆ. ಅವರು ಕೇಳುವ ಪ್ರಶ್ನೆಗಳಿಗೆ ಉತ್ತರಿಸಿದ್ದಾರೆ. ಅಭಿಮಾನಿಯೊಬ್ಬರು ನೀವು ಯಾವಾಗ ಮದುವೆಯಾಗುತ್ತೀರಾ? ಎಂದು ಸೋನುಗೆ ಪ್ರಶ್ನೆ ಕೇಳಿದ್ದಾರೆ. ಅದಕ್ಕೆ ತಮ್ಮ ಯೂಟ್ಯೂಬ್‌ಚಾನಲ್‌ನಲ್ಲಿ ಹಲವು ಪ್ರಶ್ನೆಗಳಿಗೆ ನಟಿ ಉತ್ತರಿಸಿದ್ದಾರೆ.ನಾನು ಮದುವೆ ಬಗ್ಗೆ ಪ್ಲ್ಯಾನ್‌ಇಲ್ಲ. ನಾನು ಮದುವೆ ಆಗಬಾರದು ಎಂದು ಕೊಂಡಿದ್ದೇನೆ ಎಂದಿದ್ದಾರೆ.

ಚಿತ್ರರಂಗದಲ್ಲಿ ನಟಿಯಾಗಿ ಗುರುತಿಸಿಕೊಳ್ಳಬೇಕು ಎಂದು ಆಸಕ್ತಿ ಇತ್ತು. ಈಗ ಇಲ್ಲ, ಆದರೆ ರಾಜಕೀಯಕ್ಕೆ ಹೋಗಬೇಕು. ಅಲ್ಲಿ ಕಾಣಿಸಿಕೊಳ್ಳಬೇಕು ಎಂದು ಪ್ಲ್ಯಾನ್‌ಇದೆ. ಮುಂದಿನ ದಿನಗಳಲ್ಲಿ ನೋಡೋಣಎಂದುಸೋನು ಮಾತನಾಡಿದ್ದಾರೆ.

'ಕ್ಯಾಡ್ಬರಿಸ್' ಎಂಬ ಸಿನಿಮಾದಲ್ಲಿ ಸೋನು ಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ. ಸ್ಪೆಷಲ್ ಹಾಡಿಗೆ ಹೆಜ್ಜೆಕೂಡ ಹಾಕಲಿದ್ದಾರೆ. ಸದ್ಯದಲ್ಲೇ ಸಿನಿಮಾ ಬಗ್ಗೆ ಹೆಚ್ಚಿನ ಮಾಹಿತಿ ಸಿಗಲಿದೆ.

# ಒಟಿಟಿಗೆ ಬರಲಿದೆ ಪೃಥ್ವಿರಾಜ್ ಸುಕುಮಾರನ್ ನಟನೆಯ ಆಡುಜೀವಿತಂ ಸಿನಿಮಾ





ಪೃಥ್ವಿರಾಜ್ ಸುಕುಮಾರನ್ ಮತ್ತು ಅಮಲಾ ಪೌಲ್ ನಟನೆಯ 'ಆಡುಜೀವಿತಂ' ಸಿನಿಮಾ ಪ್ರೇಕ್ಷಕರಿಗೆ ಸಿಹಿಸುದ್ದಿ ಸಿಕ್ಕಿದೆ.ಒಟಿಟಿಗೆ ಬರಲು ಮುಹೂರ್ತ ಫಿಕ್ಸ್ಆಗಿದೆ.ಮಲಯಾಳಂನಲ್ಲಿ 100 ಕೋಟಿರೂ.ಗಿಂತಅಧಿಕ ಗಳಿಕೆ ಮಾಡಿದಚಿತ್ರಇದಾಗಿದ್ದು, ಈಗ ಒಟಿಟಿ ಸ್ಟ್ರೀಮಿಂಗ್ ಆಗಲಿದೆ.

ಚಿತ್ರಮಂದಿರಲ್ಲಿ 'ಆಡುಜೀವಿತಂ' ಸಿನಿಮಾಗೆದ್ದು ಬೀಗಿದೆ.ಪೃಥ್ವಿರಾಜ್ ಮನೋಜ್ಞ ನಟನೆಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.ಒಟಿಟಿಗೆ ಸಿನಿಮಾ ಬರಲಿ ಎಂದುಕಾಯುತ್ತಿದ್ದವರಿಗೆ ಈಗ ಖುಷಿ ಸುದ್ದಿ ಸಿಕ್ಕಿದೆ.ಮೇ 28ಕ್ಕೆ ಒಟಿಟಿ ಡಿಸ್ನಿ ಪ್ಲಸ್ ಹಾಟ್ ಸ್ಟಾರ್‌ನಲ್ಲಿ ಸಿನಿಮಾ ಪ್ರಸಾರವಾಗಲಿದೆ.

ಈ ಸಿನಿಮಾ ಮಲಯಾಳಂ ಜೊತೆಕನ್ನಡ, ತೆಲುಗು, ತಮಿಳು ಮತ್ತು ಹಿಂದಿ ಭಾಷೆಗಳಲ್ಲಿ ಏಕಕಾಲಕ್ಕೆ ಪ್ರಸಾರಆಗಲಿದೆ.ಸದ್ಯದಲ್ಲೇಚಿತ್ರತಂಡದಿಂದ ಈ ಬಗ್ಗೆ ಅಧಿಕೃತ ಮಾಹಿತಿ ಹೊರಬೀಳಲಿದೆ.

ರಾಷ್ಟ್ರಪ್ರಶಸ್ತಿ ವಿಜೇತ ನಿರ್ದೇಶಕ ಬ್ಲೆಸ್ಸಿ ನಿರ್ದೇಶನದಆಡುಜೀವಿತಂಚಿತ್ರವು ನೈಜಕಥೆಯಾಗಿದೆ. ತನ್ನ ಹೊಟ್ಟೆ ಪಾಡಿಗಾಗಿ ಕೆಲಸ ಅರಸಿ ಸೌದಿ ಅರೇಬಿಯಾಗೆ ವಲಸೆ ಹೋಗುವ ನಸೀಬ್ ಮೊಹಮ್ಮದ್ ಎನ್ನುವ ಕೇರಳದ ವ್ಯಕ್ತಿಅಲ್ಲಿಅನುಭವಿಸುವ ಕಷ್ಟ, ಎದುರಿಸುವ ಸಮಸ್ಯೆ ಹೈಲೆಟ್. ಇನ್ನುಆತನ ಪಾಸ್‌ಪೋರ್ಟ್ ಕಸಿದು ಆತನಿಗೆಕೊಡುವ ಹಿಂಸೆಗಳು ಆ ಬಿಸಿಲಿನ ಮರುಭೂಮಿಯಲ್ಲಿಆತ ಪಡುವಯಾತನೆಕುರಿತು ಸಾಗುವ ಕಥೆ ಇಲ್ಲಿದೆ. ನಿರ್ದೇಶಕ ಬ್ಲೆಸ್ಸಿ ಅವರ ಹದಿನೈದು ವರ್ಷದ ಕನಸಿನ ಕಥೆಇದು.ಅವರಕಲ್ಪನೆಯ ಪಾತ್ರದಲ್ಲಿ ವಲಸಿಗ ವ್ಯಕ್ತಿಯಾಗಿ ಹೊಸ ಲುಕ್ ಮೂಲಕ ಕಾಣಿಸಿಕೊಂಡಿರುವ ಪೃಥ್ವಿರಾಜ್ ಸುಕುಮಾರನ್, ಹಲವಾರು ವರ್ಷಗಳಿಂದ ಈ ಚಿತ್ರಕ್ಕಾಗಿದುಡಿದಿದ್ದಾರೆ.ಬ್ಲೆಸ್ಸಿ ನಿರ್ದೇಶನದ 'ಆಡುಜೀವಿತಂ' 2008ರಲ್ಲಿ ಬೆನ್ಯಾಮಿನ್ ಬರೆದಅದೇ ಹೆಸರಿನ ಮಲಯಾಳಂ ಕಾದಂಬರಿ ಸಿನಿಮಾಇದು.ನಜೀಬ್ ಎಂಬ ವಲಸಿಗ ಕಾರ್ಮಿಕನಕಥೆಯನ್ನು ಮತ್ತು ಸೌದಿ ಅರೇಬಿಯಾದ ಮರುಭೂಮಿಯಲ್ಲಿ ಅವನು ಅನುಭವಿಸುವ ದುಃಸ್ಥಿತಿ ಮತ್ತುಅಸಹಾಯಕತೆಯಕಥೆಚಿತ್ರದ ಸಾರಾಂಶ. ಪೃಥ್ವಿರಾಜ್ ನಜೀಬ್ ಪಾತ್ರ ನಿರ್ವಹಿಸಿದ್ದಾರೆ.ಈ ಪಾತ್ರಕ್ಕಾಗಿ ಸಾಕಷ್ಟುದೇಹವನ್ನು ದಂಡಿಸಿದ್ದಾರೆ.ಅವರು ಈ ಚಿತ್ರಕ್ಕಾಗಿ ಸುಮಾರು 30 ಕೆಜಿತೂಕ ಇಳಿಸಿಕೊಂಡಿದ್ದಾರೆ.

# ರಾಜಸ್ಥಾನ್ ರಾಯಲ್ ವಿರುದ್ಧ ಗೆದ್ದು ಬೀಗಿದ ಡೆಲ್ಲಿ ಕ್ಯಾಪಿಟಲ್ಸ್



ಕ್ರೀಡೆ

ಇಲ್ಲಿನ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ರಾಜಸ್ಥಾನ ರಾಯಲ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಐಪಿಎಲ್ ಪಂದ್ಯದಲ್ಲಿ ಡೆಲ್ಲಿ ತಂಡ 20 ರನ್‌ಗಳ ಭರ್ಜರಿ ಜಯಗಳಿಸಿದೆ.

ಪಂದ್ಯದಲ್ಲಿ ಟಾಸ್ ಗೆದ್ದ ರಾಜಸ್ಥಾನ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 221 ರನ್ ಪೇರಿಸಿತು. ಈ ಗುರಿಯನ್ನು ಬೆನ್ನಟ್ಟಿದ ರಾಜಸ್ಥಾನ ತಂಡ 20 ಓವರ್ ಗಳಲ್ಲಿ 8 ವಿಕೆಟ್ ನಷ್ಟಕ್ಕೆ 201 ರನ್‌ಗಳನ್ನು ಮಾತ್ರ ಕಲೆಹಾಕಲು ಶಕ್ತವಾಯಿತು.

ಗುರಿ ಬೆನ್ನಟ್ಟಿದ ರಾಜಸ್ಥಾನ ಮೊದಲನೇ ಓವರ್ ನ 4ನೇ ಎಸೆತದಲ್ಲಿ ಒಂದು ವಿಕೆಟ್ ಕಳೆದುಕೊಂಡು ಆರಂಭಿಕ ಆಘಾತ ಎದುರಿಸಿತು. ತಂಡದ ಪರ ನಾಯಕ ಸಂಜು ಸ್ಯಾಮ್ಸನ್ 46 ಎಸೆತಗಳಲ್ಲಿ 6 ಸಿಕ್ಸರ್, 8 ಬೌಂಡರಿ ಚಚ್ಚಿ 86 ರನ್ ದಾಖಲಿಸಿ ಔಟಾದರು. ರಿಯಾನ್ ಪರಾಗ್ 22 ಎಸೆತಗಳಲ್ಲಿ 22 ರನ್ ಕಲೆ ಹಾಕಿ ಪೆವಿಲಿಯನ್‌ಗೆ ಮರಳಿದರು. ಶುಭಂ ದುಬೆ 12 ಎಸೆತಗಳಲ್ಲಿ 25 ರನ್ ಗಳಿಸಿ ವಿಕೆಟ್ ಒಪ್ಪಿಸಿದರು.

ಡೆಲ್ಲಿ ಪರ ಖಲೀಲ್ ಅಹ್ಮದ್, ಕುಲ್ದೀಪ್ ಯಾದವ್ ಮುಖೇಶ್ ಕುಮಾರ್ ತಲಾ 2, ಅಕ್ಷರ್ ಪಟೇಲ್, ರಾಸಿಖ್ ಸಲಾಂ ತಲಾ ಒಂದೊಂದು ವಿಕೆಟ್ ಪಡೆದರು.

ಡೆಲ್ಲಿ ಪರ ಅಭಿಷೇಕ್ ಪೊರೆಲ್ 36 ಎಸೆತಗಳಲ್ಲಿ 3 ಸಿಕ್ಸರ್, 7 ಬೌಂಡರಿ ಸಿಡಿಸಿ 65 ರನ್ ಗಳಿಸಿ ಗಮನ ಸೆಳೆದರು. ಜೇಕ್ ಫ್ರೇಸರ್ 20 ಎಸೆತಗಳಲ್ಲಿ 3 ಸಿಕ್ಸರ್, 7 ಬೌಂಡರಿ ನೆರವಿನಿಂದ 50 ರನ್ ಕಲೆ ಹಾಕಿದರು. ಟ್ರಿಸ್ಟಾನ್ ಸ್ಟಬ್ಸ್ 20 ಎಸೆತಗಳಲ್ಲಿ ತಲಾ 3 ಸಿಕ್ಸರ್ ಹಾಗೂ ಬೌಂಡರಿ ನೆರವಿನಿಂದ ತಂಡಕ್ಕೆ 41 ರನ್‌ಗಳ ಕೊಡುಗೆ ನೀಡಿದರು.

ರಾಜಸ್ಥಾನ ಪರ ಅಶ್ವಿನ್ 3 ವಿಕೆಟ್ ಪಡೆದು ಮಿಂಚಿದರು. ಉಳಿದಂತೆ ಟ್ರೆಂಟ್ ಬೌಲ್ಟ್, ಸಂದೀಪ್ ಶರ್ಮಾ, ಯುಜ್ವೇಂದ್ರ ಚಹಲ್ ತಲಾ ಒಂದೊಂದು ವಿಕೆಟ್ ಕಿತ್ತರು.

## ಡೆಲ್ಲಿ, ರಾಜಸ್ಥಾನ ಪಂದ್ಯದ ವೇಳೆ ಆಪ್ ಕಾರ್ಯಕರ್ತರಿಂದ ಪ್ರತಿಭಟನೆ



ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆಯುತ್ತಿರುವ ರಾಜಸ್ಥಾನ ರಾಯಲ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಐಪಿಎಲ್ ಪಂದ್ಯದ ವೇಳೆ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಬಂಧನ ವಿರೋಧಿಸಿ ಪ್ರತಿಭಟಿಸಿದ ಹಲವರನ್ನು ವಶಕ್ಕೆ ಪಡೆಯಲಾಗಿದೆ ಎಂದು ವರದಿಯಾಗಿದೆ.

ಪಂದ್ಯದ ವೇಳೆ ಆಪ್ ಕಾರ್ಯಕರ್ತರು ಘೋಷಣೆ ಕೂಗಿದ್ದಾರೆ ಎಂದು ತಿಳಿದು ಬಂದಿದೆ. ಸಾರ್ವಜನಿಕರಿಗೆ ತೊಂದರೆ ಉಂಟಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಅವರನ್ನು ವಶಕ್ಕೆ ಪಡೆಯಲಾಗಿದೆ. ಎಲ್ಲಾ ಪ್ರೇಕ್ಷಕರು ಆಟವನ್ನು ಆನಂದಿಸಲು ನಾವು ಪ್ರೋತ್ಸಾಹಿಸುತ್ತೇವೆ. ಕ್ರೀಡಾಂಗಣದಲ್ಲಿ ಪ್ರೇಕ್ಷಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ಪೊಲೀಸರನ್ನು ನಿಯೋಜಿಸಲಾಗಿದೆ. ಇಂತಹ ಘಟನೆಗಳಿಗೆ ಕ್ರೀಡಾಂಗಣದಲ್ಲಿ ಅವಕಾಶ ನೀಡುವುದಿಲ್ಲ ಎಂದು ಪೊಲಿಸರು ತಿಳಿಸಿದ್ದಾರೆ.

ಅಭಿಮಾನಿಗಳು ಕಂಬಿಯ ಹಿಂದೆ ಕೇಜ್ರಿವಾಲ್ ಅವರ ಫೋಟೋ ಇರುವ ಹಳದಿ ಟೀ ಶರ್ಟ್ ಧರಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

# ವೀಡಿಯೋದಲ್ಲಿ ನಮ್ಮ ಕುಟುಂಬದವರೇ ಇದ್ದರೂ ರಕ್ಷಣೆ ಮಾಡಲ್ಲ

**ಬೆಂಗಳೂರು:** ವೈರಲ್ ಆಗಿರುವ ವೀಡಿಯೋದಲ್ಲಿ ಯಾರೇ ಇದ್ರೂ ಕ್ರಮ.ನಮ್ಮ ಕುಟುಂಬದವರು ಇದ್ದರೂ ರಕ್ಷಣೆ ಮಾಡಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ.

ನಗರದಲ್ಲಿ ತುರ್ತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಇತ್ತೀಚೆಗೆ ಅತ್ಯಂತ ಕೆಟ್ಟ ರೀತಿಯ ಬೆಳವಣಿಗೆ ನಡೆದಿದೆ.ಸಮಾಜದಲ್ಲಿ ಉತ್ತಮ ಬದುಕು ಕಾಣಬೇಕು.ಅಂತಹ ಬದುಕಿಗೆ ಯಾವ ರೀತಿ ಧಕ್ಕೆ ಉಂಟಾಗಿದೆ.ಇದು ನೋವಿನ ಸಂಗತಿಯಾಗಿದೆ.ಏ.21 ರಂದು ಪೆನ್‌ಡ್ರೈವ್ ಅನ್ನು ಇಡೀ ರಾಜ್ಯಾದ್ಯಂತ ಬಿಡುಗಡೆ ಮಾಡಿದ್ರು.ಪೊಲೀಸ್ ಅಧಿಕಾರಿಗಳನ್ನ ಇಟ್ಟು ಹಂಚಿದ್ದಾರೆ.ಮಂಡ್ಯ, ಬೆಂಗಳೂರು ಗ್ರಾಮಾಂತರದಲ್ಲಿ ಸೇರಿ ಹಲವು ಕಡೆ ಮಾಡಿದ್ದಾರೆ ಎಂದು ದೂರಿದರು.

ಪೂರ್ಣ ಚಂದ್ರ, ಅಂತ ಪ್ರಜ್ವಲ್ ಏಜೆಂಟ್ ಇದ್ದರು.ಅವರು ಈ ಸಂಬಂಧ ಏಪ್ರಿಲ್ 22 ರಂದು ಹಾಸನ ಡಿಸಿಗೆ ದೂರು ಕೊಟ್ರು.ಚುನಾವಣೆ ಅಧಿಕಾರಿಗಳೂ ದೂರು ಕೊಟ್ಟಿದ್ದಾರೆ.21 ರಂದು ರಾತ್ರಿ ಪ್ರಜ್ವಲ್ ವಿಡಿಯೋ ಬಿಡುಗಡೆ ಕ್ಷಣಗಣನೆ ಅಂತ ಲಿಂಕ್ ಕೊಟ್ಟಿದ್ದಾರೆ. ವೀಡಿಯೋದಲ್ಲಿ ಯಾರೇ ಇದ್ದರೂ ರಕ್ಷಣೆ ಕೊಡಲ್ಲ. ನಮ್ಮ ಕುಟುಂಬದವರೇ ಆದರು ರಕ್ಷಣೆ ಮಾಡಲ್ಲ ಎಂದು ಹೆಚ್‌ಡಿಕೆ ಖಡಕ್ ಆಗಿ ತಿಳಿಸಿದ್ದಾರೆ.

ನೆಲದ ಕಾನೂನು ಪ್ರಕಾರ ಶಿಕ್ಷೆ ಆಗಲಿ.ನಮ್ಮ ನಾಡಿನ ತಾಯಂದಿರ ಮುಂದೆ ಹೇಳ್ತೀನಿ.ಯಾವ



ವ್ಯಕ್ತಿಯನ್ನೂ ನಾನು ರಕ್ಷಣೆ ಮಾಡಲ್ಲ. ವೀಡಿಯೋ ಬಿಡುಗಡೆ ಮಾಡ್ತೀನಿ ಅಂತ ನವೀನ್ ಗೌಡ ರಾತ್ರಿ 8ಕ್ಕೆ ಹೇಳಿದ್ದಾನೆ. ಪ್ರಜ್ವಲ್ ಏಜೆಂಟ್ ದೂರು ಕೊಟ್ಟ ಮೇಲೆ ಎಫ್‌ಐಆರ್ ದಾಖಲಾಗಿದೆ.ನವೀನ್, ಕಾರ್ತಿಕ್, ಚೇತನ್, ಪುಟ್ಟರಾಜು ಮೇಲೆ ದೂರು ಕೊಟ್ಟರು. ಎಫ್‌ಐಆರ್ ಹಾಕಿದ್ರೂ ಈ ಕ್ಷಣದವರೆಗೆ ಅವರ ಮೇಲೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ವಾಗ್ದಾಳಿ ನಡೆಸಿದರು.

ಏ. 24ರಂದು ಚುನಾವಣಾ ಆಯೋಗದವರು ಹಿಂಬರಹವನ್ನು ಕೊಟ್ಟಿದ್ದಾರೆ.ಏಜೆಂಟ್ ದೂರು ಕೊಟ್ಟ ಮೇಲೆ ಸರ್ಕಾರದ ಗಮನಕ್ಕೆ ಹೋಯ್ತು. ಇದಾದ ಮೇಲೆ ಹಾಸನದಲ್ಲಿ 25 ಸಾವಿರಕ್ಕೂ ಹೆಚ್ಚು ಪೆನ್ ಡ್ರೈವ್ ಹಂಚಿಕೆಯಾಗಿದೆ.ಪ್ರಜ್ವಲ್ ಏಜೆಂಟ್ ದೂರು ಕೊಟ್ಟ ಮೇಲೆ ಯಾವುದೇ ಕ್ರಮ ಆಗಿಲ್ಲ. ಇಂತಹ ದೊಡ್ಡ ಪ್ರಕರಣದ ಬಗ್ಗೆ ಈ ಕ್ಷಣದವರೆಗೆ 5 ಜನ ಮೇಲೆ ಆಕ್ಷನ್ ತಗೊಂಡಿಲ್ಲ. ಸಣ್ಣ ಪುಟ್ಟ ಕೇಸ್ ಗೆ ದೊಡ್ಡ ವಿಷಯ ಮಾಡೋರು ಈ ಕೇಸ್ ನಲ್ಲಿ ಕ್ರಮ ಮಾಡಿಲ್ಲ. ಪೆನ್ ಡ್ರೈವ್ ನಲ್ಲಿ ಯಾರ್ ಯಾರ್ ಪಾತ್ರ ಇದೆ.ಸತ್ಯ ಹೊರಗೆ ಬರಬೇಕು ಎಂದು ಹೆಚ್‌ಡಿಕೆ ಕಿಡಿಕಾರಿದರು.

ಪದೇ ಪದೇ ನನ್ನ ಬಗ್ಗೆ ಸಿಎಂ ಮಾತಾಡಿದ್ರು.ಡಿ.ಕೆ ಶಿವಕುಮಾರ್ ಏಕವಚನದಲ್ಲಿ ನನ್ನ ಬಗ್ಗೆ ಮಾತಾಡಿದ್ರು.ಮಹಿಳೆಯರು ಹೋರಾಟ ಮಾಡಿ ಅಂತ ಕರೆ ಕೊಟ್ರು.ಇದೆಲ್ಲ ಆದ ಮೇಲೆ ಏ.26 ಚುನಾವಣೆ ಅಗೋವರೆಗೆ ನಮ್ಮ ಏಜೆಂಟ್ ಕೊಟ್ಟ ದೂರಿನ ಮೇಲೆ ಯಾವುದೇ ಕ್ರಮ ಆಗಿಲ್ಲ. ಏ.25 ರಂದು ಮಹಿಳಾ ಆಯೋಗದ ಅಧ್ಯಕ್ಷೆ ವಿಶೇಷ ತಂಡ ರಚನೆ ಮಾಡುವಂತೆ ಸಿಎಂಗೆ ಪತ್ರ ಬರೆದಿದ್ದಾರೆ ಎಂದರು.

ಚಿತ್ರೀಕರಣ ಮಾಡಿದ ವ್ಯಕ್ತಿ ಮತ್ತು ಪೆನ್ ಡ್ರೈವ್ ಬಿಡುಗಡೆ ಮಾಡಿದವರ ಮೇಲೆ ಕ್ರಮ ಆಗಬೇಕು ಅಂತ ಪತ್ರ ಬರೆದರು. ಈ ಪತ್ರದಲ್ಲಿ ರೇವಣ್ಣ, ಪ್ರಜ್ವಲ್ ರೇವಣ್ಣ ಹೆಸರು ಇಲ್ಲ. ಆದರೂ ಸಿಎಂ, ಪ್ರಜ್ವಲ್ ರೇವಣ್ಣ ಅಂತ ಟ್ವೀಟ್ ಮಾಡ್ತಾರೆ.ಏ.27 ರಂದು ಸಿಎಂ ಎಸ್‌ಐಟಿ ರಚನೆ ಮಾಡಿದ್ರು.

28 ರಂದು ಬೆಂಗಳೂರಿನಲ್ಲಿ ಕುಳಿತುಕೊಂಡು ಡಿಜಿಟಲ್ ಮೂಲಕ ಇಲ್ಲಿ ಟೈಪ್ ಮಾಡಿ ಎರಡು ಹೆಣ್ಣು ಮಕ್ಕಳ ಹೆಸರಲ್ಲಿ ಹೊಳೆನರಸೀಪುರ ಸ್ಟೇಷನ್ ಗೆ ಕಳಿಸಿದ್ರು.ಎಸ್‌ಐಟಿ ಕೊಟ್ಟಾಗ ಪಾರದರ್ಶಕವಾಗಿ ನಡೆಯುತ್ತೆ ಅಂತಾ.ಆದರೆ ಆಮೇಲೆ ಗೊತ್ತಾಯ್ತು. ಎಸ್‌ಐಟಿ ಅಂದ್ರೆ, ಸಿದ್ದರಾಮಯ್ಯ ಇನ್ವೆಸ್ಟಿಕೇಷನ್ ಟೀಂ ಹಾಗೂ ಡಿಕೆಶಿವಕುಮಾರ್ ಇನ್ವೆಸ್ಟಿಂಗ್ ಟೀಂ ಆಗಿದೆ.ಇದು ನಿಜವಾದ ಎಸ್‌ಐಟಿ ಎಂದು ಹೆಚ್‌ಡಿಕೆ ಕಿಡಿಕಾರಿದರು.

# ಚುನಾವಣಾ ಬಿಸಿಯಿಂದ ರಿಲ್ಯಾಕ್ಸ್ ಮೂಡಿಗೆ ಸಿಎಂ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ಲೋಕಸಭಾ ಚುನಾವಣೆಯ ಬಿಸಿಯಿಂದ ರಿಲ್ಯಾಕ್ಸ್ ಮೂಡಿಗೆ ಜಾರಿದ್ದಾರೆ.ಅವರು ಹೆಚ್‌ಎಎಲ್‌ನಿಂದ ಮೈಸೂರಿಗೆ ಪ್ರಯಾಣ ಬೆಳೆಸಿ ಅಲ್ಲಿಂದ ಊಟಿಗೆ ತೆರಳಲಿದ್ದಾರೆ.ಮೂರು ದಿನಗಳ ಕಾಲ ಅವರು ವಿಶ್ರಾಂತಿ ಪಡೆಯಲಿದ್ದಾರೆ.

ಸಿದ್ದರಾಮಯ್ಯ ತೆರಳುವ ಮುನ್ನ ಸಚಿವರಿಂದ ಸಿಎಂ ಭೇಟಿ ನೀಡಿದ್ದಾರೆ. ಸಚಿವರಾದ ರಾಮಲಿಂಗಾರೆಡ್ಡಿ, ಮಹದೇವಪ್ಪ, ರಾಜಣ್ಣ ಅವರು ಭೇಟಿಯಾಗಿದ್ದು, ಅನೌಪಚಾರಿಕವಾಗಿ ಸಚಿವರ ಜೊತೆ ಸಿಎಂ ಚರ್ಚೆ ಮಾಡಿದ್ದಾರೆ.ಎರಡನೇ ಹಂತದ ಚುನಾವಣಾ ಮತದಾನ ಮತ್ತು ಪ್ರಸಕ್ತ ರಾಜಕೀಯ ಬೆಳವಣಿಗೆ ಹಾಗೂ ಪೆನ್ ಡ್ರೈವ್ ಪ್ರಕರಣದ ವಿಚಾರಗಳ ಬಗ್ಗೆ ಚರ್ಚಿಸಿದ್ದಾರೆ.

ಮನೆಯಿಂದ ಹೊರಟ ಸಿಎಂ ಕಾರ್ ಗ್ಲಾಸ್ ಇಳಿಸದೇ, ಮಾಧ್ಯಮಗಳಿಗೆ ಯಾವುದೇ ಪ್ರತಿಕ್ರಿಯೆ ನೀಡದೇ ತೆರಳಿದರು. ಊಟಿ ಪ್ರವಾಸದ ವೇಳೆ ಹೆಚ್.ಸಿ ಮಹದೇವಪ್ಪ ಸಿಎಂಗೆ ಸಾಥ್ ನೀಡಲಿದ್ದಾರೆ.

ಇತ್ತ ಡಿಸಿಎಂ ಡಿಕೆ ಶಿವಕುಮಾರ್ ಅವರು ಕುಟುಂಬದ ಸದಸ್ಯರ ಜೊತೆ ಚಿಕ್ಕಮಗಳೂರಿಗೆ ತೆರಳಿದ್ದು, ರೆಸಾರ್ಟ್‌ನಲ್ಲಿ ಕುಟುಂಬದ ಜೊತೆ ಎರಡು ದಿನ ಶಿವಕುಮಾರ್ ವಾಸ್ತವ್ಯ ಹೂಡಲಿದ್ದಾರೆ.ಅವರು ಚಿಕ್ಕಮಗಳೂರಿಗೆ ತೆರಳಬೇಕಿದ್ದ ಹೆಲಿಕಾಪ್ಟರ್‌ನಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸದಾಶಿವನಗರಕ್ಕೆ ವಾಪಸ್ ಆಗಿದ್ದಾರೆ.ಬಳಿಕ ರಸ್ತೆ ಮಾರ್ಗವಾಗಿ ಡಿಕೆಶಿ ಚಿಕ್ಕಮಗಳೂರಿಗೆ ತೆರಳಲಿದ್ದಾರೆ.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com